ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 171 ಸಂಚಿಕೆ- 171 | PAGE-8 ಪುಟ-8 | ಭಾನುವಾರ 17.08.2025 | RS.2/- ಬೆಲೆ 2/-

# ಉಪ ರಾಷ್ಟ್ರಪತಿ ಚುನಾವಣೆ : ಬಿಜೆಪಿ ಪಟ್ಟಿಯಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಹೆಸರು

ಮಲ್ಲಮ್ಮನುಡಿವಾರ್ತೆನವದೆಹಲಿ:ಅ.16: ಉಪ ರಾಷ್ಟ್ರಪತಿ ಚುನಾವಣೆಗೆ ಒಂದು ತಿಂಗಳಿಗಿಂತ ಕಡಿಮೆ ಅವಧಿ ಇರುವಂತೆಯೇ ಬಿಜೆಪಿ ತನ್ನ ಅಭ್ಯರ್ಥಿ ಅಂತಿಮಗೊಳಿಸುವ ನಿಟ್ಟಿನಲ್ಲಿ ಬಿಜೆಪಿ ಕಾರ್ಯೋನ್ಮುಖವಾಗಿದೆ. ಕರ್ನಾಟಕದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ , ದೆಹಲಿ ಲೆಫ್ಟಿನೆಂಟ್ ಗವರ್ನರ್ ವಿಕೆ ಸಕ್ಸೇನಾ ಮತ್ತು ಬಿಹಾರ ರಾಜ್ಯಪಾಲ ಅರಿಫ್ ಮೊಹಮ್ಮದ್ ಖಾನ್ ಸೇರಿದಂತೆ ಸಂಭಾವ್ಯ ಅಭ್ಯರ್ಥಿಗಳೊಂದಿಗೆ ಚರ್ಚೆಯನ್ನು ಆರಂಭಿಸಿದೆ.

ಸೆಪ್ಟೆಂಬರ್ 9 ರಂದು ನಡೆಯಲಿರುವ ಉಪ ರಾಷ್ಟ್ರಪತಿ ಚುನಾವಣೆಗೆ ಕರ್ನಾಟಕ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಗುಜರಾತ್ ರಾಜ್ಯಪಾಲ ಆಚಾರ್ಯ ದೇವವ್ರತ್, ಸಿಕ್ಕಿಂ ರಾಜ್ಯಪಾಲ ಓಂ ಮಥೂರ್ ಮತ್ತು ಜಮ್ಮು-ಕಾಶ್ಮೀರ ಮನೋಜ್ ಸಿನ್ಹಾ ಕೂಡಾ ಸಂಭಾವ್ಯ ಅಭ್ಯರ್ಥಿಗಳಾಗಿದ್ದಾರೆ.

ಆರ್‌ಎಸ್‌ಎಸ್ ವಿಚಾರವಾದಿ ಶೇಷಾದ್ರಿ ಚಾರಿ ಹೆಸರು ಕೂಡಾ ಕೇಳಿಬರುತ್ತಿದೆ. ಅಲ್ಲದೆ, ರಾಜ್ಯಸಭಾ ಉಪ ಸಭಾಪತಿ ಹರಿವಂಶ್



ಅವರನ್ನು ನಾಮನಿರ್ದೇಶಿತರನ್ನಾಗಿ ಪರಿಗಣಿಸಲಾಗಿದೆ. ಉಪ ರಾಷ್ಟ್ರಪತಿ ಚುನಾವಣೆ ಹಿನ್ನೆಲೆಯಲ್ಲಿ ಕಳೆದ ಒಂದು ತಿಂಗಳಲ್ಲಿ ಹಲವು ರಾಜ್ಯಪಾಲರು ಮತ್ತು ಲೆಫ್ಟಿನೆಂಟ್ ಗವರ್ನರ್‌ಗಳು ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರನ್ನು ಭೇಟಿ ಮಾಡಿ ಚರ್ಚಿಸಿರುವುದಾಗಿ ಮೂಲಗಳು ತಿಳಿಸಿವೆ.

ಈ ಸಂಬಂಧ ಅಗಸ್ಟ್ 17 ರಂದು ಬಿಜೆಪಿ ತನ್ನ ಸಂಸದೀಯ ಮಂಡಳಿ ಸಭೆ ಕರೆದಿದ್ದು ಈ ಸಭೆಯಲ್ಲಿ ಅಭ್ಯರ್ಥಿಯ ಆಯ್ಕೆ ತೀರ್ಮಾನವಾಗಲಿದೆ. ಇತ್ತ ಇಂಡಿಯಾ ಮೈತ್ರಿ ಅಗಸ್ಟ್ 18 ರಂದು ಸಭೆ ನಡೆಸುತ್ತಿದ್ದು, ಪ್ರತಿಸ್ಪರ್ಧಿ ಅಭ್ಯರ್ಥಿಯ ಆಯ್ಕೆಯಾಗಲಿದೆ.

## ಧರ್ಮಸ್ಥಳ ತಲೆಬುರುಡೆ ಕೇಸ್ ಬಿಜೆಪಿಯ ಸೃಷ್ಟಿ: ಈಶ್ವರ್ ಖಂಡ್ರೆ

ಮಲ್ಲಮ್ಮನುಡಿವಾರ್ತೆಬೀದರ್:ಅ.16: ಧರ್ಮಸ್ಥಳ ತಲೆಬುರುಡೆ ಪ್ರಕರಣ ಬಿಜೆಪಿಯ ಸೃಷ್ಟಿ ಎಂದು ಅರಣ್ಯ ಸಚಿವ ಈಶ್ವರ್ ಖಂಡ್ರೆ ಹೊಸ ಬಾಂಬ್ ಸಿಡಿಸಿದ್ದಾರೆ.

ಮಾಧ್ಯಮಗಳ ಜೊತೆ ಮಾತನಾಡಿದ ಉಸ್ತುವಾರಿ ಸಚಿವರು, ನಾನು ಒಂದು ವಿಷಯವನ್ನು ಹೇಳಲು ಬಯಸುತ್ತೇನೆ. ಸರ್ಕಾರದಿಂದ ಧರ್ಮಸ್ಥಳಕ್ಕೆ ಕಳಂಕ ಆಗುವುದಿಲ್ಲ. ಬಿಜೆಪಿಯವರೇ ಈ ಅನಾಮಿಕ

(2ನೇ ಪುಟ ನೋಡಿ)

## ಮನೆ ಕಳ್ಳತನ-ಆರೋಪಿಯಿಂದ ಆಭರಣ, ಹಣ ವಶಕ್ಕೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.16-ಜಿಲ್ಲೆಯ ಬಾದಾಮಿ ತಾಲೂಕಿನ ಹೆಬ್ಬಳ್ಳಿ ಗ್ರಾಮದಲ್ಲಿ ಆಗಷ್ಟ 2 ರಂದು ನಡೆದ ಮನೆ ಕಳ್ಳತನದ ಆರೋಪಿಯನ್ನು ಪೋಲಿಸರು ವಶಕ್ಕೆ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ.

ಟೇಲರಿಂಗ್ ಉದ್ಯೋಗಿ ಹೆಬ್ಬಳ್ಳಿ ಗ್ರಾಮದ ಸಣ್ಣಹೆಬ್ಬಳ್ಳೆವ್ವಯಮನಪ್ಪ ಮಾದರ ತನ್ನ ಮನೆ ಕಳ್ಳತನವಾದ ಬಗ್ಗೆ ಬಾದಾಮಿ ಪೋಲಿಸ್ ಠಾಣೆಗೆ ನೀಡಿದ್ದ ದೂರಿನನ್ವಯ ಕಳ್ಳರ ಪತ್ತೆಗಾಗಿ ಸಿಪಿಐ ಕೆ.ಬಿ.ಬನ್ನೇರ ನೇತೃತ್ವದಲ್ಲಿ ಪಿಎಸ್‌ಐಗಳಾದ ಎಚ್.ಕೆ.ನೆರಳೆ ಹಾಗೂ ವಿ.ಬಿ.ರಾಠೋಡ ಮತ್ತು ಸಿಬ್ಬಂದಿಯವರಾದ ಆರ್.ಆರ್.ಒಡೆಯರ, ಎ.ಎಸ್.ಚವ್ಹಾಣ, ಬಿ.ಎ.ವಾಲಿಕಾರ, ಎಸ್.ಬಿ.ಮುತ್ತಲಗೇರಿ, ಆರ್.ಎಸ್.ಕರಿಗಾರ, ಸಿ.ಎಸ್.ಕೋಟಿ ಅವರನ್ನೊಳಗೊಂಡು ತಂಡ ರಚಿಸಲಾಗಿತ್ತು.

ಈ ತಂಡ ತನಿಖೆ ಕೈಗೊಂಡು ಹೆಬ್ಬಳ್ಳಿ ಗ್ರಾಮದ ಚಂದ್ರಕಾಂತ ಚೋಳಪ್ಪ ಮಾದರ ಎಂಬಾತನನ್ನು ವಶಕ್ಕೆ ಪಡೆದು ಕೂಲಂಕುಶವಾಗಿ ವಿಚಾರಣೆ ಮಾಡಿ ಅವನಿಂದ 4 ಲಕ್ಷ 53 ಸಾವಿರ ರೂ. ಮೌಲ್ಯದ 76 ಗ್ರಾಂ ಬಂಗಾರದ ಆಭರಣ ಹಾಗೂ 10 ಸಾವಿರ ರೂ.ನಗದು ಹಣ ಪತ್ತೆ ಹಚ್ಚಿದ್ದಾರೆ.

ಪ್ರಕರಣದ ತನಿಖೆ ಕೈಗೊಂಡು ಶೀಘ್ರವಾಗಿ ಆರೋಪಿಯನ್ನು ಪತ್ತೆ ಹಚ್ಚಿದ ಪೋಲಿಸ್ ತಂಡದ ಕಾರ್ಯವೈಖರಿಯನ್ನು ಜಿಲ್ಲಾ ಪೋಲಿಸ್ ಅಧೀಕ್ಷಕರು, ಹೆಚ್ಚುವರಿ ಅಧೀಕ್ಷಕರು, ಹುನಗುಂದ ಡಿಎಸ್‌ಪಿ ಅವರು ಪ್ರಶಂಸಿದ್ದಾರೆ. ಸಣ್ಣಹೆಬ್ಬಳ್ಳೆವ್ವ ಯಮನಪ್ಪ ಮಾದರ, ತನ್ನ ಮನೆ ಕೀಲಿ ಮುರಿದು 69 ಗ್ರಾಂ ಬಂಗಾರದ ಆಭರಣ ಮತ್ತು 10 ಸಾವಿರ ರೂ.ನಗದು ಕಳುವಾದ ಬಗ್ಗೆ ಪೋಲಿಸರಿಗೆ ದೂರು ನೀಡಿದ್ದರು.

## ಬೆಂಗಳೂರು ಅಗ್ನಿ ದುರಂತದಲ್ಲಿ ಐದು ಮಂದಿ ಸಾವು



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅ.16: ಪ್ಲಾಸ್ಟಿಕ್ ಮ್ಯಾಟ್ ಅಂಗಡಿಯಲ್ಲಿ ಅಗ್ನಿ ಅವಘಡ ಸಂಭವಿಸಿ ಐವರು ಸಾವನ್ನಪ್ಪಿರುವಂತಹ ಘಟನೆ ಹಲಸೂರು ಗೇಟ್ ಪೊಲೀಸ್ ಠಾಣಾ ವ್ಯಾಪ್ತಿಯ ನಗರ್ತಪೇಟೆಯಲ್ಲಿ ನಡೆದಿದೆ.

ದುರಂತದಲ್ಲಿ ಮದನ್ (38), ಪತ್ನಿ ಸಂಗೀತಾ (33) ಮಿತೇಶ್ (8), ವಿಹಾನ್ (5) ಒಂದೇ ಕುಟುಂಬದವರು ಸಜೀವ ದಹನವಾಗಿದ್ದಾರೆ, ಮತ್ತೊಂದು ಮಹಡಿಯಲ್ಲಿ ಸುರೇಶ್ ಎಂಬವರೂ

(2ನೇ ಪುಟ ನೋಡಿ)



ಹುಮನಾಬಾದ:ಶ್ರೀ ಕೃಷ್ಣ ಜನ್ಮಾಷ್ಟಮಿಯಂಗವಾಗಿ ರಿಶಾಂಕ್ ರೆಡ್ಡಿ ಮುದ್ದು ಕೃಷ್ಣನ ವೇಷಧಾರಿಯಾಗಿ ಗಮನ ಸೆಳೆಯುತ್ತಿರುವುದು.

## ಮಾಹಿತಿ ಹಕ್ಕು ಅರ್ಜಿಗಳಿಗೆ ಉಡಾಫೆ ಬೇಡ, ಉತ್ತರ ನೀಡಿ



ಮಲ್ಲಮ್ಮನುಡಿವಾರ್ತೆರಾಯಚೂರು ಆ 16 : ಮಾಹಿತಿ ಕೋರಿ ಬರುವ ಅರ್ಜಿಗಳಿಗೆ ಉಡಾಫೆ ಮಾಡದೇ ಶೀಘ್ರ ಉತ್ತರ ನೀಡಿ ಅರ್ಜಿಗಳನ್ನು ವಿಲೇ ಮಾಡಬೇಕು ಎಂದು ಪೀಠ ಸಂಖ್ಯೆ 04ರ ರಾಜ್ಯ ಮಾಹಿತಿ ಆಯುಕ್ತರಾದ ರುದ್ರಣ್ಣ ಹರ್ತಿಕೋಟಿ ಹಾಗೂ ಪೀಠ ಸಂ

(2ನೇ ಪುಟ ನೋಡಿ)

## ಅದ್ದೂರಿ ಮೆರವಣಿಗೆ ಮೂಲಕ ಶ್ರೀಕೃಷ್ಣ ಜಯಂತಿ ಆಚರಣೆ



ಮಲ್ಲಮ್ಮನುಡಿವಾರ್ತೆಕೊಪ್ಪಳ:ಅ.16: ಶ್ರೀಕೃಷ್ಣ ಜಯಂತಿಯ ಅಂಗವಾಗಿ ಕೊಪ್ಪಳದಲ್ಲಿ ಶನಿವಾರ ಶ್ರೀಕೃಷ್ಣ ಭಾವಚಿತ್ರದ ಭವ್ಯ ಮೆರವಣಿಗೆ ಅದ್ದೂರಿಯಾಗಿ ಜರುಗಿತು. ಕೊಪ್ಪಳ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕೊಪ್ಪಳ ನಗರಸಭೆ ಸಹಯೋಗದಲ್ಲಿ ಭಗವಾನ್ ಶ್ರೀಕೃಷ್ಣ

(2ನೇ ಪುಟ ನೋಡಿ)

## ಲಂಚ ಪಡೆಯುವಾಗ ಲೋಕಾ ಬಲೆಗೆ ಬೀದರ್ ಡಿಎಚ್‌ಒ ಕಚೇರಿ ಅಧಿಕಾರಿ

ಮಲ್ಲಮ್ಮನುಡಿ ವಾರ್ತೆ ಬೀದರ. ಆ. 16 : 5 ಸಾವಿರ ಲಂಚ ಪಡೆಯುತ್ತಿದ್ದಾಗ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕಚೇರಿಯ ಎಚ್‌ಐಒ ಕ್ರಿಸ್ತ್‌ದಾಸ ಲೋಕಾಯುಕ್ತ ಪೊಲೀಸರ ಬಲೆಗೆ ಬಿದ್ದಿದ್ದಾರೆ.



'ಪೆಟ್ರೋಲ್ ಬಂಕ್‌ಗೆ ಎನ್‌ಒಸಿ ಕೊಡಲು 5 ಸಾವಿರ ಲಂಚಕ್ಕೆ ಬೇಡಿಕೆ ಇಟ್ಟಿದ್ದರು.

ಮಾಹಿತಿ ಮೇರೆಗೆ ದಾಳಿ ನಡೆಸಿ, ಹಣದ ಸಮೇತ ಶುಕ್ರವಾರ ವಶಕ್ಕೆ ಪಡೆಯಲಾಗಿದೆ' ಎಂದು ಲೋಕಾಯುಕ್ತ ಪೊಲೀಸ್ ಮೂಲಗಳು ತಿಳಿಸಿವೆ.

ಲೋಕಾಯುಕ್ತ ಡಿವೈಎಸ್‌ಪಿ ಹನುಮಂತರಾಯ್ ನೇತೃತ್ವದಲ್ಲಿ ಈ ದಾಳಿ ನಡೆಸಲಾಗಿದೆ.

## ಅಂಗಾಂಗ ದಾನ ಕುಟುಂಬದವರಿಗೆ ಗೌರವ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,ಆ.16:ಸಂಡೂರು ತಾಲ್ಲೂಕಿನ ದರೋಜಿ ಗ್ರಾಮದ ಕೃಷ್ಣ.ವಿ (35 ವರ್ಷ) ಅವರು ಇತ್ತೀಚೆಗೆ ಆಕಸ್ಮಿಕ ರಸ್ತೆ ಅಪಘಾತ ಸಂಭವಿಸಿ ಮೆದುಳು ನಿಷ್ಕ್ರಿಯಗೊಂಡು ಮರಣ ಹೊಂದಿದ್ದರು. ಕುಟುಂಬದವರು ಮೃತ ಕೃಷ್ಣನ ಅಂಗಾಂಗಗಳಾದ ಯಕೃತ್ ಶ್ವಾಸಕೋಶ, ಮೂತ್ರ ಪಿಂಡ ಮತ್ತು ಕಣ್ಣುಗಳು ದಾನ ಮಾಡಿ ಇನ್ನೊಬ್ಬರ ಜೀವ ಉಳಿವಿಗೆ ಸಾರ್ಥಕತೆ ಮೆರೆದಿದ್ದಾರೆ.

ಶುಕ್ರವಾರ ಜಿಲ್ಲಾಡಳಿತದಿಂದ ಹಮ್ಮಿಕೊಂಡಿದ್ದ 79ನೇ ಸ್ವಾತಂತ್ರ ದಿನಾಚರಣೆ ಕಾರ್ಯಕ್ರಮದಲ್ಲಿ

(2ನೇ ಪುಟ ನೋಡಿ)



## ಇಂದು ಭಾರತಕ್ಕೆ ಶುಭಾಂಶು ಶುಕ್ಲಾ

ಮಲ್ಲಮ್ಮನುಡಿವಾರ್ತೆನವದೆಹಲಿ: ಅ.16:ಆಕ್ಸಿಯಂ ಸ್ಪೇಸ್ ಮಿಷನ್ ಬಳಿಕ ಮೊದಲ ಬಾರಿಗೆ ತವರು ನೆಲ ಭಾರತಕ್ಕೆ ಗಗನಯಾತ್ರಿ ಶುಭಾಂಶು ಶುಕ್ಲಾ ಅವರು ಭಾನುವಾರ ಮರಳಿದ್ದಾರೆ.

ಈ ವೇಳೆ ಪ್ರಧಾನಿ ಮೋದಿಯನ್ನು ಭೇಟಿಯಾಗಲಿದ್ದಾರೆ. ನಂತರ ತಮ್ಮ ತವರೂರಾದ ಉತ್ತರ ಪ್ರದೇಶದ ಲಖನೌಗೆ ತೆರಳಿದ್ದಾರೆ ಎಂದು ಮೂಲಗಳು ತಿಳಿಸಿವೆ. 2027ರಲ್ಲಿ ಇಸ್ರೋ ತನ್ನ ಮೊದಲ ಮಾನವ ಸಹಿತ ಬಾಹ್ಯಾಕಾಶ ಗಗನಯಾನವನ್ನು ಎದುರು ನೋಡುತ್ತಿರುವುದರಿಂದ ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಐತಿಹಾಸಿಕ ಭೇಟಿ ನೀಡಿದ್ದ ಶುಕ್ಲಾ ಅವರು ತಮ್ಮ ಅನುಭವಗಳನ್ನು ಸ್ನೇಹಿತರು ಹಾಗೂ ಸಹೋದ್ಯೋಗಿಗಳೊಂದಿಗೆ ಹಂಚಿಕೊಳ್ಳಲಿದ್ದಾರೆ. ಇದೀಗ ಶುಭಾಂಶು



ಶುಕ್ಲಾ ಅವರು ವಿಮಾನದಲ್ಲಿ ಕುಳಿತಿರುವ ಫೋಟೋವನ್ನು ಇನ್ಸ್ಟಾಗ್ರಾಂನಲ್ಲಿ ಹಂಚಿಕೊಂಡಿದ್ದಾರೆ. ಅಲ್ಲದೇ ಈ ಪೋಸ್ಟ್‌ನಲ್ಲಿ ಅವರು, ನಾನು ಭಾರತಕ್ಕೆ ಹಿಂತಿರುಗಲು ವಿಮಾನದಲ್ಲಿ ಕುಳಿತಾಗ, ನನ್ನ ಹೃದಯದಲ್ಲಿ ಮಿಶ್ರ ಭಾವನೆ ಉಂಟಾಗಿದೆ. ಕಳೆದ ಒಂದು ವರ್ಷದಿಂದ ಈ ಕಾರ್ಯಾಚರಣೆಯ ಸಮಯದಲ್ಲಿ ನನ್ನ ಸ್ನೇಹಿತರು ಮತ್ತು ಕುಟುಂಬವಾಗಿದ್ದ ಅದ್ಭುತ ಜನರನ್ನು ಬಿಟ್ಟು ಹೋಗುವುದು ನನಗೆ ದುಃಖ ತಂದಿದೆ. ಹಾಗೆಯೇ ಕಾರ್ಯಾಚರಣೆಯ ನಂತರ ಮೊದಲ ಬಾರಿಗೆ ನನ್ನ ಎಲ್ಲಾ ಸ್ನೇಹಿತರು, ಕುಟುಂಬ ಮತ್ತು ದೇಶದ ಪ್ರತಿಯೊಬ್ಬರನ್ನು ಭೇಟಿಯಾಗಲು ತುಂಬಾ ಉತ್ಸುಕನಾಗಿದ್ದೇನೆ. ಜೀವನ ಎಂದರೆ ಇದೇ ಎಂದು ನಾನು ಭಾವಿಸುತ್ತೇನೆ ಎಂದು ಬರೆದು-ಕೊಂಡಿದ್ದಾರೆ.

ಆಗಸ್ಟ್ 22-23 ರಂದು ನಡೆಯಲಿರುವ ರಾಷ್ಟ್ರೀಯ ಬಾಹ್ಯಾಕಾಶ ದಿನಾಚರಣೆಯಲ್ಲಿ ಭಾಗವಹಿಸಲು ಶುಕ್ಲಾ ಅವರು ರಾಜಧಾನಿಗೆ ಹಿಂತಿರುಗುವ ನಿರೀಕ್ಷೆಯಿದೆ ಎನ್ನಲಾಗಿದೆ.

## ಪ್ರಜಾಸೌಧ ಜಿಲ್ಲಾಡಳಿತ ಸಂಕೀರ್ಣಕ್ಕೆ ಪೂಜೆ



ಮಲ್ಲಮ್ಮ ನುಡಿ ವಾರ್ತೆ ಬೀದರ, ಅ 16 : ಕಳೆದ 15 ವರ್ಷಗಳಿಂದ ಜಿಲ್ಲೆಯ ಸಾರ್ವಜನಿಕರ ಬೇಡಿಕೆ-ಯಾಗಿದ್ದ ಸುಸಜ್ಜಿತ ಜಿಲ್ಲಾಡಳಿತ ಸಂಕೀರ್ಣ ನಿರ್ಮಾಣಕ್ಕೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಹಾಗೂ ಪೌರಾಡಳಿತ ಸಚಿವರಾದ ರಹೀಮ್ ಖಾನ್ ಇಂದು ಹಳೆಯ ಜಿಲ್ಲಾಧಿಕಾರಿಗಳ ಆವರಣದಲ್ಲಿ ಪೂಜೆ ಸಲ್ಲಿಸುವುದರ ಮೂಲಕ ಚಾಲನೆ ನೀಡಿದರು.

ನಂತರ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡುತ್ತಾ, ಕಳೆದ ಏಪ್ರಿಲ್.16 ರಂದು ಮುಖ್ಯಮಂತ್ರಿಗಳು ಜಿಲ್ಲಾಡಳಿತ ಸಂಕೀರ್ಣಕ್ಕೆ ಶಂಕುಸ್ಥಾಪನೆ ನೆರವೇರಿಸಿದ್ದರು.

(2ನೇ ಪುಟ ನೋಡಿ)

## ಒಂದನೇ ಪುಟದಿಂದ

# ಬಿಜೆಪಿಯ ಸೃಷ್ಟಿ: ಈಶ್ವರ್ ಖಂಡ್ರೆ

ವ್ಯಕ್ತಿಯನ್ನು ಸೃಷ್ಟಿ ಮಾಡಿದ್ದಾರೆ. ಸ್ವಾರ್ಥಕ್ಕಾಗಿ ಬಿಜೆಪಿಯವರು ಇಂಥವರನ್ನು ಸೃಷ್ಟಿ ಮಾಡುವುದನ್ನು ನಾವು ನೋಡಿದ್ದೇವೆ ಎಂದು ಹೇಳಿದರು. ಬಿಜೆಪಿಯವರು ಅವರ ಸ್ವಾರ್ಥಕ್ಕಾಗಿ ಸೃಷ್ಟಿ ಮಾಡಿ ತನಿಖೆ ಮಾಡಿ ಎಂದು ಹೇಳುತ್ತಾರೆ. ತನಿಖೆ ಮಾಡುವಾಗ ಅದರ ದಾರಿ ತಪ್ಪಿಸುವ ಕೆಲಸ ಮಾಡತ್ತಾರೆ. ಧರ್ಮಸ್ಥಳಕ್ಕೆ ಕಳಂಕ ತರುವ ಯಾವ ಮನಸ್ಸು ನಮಗಿಲ್ಲ. ನಾವು ನಿಷ್ಪಕ್ಷಪಾತವಾಗಿ ತನಿಖೆ ಮಾಡಿ ಕ್ರಮ ತೆಗೆದುಕೊಳ್ಳುತ್ತೇವೆ ಎಂದು ತಿಳಿಸಿದರು.

ನಾವು ಗ್ಯಾರಂಟಿ ನೀಡಿ ಅಭಿವೃದ್ಧಿ ಮಾಡುತ್ತಿದ್ದು ರಾಜ್ಯದಲ್ಲಿ ಕಾಂಗ್ರೆಸ್ ಜನಪ್ರಿಯತೆ ಹೆಚ್ಚಾಗುತ್ತಿದೆ. ಆದರೆ ಬಿಜಪಿಯವರು ಹೊಟ್ಟೆ ಕಿಚ್ಚಿನಿಂದ ಇಲ್ಲ ಸಲ್ಲದ ಆರೋಪಗಳನ್ನು ಮಾಡತ್ತಿದ್ದಾರೆ. ನಾನು ಧರ್ಮಸ್ಥಳಕ್ಕೆ ಹಲವಾರು ಬಾರಿ ಹೋಗಿ ಮಂಜುನಾಥ ದೇವರ ಆಶೀರ್ವಾದ ಪಡೆದಿದ್ದೇನೆ ಎಂದು ಹೇಳಿದರು.

ಬುರುಡೆ ಪ್ರಕರಣದಲ್ಲಿ ನಾವು ರಾಜಕೀಯ ಮಾಡುವ ಉದ್ದೇಶ ಇಲ್ಲ. ದೂರು ಬಂದ ಹಿನ್ನೆಲೆಯಲ್ಲಿ ಸತ್ಯಾಸತ್ಯತೆ ನೋಡಿಕೊಂಡು ಮುಂದಿನ ಕಾನೂನು ಕ್ರಮ ತೆಗೆದುಕೊಳ್ಳುತ್ತೇವೆ ಎಂದು ನುಡಿದರು.

# ಸಂಕೀರ್ಣಕ್ಕೆ ಪೂಜೆ

ಇಂದು ಔಪಚಾರಿಕವಾಗಿ ಪೂಜೆ ಸಲ್ಲಿಸಿ ಭವ್ಯ ಸುಸಜ್ಜಿತ ಕಟ್ಟಡ ನಿರ್ಮಾಣಕ್ಕೆ ಯಾವುದೇ ಅಡೆತಡೆ ಬರದಂತೆ ಸುಲಲಿತವಾಗಿ ಕಾಮಗಾರಿ ಪೂರ್ಣಗೊಳ್ಳುವ ನಿಟ್ಟಿನಲ್ಲಿ ಕೃಷ್ಣ ಜನ್ಮಾಷ್ಟಮಿ ದಿನದಂದು ಚಾಲನೆ ನೀಡಲಾಗಿದೆ ಎಂದರು. ಮೊದಲ ಹಂತದಲ್ಲಿ 8 ಕಚೇರಿಗಳ ಕಟ್ಟಡಗಳು ಆರಂಭವಾಗಲಿದೆ, ಎರಡನೇ ಹಂತದಲ್ಲಿ ಉಳಿದ ಕಚೇರಿಗಳನ್ನು ಸಹ ಆರಂಭಿಸಲಾಗುವುದು. ಕೊಟ್ಟ ಮಾತಿನಂತೆ ನಡೆಯುತ್ತಿದ್ದೇವೆ. ಬರುವ ದಿನಗಳಲ್ಲಿ ಭವ್ಯ ಕ್ರೀಡಾಂಗಣವನ್ನು ಸಹ ನಿರ್ಮಿಸಲಾಗುವುದು. ಬೀದರನ್ನು ಮಹಾನಗರ ಪಾಲಿಕೆಯನ್ನಾಗಿ ಘೋಷಿಸಲಾಗಿದ್ದು ಹೆಚ್ಚಿನ ಅನುದಾನ ತರಲಾಗುವುದು. ಸ್ವಚ್ಛ ಸುಂದರ, ಹಸಿರು ಬೀದರ ನಿರ್ಮಿಸಲು ಸರಕಾರ ಬದ್ಧವಾಗಿದೆ. ಹಸಿರು ಹೆಚ್ಚಿಸಲು ಪ್ಲಾಸ್ಟಿಕಮುಕ್ತ ಬೀದರಕ್ಕೆ ಸಾರ್ವಜನಿಕರು ಕೈಜೊಡಿಸಬೇಕೆಂದು ಸಚಿವ ಈಶ್ವರ ಬಿ.ಖಂಡ್ರೆ ನುಡಿದರು. ಸಚಿವರಾದ ರಹೀಮ್‌ಖಾನ್ ಮಾತನಾಡಿ, ಉತ್ತಮ ಸುಸಜ್ಜಿತ ಭವ್ಯ ಪ್ರಜಾಸೌಧ ನಿರ್ಮಿಸುವುದು, ಮಹಾನಗರ ಪಾಲಿಕೆಗೆ 200 ಕೋಟಿ ರೂ. ಅನುದಾನ ನೀಡುವಂತೆ ಮುಖ್ಯಮಂತ್ರಿಗಳಿಗೆ ವಿನಂತಿಸಲಾಗಿದೆ. ಐಎಎಸ್ ಅಧಿಕಾರಿಯನ್ನು ಹಾಗೂ 400 ಸಿಬ್ಬಂದಿಗಳ ನೇಮಕಕ್ಕೂ ಸಹ ಕ್ರಮಕೈಗೊಳ್ಳಲಾಗುತ್ತಿದೆ. ಅಭಿವೃದ್ಧಿಯ ಜೊತೆ ಪ್ರೀತಿ, ವಿಶ್ವಾಸ ಸೌಹಾರ್ದತೆಯನ್ನು ಬಾಳುವಂತೆ ನೋಡಿಕೊಳ್ಳಲಾಗುತ್ತಿದೆ ಎಂದರು.

ಶಾಸಕರಾದ ಡಾ.ಶೈಲೇಂದ್ರ ಕೆ.ಬೆಲ್ದಾಳೆ ಅವರು ಮಾತನಾಡಿ, ಗುತ್ತಿಗೆದಾರರು ನಿಗದಿತ ಅವಧಿಯೊಳಗೆ ಉತ್ತಮ ಗುಣಮಟ್ಟದ ಪ್ರಜಾಸೌಧ ನಿರ್ಮಿಸಲಿಯೆಂದರು. ಸಾರ್ವಜನಿಕರು ಸೆಲ್ಪಿ ತೆಗೆದುಕೊಳ್ಳುವಂತಹ ಮಾದರಿ ಬೃಹತ್ ಕಟ್ಟಡ ನಿರ್ಮಾಣವಾಗಲಿ ಎಂದರು. ಈ ಸಂದರ್ಭದಲ್ಲಿ ನಗರಸಭೆ ಅಧ್ಯಕ್ಷ ಮಹಮ್ಮದ ಗೌಸ್, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ, ಅಪರ ಜಿಲ್ಲಾಧಿಕಾರಿ ಶಿವಾನಂದ ಕರಾಳೆ, ಲೋಕೋಪಯೋಗಿ ಇಲಾಖೆ ಇಇ ಶಿವಶಂಕರ ಕಾಮಶೆಟ್ಟಿ ವೇದಿಕೆಯಲ್ಲಿ ಪಾಲ್ಗೊಂಡಿದ್ದರು.

# ಐದು ಮಂದಿ ಸಾವು

ಸುಟ್ಟು ಕರಕಲಾಗಿದ್ದಾರೆ.ಘಟನಾ ಸ್ಥಳಕ್ಕೆ ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಭೇಟಿ ನೀಡಿ ಪರಿಶೀಲಿಸಿದ್ದಾರೆ. ರಾತ್ರಿ 2.30ರ ಸುಮಾರಿಗೆ ಅಗ್ನಿ ಅವಗಢ ಸಂಭವಿಸಿದ ಮಾಹಿತಿ ಬಂತು. ಅಗ್ನಿಶಾಮಕ ದಳದವರು ಹಾಗೂ ನಮ್ಮ ಪೊಲೀಸರು ಪರಿಶೀಲನೆ ಮಾಡುತ್ತಿದ್ದಾರೆ.

ಗ್ರೌಂಡ್ ಫ್ಲೋರ್ ನಲ್ಲಿರುವ ಗೋಡೌನ್ ನಲ್ಲಿ ಬೆಂಕಿ ಕಾಣಿಸಿಕೊಂಡಿತ್ತು. ನಂತರ ಅದು ಮೇಲಿನ ಫ್ಲೋರ್ ಗಳಿಗೆ ಆವರಿಸಿದೆ. ಬೆಂಕಿ ಹೊತ್ತಿಕೊಂಡ ಕೂಡಲೇ ಕಟ್ಟಡದಲ್ಲಿದ್ದ ಬಹುತೇಕ ಜನ ಓಡಿ ಹೋಗಿದ್ದಾರೆ. ಆದರೆ ದುರಾದೃಷ್ಟವಂತ ಕುಟುಂಬ ಬೆಂಕಿಗೆ ಆಹುತಿಯಾಗಿದೆ.ರಕ್ಷಣಾ ಕಾರ್ಯಾಚರಣೆ ಮುಂದುವರಿಸಲಾಗಿದೆ. ಅಗ್ನಿಶಾಮಕ ಸಿಬ್ಬಂದಿ, ವಿಧಿವಿಜ್ಞಾನ ಪ್ರಯೋಗಾಲಯ ಅಧಿಕಾರಿಗಳು ಹಾಗೂ ನಮ್ಮ ರಕ್ಷಣಾ ತಂಡದವರು ಕಾರ್ಯಾಚರಣೆ ಮಾಡ್ತಿದ್ದಾರೆ. ಇನ್ನು ಮೃತದೇಹಗಳು ಇರುವ ಶಂಕೆ ಇದೆ ಎಂದು ತಿಳಿಸಿದ್ದಾರೆ.

ಕೆ. ಆರ್ ಮಾರ್ಕೆಟ್ ಬಳಿಯ ನಗರ್ತಪೇಟೆಯ ವಾಣಿಜ್ಯ ಕಟ್ಟಡದಲ್ಲಿದ್ದ ಮಹಡಿ ಮನೆಯಲ್ಲಿ ತಡರಾತ್ರಿ ಬೆಂಕಿ ಕಾಣಿಸಿಕೊಂಡಿತ್ತು. ವಿಷಯ ತಿಳಿಯುತ್ತಿದ್ದಂತೆ ಸ್ಥಳಕ್ಕೆ ದೌಡಾಯಿಸಿದ್ದ ಅಗ್ನಿಶಾಮಕ ಸಿಬ್ಬಂದಿ ರಕ್ಷಣಾ ಕಾರ್ಯದಲ್ಲಿ ತೊಡಗಿದ್ದಾರೆ. ಸ್ಥಳದಲ್ಲಿ ಅಂಬುಲೆನ್ಸ್‌ಗಳನ್ನ ನಿಯೋಜನೆ ಮಾಡಲಾಗಿದೆ. ಇನ್ನೂ ಸ್ಥಳಕ್ಕೆ ಭೇಟಿ ನೀಡಿದ ಸಚಿವ ಜಮೀರ್ ಅಹ್ಮಮದ್ ಮೃತರ ಕುಟುಂಬಕ್ಕೆ ಪರಿಹಾರ ಘೋಷಿಸಿದ್ದಾರೆ. ಇದು ವಯಕ್ತಿಕ ಪರಿಹಾರವಾಗಿದ್ದು ಸರ್ಕಾರದಿಂದಲೂ ಸಂತ್ರಸ್ತರ ಕುಟುಂಬಕ್ಕೆ ಪರಿಹಾರ ಕೊಡಿಸುವ ಭರವಸೆ ನೀಡಿದ್ದಾರೆ.

ಸದ್ಯ ಸ್ಥಳಕ್ಕೆ ಚಿಕ್ಕಪೇಟೆ ಶಾಸಕ ಉದಯ್ ಗರುಡಾಚಾರ್ ಮತ್ತು ಪೂರ್ವ ವಿಭಾಗ ಜಂಟಿ ಪೊಲೀಸ್ ಆಯುಕ್ತ ವಂಶಿಕೃಷ್ಣ ಭೇಟಿ ನೀಡಿ ಪರಿಶೀಲನೆ ಮಾಡಿದರು. ಕಟ್ಟಡದ ಬಳಿ ದಟ್ಟ ಹೊಗೆ ಆವರಿಸಿಕೊಂಡಿದೆ. ಹೊಗೆಯಿಂದಾಗಿ ಅಗ್ನಿಶಾಮಕ ಸಿಬ್ಬಂದಿ ಕಾರ್ಯಾಚರಣೆಗೂ ಕಷ್ಟವಾಗುತ್ತಿದೆ. ಪ್ಲಾಸ್ಟಿಕ್ ವಸ್ತು ಇರುವುದರಿಂದ ಕಟ್ಟಡದ ಒಳಗೆ ಹೊಗೆ ಆವರಿಸಿಕೊಂಡಿದೆ.

# ಕುಟುಂಬದವರಿಗೆ ಗೌರವ ಸನ್ಮಾನ

ಪೌರಾಡಳಿತ ಮತ್ತು ಹಜ್ ಸಚಿವ ರಹೀಂ ಖಾನ್ ಅವರು ಕೃಷ್ಣ.ವಿ ಅವರ ತಂದೆಯಾದ ಟಿ.ವೆಂಕಟೇಶ್ ಅವರಿಗೆ ಸನ್ಮಾನಿಸಿ ಗೌರವ ಸಲ್ಲಿಸಿದರು.ಈ ವೇಳೆ ಸಂಸದ ಈ.ತುಕಾರಾಮ್, ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ, ಡಾ.ಬಾಬು ಜಗಜೀವನ ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ್, ಮಹಾನಗರ ಪಾಲಿಕೆಯ ಮೇಯರ್ ಮುಲ್ಲಂಗಿ ನಂದೀಶ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಬಳ್ಳಾರಿ ವಲಯ ಪೊಲೀಸ್ ಮಹಾನೀರಿಕ್ಷಕರಾದ ವರ್ತಿಕ ಕಟಿಯಾರ್, ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಜಿಲ್ಲಾ ಪಂಚಾಯತ್ ಸಿಇಒ ಮಹಮ್ಮದ್ ಹ್ಯಾರೀಸ್ ಸುಮ್ಮೈರ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ.ಕೆ.ಎನ್.ಬಸವರಾಜ, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್, ಸಹಾಯಕ ಆಯುಕ್ತ ಪಿ.ಪ್ರಮೋದ್ ಸೇರಿದಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ಜಿಲ್ಲಾ ಆಶ್ರೀತ ರೋಗಗಳ ನಿಯಂತ್ರಾಧಿಕಾರಿ ಡಾ.ಆರ್.ಅಬ್ದುಲ್ಲಾ ಹಾಗೂ ಇನ್ನೀತರರು ಇದ್ದರು.

# ಉಡಾಫೆ ಬೇಡ, ಉತ್ತರ ನೀಡಿ

ಖ್ಯೆ 05ರ ರಾಜಶೇಖರ ಎಸ್ ಅವರು ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಮತ್ತು ಪ್ರಥಮ ಮೇಲ್ಮನವಿ ಪ್ರಾಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಆಗಸ್ಟ್ 16ರಂದು ನಗರದ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ನಡೆದ ತರಬೇತಿ ಕಾರ್ಯಾಗಾರದಲ್ಲಿ ಮಾತನಾಡಿದ ರುದ್ರಣ್ಣ ಹರ್ತಿಕೋಟಿ, ಆಯೋಗವು ಮಾಹಿತಿ ಹಕ್ಕು ಕಾಯಿದೆಯನ್ವಯ ನಿಯಮದಂತೆ 30 ದಿನಗಳಲ್ಲಿ ಮಾಹಿತಿ ನೀಡಿದಿದ್ದರೆ ಉಚಿತವಾಗಿ ನೀಡಬೇಕಾಗುತ್ತದೆ. ಇದು ಸರ್ಕಾರಕ್ಕೆ ಹೊರೆಯಾಗುತ್ತದೆ. ಆದ್ದರಿಂದ ಲಭ್ಯವಿರುವ ಮಾಹಿತಿ ಕೊಡಬೇಕು. ಯಾವುದನ್ನು ಸಹ ಕ್ರೋಢಿಕರಿಸಿ ನೀಡಬೇಕಾಗಿಲ್ಲ ಎಂದು ತಿಳಿಸಿದರು.ಸಾರ್ವಜನಿಕ ಪ್ರಾಧಿಕಾರಗಳಲ್ಲಿ ಸಾರ್ವಜನಿಕ ಮಾಹಿತಿ ಅಧಿಕಾರಿ ನೇಮಕವಾಗಿರುತ್ತಾರೆ. ಆ ಮಾಹಿತಿ ಅಧಿಕಾರಿಯು ಮೊದಲು ಯಾವುದು ಮಾಹಿತಿ, ಯಾವುದು ಮಾಹಿತಿಯಲ್ಲ ಎಂಬುದನ್ನು ಅರ್ಥ ಮಾಡಿಕೊಳ್ಳಬೇಕು. ಅರ್ಜಿಗಳಿಗೆ ನಿಗದಿತ ಕಾಲಾವಧಿಯಲ್ಲಿ ಮಾಹಿತಿ ನೀಡಿದರೆ ಅದರಿಂದ ಬ್ಲಾಕ್ ಮೇಲಗರ್‌ಗಳು ಹುಟ್ಟಿಕೊಳ್ಳುವುದಿಲ್ಲ. ನಿಮ್ಮಲ್ಲಿ ಲಭ್ಯವಿರುವ ಮಾಹಿತಿಯನ್ನು ಮೊದಲು ನೀಡಿ, ಯಾವುದೇ ಅರ್ಜಿಯ ಬಗ್ಗೆ ಉದಾಸೀನ ಮಾಡಲು ಹೋಗಬೇಡಿ ಎಂದು ತಿಳಿಸಿದರು. ರಾಜ್ಯ ಮಾಹಿತಿ ಆಯೋಗವು ಗಮನಿಸಿದಂತೆ ಅನೇಕ ಪಿಐಒಗಳು ನಿಯಮಗಳನ್ನು ಸರಿಯಾಗಿ ಓದುವುದಿಲ್ಲ. ಹೀಗೆ ಆಗಬಾರದು ಎಂದು ಆಯುಕ್ತರಾದ ರುದ್ರಣ್ಣ ಹರ್ತಿಕೋಟಿ ಅವರು ಎಚ್ಚರಿಕೆ ನೀಡಿದರು.

ನಿಗದಿತ ಅವಧಿಯೊಳಗೆ ಮಾಹಿತಿ ಒದಗಿಸದಿದ್ದ ಪಕ್ಷದಲ್ಲಿ ಮಾಹಿತಿ ಒದಗಿಸದ ಅಧಿಕಾರಿಗಳ ಮೇಲೆ ದಂಡ ವಿಧಿಸಲು ಕಾಯಿದೆಯಲ್ಲಿಯೇ ಅವಕಾಶವಿದೆ. ಒಂದು ದಿನಕ್ಕೆ 250 ರೂ. ದಂತೆ 100 ದಿನಗಳವರೆಗೆ ದಂಡ ವಿಧಿಸಲು ಅವಕಾಶವಿದೆ. ಮಾಹಿತಿ ಒದಗಿಸಲು ವಿಳಂಬ ಮಾಡಿರುವುದು ಗೊತ್ತಾದಲ್ಲಿ ಕನಿಷ್ಟ 25 ಸಾವಿರ ರೂ. ವರೆಗೆ ದಂಡ ವಿಧಿಸಲು ಅವಕಾಶವಿದೆ. ಅರ್ಜಿದಾರರಿಗೆ ನಷ್ಟವಾಗಿದ್ದಲ್ಲಿ ಪರಿಹಾರ ಕೂಡ ಕೊಡಿಸಬಹುದಾಗಿದೆ. ಅರ್ಜಿದಾರರಿಗೆ 1 ಲಕ್ಷ ರೂ.ವರೆಗೆ ಪರಿಹಾರ ಕೊಡಿಸಿದ ಉದಾಹರಣೆಗಳಿವೆ. ಈ ರೀತಿಯ ದಂಡ ವಿಧಿಸಿದ ಪ್ರಕರಣಗಳು ಆಯೋಗದಲ್ಲಿ ಸಾಕಷ್ಟಿವೆ ಎಂದು ತಿಳಿಸಿದರು.

ಅರ್ಜಿದಾರರು ಕೇಳಿದಾಕ್ಷಣ ನಾವು ದಂಡ ವಿಧಿಸುವುದಿಲ್ಲ. ಅಧಿಕಾರಿಗಳಿಗೆ ಮೂರು ಬಾರಿ ಅವಕಾಶ ಕೊಡುತ್ತೇವೆ. ಮೂರು ಬಾರಿಯು ಅವರು ಬರದೇ ಇದ್ದಾಗ, ಮಾಹಿತಿಯನ್ನು ಕೊಡದೇ ಇದ್ದಾಗ ಮಾತ್ರ ದಂಡ ಹಾಕುವ ಪ್ರಯೋಗ ನಡೆಯುತ್ತದೆ. ದಂಡ ಹಾಕಿದಲ್ಲಿ ಅದು ಆಯಾ ನೌಕರರ ಸೇವಾ ಪುಸ್ತಕದಲ್ಲಿ ದಾಖಲಾಗುತ್ತದೆ. ಅವರ ಸಂಬಳದಲ್ಲಿ ಹಣ ಕಡಿತವಾಗುತ್ತದೆ. ಸೇವಾ ಪುಸ್ತಕದಲ್ಲಿ ಇದು ದಾಖಲಾದಲ್ಲಿ ಮುಂದೆ ನಿವೃತ್ತಿ ಕಾಲದಲ್ಲಿ ಪಿಂಚಣಿಗೆ ಸಮಸ್ಯೆಯಾಗಲಿದೆ. ಮಾಹಿತಿ ಹಕ್ಕಿನಡಿ ಬರುವ ಅರ್ಜಿಗಳಿಗೆ ಸಕಾಲಕ್ಕೆ ಮಾಹಿತಿ ಒದಗಿಸದೇ ದಂಡ ಕಟ್ಟಿ ಅದು ಆ ನೌಕರರ ಎಸ್‌ಆರ್‌ನಲ್ಲಿ ದಾಖಲಾಗಿ ಪಿಂಚಣಿಗೆ ಸಮಸ್ಯೆಯಾದ ಪ್ರಕರಣಗಳು ಕೂಡ ಆಯೋಗದಲ್ಲಿ ದಾಖಲಾಗಿವೆ. ಈ ಬಗ್ಗೆ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಮತ್ತು ಪ್ರಥಮ ಮೇಲ್ಮನವಿ ಪ್ರಾಧಿಕಾರಿಗಳು ಅರಿತು ಎಚ್ಚೆತ್ತುಕೊಳ್ಳಬೇಕು ಎಂದು ತಿಳಿಸಿದರು.

ಕೆಲವು ಪ್ರಕರಣಗಳಲ್ಲಿ ಹಣ ಹೆಚ್ಚಿಗೆ ಕಟ್ಟಿಸಿಕೊಂಡು ಕಡಿಮೆ ಪುಟ ಮಾಹಿತಿ ನೀಡಲಾಗುತ್ತದೆ. ಇದು ತಪ್ಪಾಗುತ್ತದೆ. ನಕ್ಷೆ ಕೇಳಿದಾಗ ಕೇವಲ ಔಟ್‌ಲೈನ್ ಮಾತ್ರ ನೀಡಬೇಕು. ಮೂರನೇ ವ್ಯಕ್ತಿಯ ಮಾಹಿತಿ ಕೇಳಿದ್ದರೆ ಐದು ದಿನಗಳಲ್ಲಿ ಆ ವ್ಯಕ್ತಿಗೆ ನೋಟೀಸ್ ನೀಡಿ ಮಾಹಿತಿ ನೀಡಬಹುದೇ ಅಥವಾ ಬೇಡವೇ ಎಂಬುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಅವರು ತಿಳಿಸಿದರು.

ಸೂಕ್ತ ಹಿಂಬರಹ ನೀಡಲು ಸೂಚನೆ: ಪೀಠ ಸಂಖ್ಯೆ 05ರ ರಾಜ್ಯ ಮಾಹಿತಿ ಆಯುಕ್ತರಾದ ರಾಜಶೇಖರ ಎಸ್ ಅವರು ಮಾತನಾಡಿ, ಮಾಹಿತಿ ಹಕ್ಕು ಅರ್ಜಿ ಸ್ವೀಕೃತಿಯಾದ ಕೂಡಲೇ ಆ ಬಗ್ಗೆ ನಿರ್ಲಕ್ಷ ?? ಮಾಡದೇ ವಿಲೇವಾರಿ ಮಾಡಲು ನಿಯಮಾನುಸಾರ ಕ್ರಮ ವಹಿಸಬೇಕು. ಮಾಹಿತಿ ಲಭ್ಯವಿಲ್ಲದಿದ್ದಲ್ಲಿ ಅದಕ್ಕೆ ಸೂಕ್ತ ಹಿಂಬರಹ ನೀಡಬೇಕು ಎಂದು ತಿಳಿಸಿದರು.

ಮಾಹಿತಿ ಹಕ್ಕು ಅರ್ಜಿ ಬಂದ ನಿಗದಿತ ಅವಧಿಯಲ್ಲಿ ಉತ್ತರ ನೀಡಬೇಕು. ಅದರ ಪ್ರತಿಯನ್ನು ಆಯೋಗಕ್ಕು ಸಹ ಕಳುಹಿಸಬೇಕು. ಆನ್‌ಲೈನದಲ್ಲಿ ಬಂದಾಗ ಮಾಹಿತಿ ಕೊಟ್ಟಿರುವುದಾಗಿ ಹೇಳುತ್ತಾರೆ. ಆದರೆ ಕೊಟ್ಟಿರುವ ಮಾಹಿತಿಯನ್ನು ನಮಗೆ ಕಳುಹಿಸದ ಕಾರಣ ಆದೇಶ ಮಾಡಲು ಸಮಸ್ಯೆಯಾಗುತ್ತದೆ ಎಂಬುದನ್ನು ಅಧಿಕಾರಿಗಳು ಮತ್ತು ಸಿಬ್ಬಂದಿ ಅರಿಯಬೇಕು ಎಂದು ತಿಳಿಸಿದರು.

ಪ್ರಥಮ ಮೇಲ್ಮನವಿ ಸಲ್ಲಿಸುವ ಅರ್ಜಿಗಳ ವಿಚಾರಣೆಯನ್ನು ಪ್ರಥಮ ಮೇಲ್ಮನವಿ ಪ್ರಾಧಿಕಾರಿಗಳು ನಿಯಮಬದ್ಧವಾಗಿ ಮಾಡಿದರೆ ಸಮಸ್ಯೆಯೇ ಇರುವುದಿಲ್ಲ. ಅನೇಕ ಕಡೆಗಳಲ್ಲಿ ಪ್ರಥಮ ಮೇಲ್ಮನವಿ ವಿಚಾರಣೆಗಳೇ ಸರಿಯಾಗಿ ಆಗುತ್ತಿಲ್ಲ. ಗ್ರಾಮೀಣಾಭಿವೃದ್ಧಿ, ಕಂದಾಯ, ನಗರಾಭಿವೃದ್ಧಿ ಇಲಾಖೆಗಳಿಂದ ಅತಿ ಹೆಚ್ಚಿನ ಅರ್ಜಿಗಳು ಬರುತ್ತಿವೆ. ಇಲಾಖೆಗಳು 4(1)ಎ, 4(1) ಬಿ ಸರಿಯಾಗಿ ರೂಪಿಸಿಲ್ಲ. ಅದರಿಂದಾಗಿ ಸಮಸ್ಯೆ ಹೆಚ್ಚಾಗುತ್ತಿದೆ. 4(1) ಎ ಪ್ರಕಾರ ದಾಖಲೆಗಳ ನಿರ್ವಹಣೆಯಾದರೆ ಹಾಗೂ 4(1)ಬಿ ಯಲ್ಲಿ 17 ಅಂಶಗಳ ಸ್ವಯಂ ಘೋಷಣೆಯಾದರೆ ಪಿಐಒಗಳ ಮೇಲೆ ಹೊರೆ ಸಾಕಷ್ಟು ಕಡಿಮೆಯಾಗಲಿದೆ ಎಂದು ತಿಳಿಸಿದರು. ಯಾವುದೇ ಸಾರ್ವಜನಿಕ ಪ್ರಾಧಿಕಾರದಲ್ಲಿ 4(1) ಎ ಮತ್ತು ಬಿ ಮಾಡಿಲ್ಲ ಎಂಬುದಾದರೆ ಕೂಡಲೇ ಆ ನಿಟ್ಟಿನಲ್ಲಿ ಗಮನ ಹರಿಸುವುದು ಅಗತ್ಯವಾಗಿದೆ ಎಂದರು.

ಅರ್ಜಿದಾರರು ಮಾಹಿತಿ ಹಕ್ಕು ಅಧಿನಿಯಮ 6(1)ರಲ್ಲಿ ಅರ್ಜಿ ಸಲ್ಲಿಸಿದರೆ, ಅದಕ್ಕೂ ಮುನ್ನ ಕಾಯ್ದೆಯ ಅನುಷ್ಠಾನ ಪರಿಣಾಮಕಾರಿಯಾಗಿ ಮಾಡಲು ಪಿಐಒಗಳು ಸಿದ್ಧರಾಗಬೇಕಾಗುತ್ತದೆ. ಕಾನೂನನ್ನು ಪೂರ್ಣ ಪ್ರಮಾಣದಲ್ಲಿ ಅರ್ಥ ಮಾಡಿಕೊಳ್ಳಬೇಕಾಗುತ್ತದೆ. ಕಾಯ್ದೆ ಹಾಗೂ ಕೆಲವೊಂದು ನ್ಯಾಯಾಲಯದ ಹಾಗೂ ವಿವಿಧ ಮಾಹಿತಿ ಆಯೋಗಗಳ ತೀರ್ಪುಗಳನ್ನು ಅಧ್ಯಯನ ಮಾಡಬೇಕು. ಇದು ಸರ್ಕಾರವೇ ರೂಪಿಸಿರುವ ಕಾಯ್ದೆಯಾಗಿದೆ. ಪರಿಣಾಮಕಾರಿ ಜಾರಿ ನಿಮ್ಮ ಜವಾಬ್ದಾರಿಯಾಗಿರುತ್ತದೆ ಎಂದು ತಿಳಿಸಿದರು.

ಮಾಹಿತಿ ಹಕ್ಕು ಕಾಯಿದೆಯಡಿ ಬರುವ ಅರ್ಜಿಗಳ ಬಗ್ಗೆ ಕೆಲವು ಅನುಮಾನಗಳಿವೆ. ಅದಕ್ಕೆ ಪರಿಹಾರ ಕಂಡುಕೊಳ್ಳಬೇಕು. ವೆಬ್‌ಸೈಟ್‌ನಲ್ಲಿ ಡೌನ್‌ಲೋಡ್ ಮಾಡಿಕೊಳ್ಳುವಂತೆ ಕೆಲವರು ಹೇಳುತ್ತಾರೆ. ಆದರೆ ದೃಢೀಕರಣ ಪ್ರತಿ ಬೇಕು ಎಂಬುದನ್ನು ಅರಿಯಬೇಕು. ಮಾಹಿತಿ ಹಕ್ಕು ಅಧಿನಿಯಮದಡಿ ನೀಡಲಾಗಿದೆ ಎಂಬ ಮುದ್ರೆ ಹಾಕಿ ನೀಡಬೇಕು. ಕೆಲವರು ಸಿಡಿ ರೂಪದಲ್ಲಿ ನೀಡಿ ಎಂದು ಕೇಳಿರುತ್ತಾರೆ. ಎಲೆಕ್ಟ್ರಾನಿಕ್ಸ್ ರೂಪದಲ್ಲಿರುವುದನ್ನು ಮಾತ್ರ ಸಿ.ಡಿ.ಯಲ್ಲಿ ನೀಡಬಹುದು. ಎಲ್ಲ ಪುಟಗಳನ್ನು ಸ್ಕಾ??ನ್ ಮಾಡಲು ವೆಚ್ಚ ಹೆಚ್ಚಾಗುತ್ತದೆ ಎಂಬುದರ ತಿಳಿಯಬೇಕು ಎಂದು ಅವರು ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಮತ್ತು ಪ್ರಥಮ ಮೇಲ್ಮನವಿ ಪ್ರಾಧಿಕಾರಿಗಳಿಗೆ ಸಲಹೆ ಮಾಡಿದರು.

ಕಾರ್ಯಗಾರದಲ್ಲಿ ಅಪರ ಜಿಲ್ಲಾಧಿಕಾರಿ ಶಿವಾನಂದ ಭಜಂತ್ರಿ ಹಾಗೂ ವಿವಿಧ ಇಲಾಖೆಯ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಮತ್ತು ಪ್ರಥಮ ಮೇಲ್ಮನವಿ ಪ್ರಾಧಿಕಾರಿಗಳು ಇದ್ದರು.

# ಶ್ರೀಕೃಷ್ಣ ಜಯಂತಿ ಆಚರಣೆ

ಜಯಂತಿಯನ್ನು ಜಿಲ್ಲಾ ಕೇಂದ್ರದಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಗಿದ್ದು, ಮೆರವಣಿಗೆಗೆ ನಗರದ ಹುಲಿಕೆರೆ ರಸ್ತೆಯ ಸಿರಸಪ್ಪಯ್ಯನ ಮಠದ ಓಣಿಯ ವಡಕರಾಯ ದೇವಸ್ಥಾನ ಹತ್ತಿರ ಚಾಲನೆ ನೀಡಲಾಯಿತು.

ಈ ವೇಳೆ ವಿಧಾನ ಪರಿಷತ್ ಸದಸ್ಯರಾದ ಹೇಮಲತಾ ನಾಯಕ, ಕೊಪ್ಪಳ ನಗರಸಭೆ ಅಧ್ಯಕ್ಷರಾದ ಅಮ್ಜದ್ ಪಟೇಲ್ ಹಾಗೂ ಸಮಾಜದ ಮುಖಂಡರು ಶ್ರೀಕೃಷ್ಣ ರವರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕರ್ಣಕುಮಾರ, ಯಾದವ ಸಮಾಜದ ಕೊಪ್ಪಳ ಜಿಲ್ಲಾಧ್ಯಕ್ಷರಾದ ಕುರುಗೋಡ ರವಿ, ತಾಲ್ಲೂಕ ಅಧ್ಯಕ್ಷರಾದ ವೆಕ್ಕಂಪ್ಪ ಕಟ್ಟಿಮನಿ, ಮುಖಂಡರಾದ ಯಮನೂರಪ್ಪ ಭಂಗ್ಲೇರ, ಜಗನ್ನಾಥ ಹುಲಿಗಿ, ರಮೇಶ್ ನಾಗೇಶನಹಳ್ಳಿ, ಭೀಮಣ್ಣ ಲೇಬಗೇರಿ, ಸುರೇಶ ಗೊಲ್ಲರ್, ರೇಣುಕಾ ಪೂಜಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಿಬ್ಬಂದಿ ಹಾಗೂ ಮತ್ತಿತರರು ಸೇರಿದಂತೆ ಇತರೆ ಜನಪ್ರತಿನಿಧಿಗಳು ಉಪಸ್ಥಿತರಿದ್ದರು.

*ಮೆರವಣಿಗೆ:* ಶ್ರೀಕೃಷ್ಣ ಭಾವಚಿತ್ರದ ಮೆರವಣಿಗೆಯು ವಡಕರಾಯ ದೇವಸ್ಥಾನ ಆವರಣದಿಂದ ಪ್ರಾರಂಭಗೊಂಡು ಗಡಿಯಾರ ಕಂಬದವರೆಗೆ ವಿಜ್ರಂಭಣೆಯಿಂದ ನಡೆಯಿತು. ರಾಧಾ–ಕೃಷ್ಣ ವೇಷದಲ್ಲಿ ಪಾಲ್ಗೊಂಡಿದ್ದ ಮಕ್ಕಳು ಎಲ್ಲರ ಗಮನ ಸೆಳೆದರು. ಮೆರವಣಿಗೆಯಲ್ಲಿ ಸಮಾಜದ ಮುಖಂಡರು, ಮಹಿಳೆಯರು, ಯುವಕರು, ಮಕ್ಕಳು ಭಾಗವಹಿಸಿದ್ದರು.

# ವಿಜ್ಡಂನಿಂದ ನೀಟ್ ಉಚಿತ ತರಬೇತಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಆ. 16 : ಇಲ್ಲಿಯ ವಿಜ್ಡಂ ಪದವಿಪೂರ್ವ ಕಾಲೇಜು ಹಾಗೂ ನೀಟ್ ಅಕಾಡೆಮಿಯು ನೀಟ್

ಪುನರಾವರ್ತಿತ ಅಭ್ಯರ್ಥಿಗಳಿಗೆ ಒಂದು ವಾರದ ಉಚಿತ ಡೆಮೊ ತರಬೇತಿ ನೀಡಲು ನಿರ್ಧರಿಸಿದೆ.

ವಿದ್ಯಾರ್ಥಿಗಳು ಕಾಲೇಜಿನಲ್ಲಿ ತರಬೇತಿಗೆ ಹೆಸರು ನೋಂದಾಯಿಸಬಹುದು ಎಂದು ಕಾಲೇಜು

ಅಧ್ಯಕ್ಷ ಮುಹಮ್ಮದ್ ಆಸಿಫೊದ್ದೀನ್ ತಿಳಿಸಿದ್ದಾರೆ.

ಒಂದು ವಾರದ ತರಬೇತಿ ನಂತರ 720 ಅಂಕಗಳ ಉಚಿತ ಪರೀಕ್ಷೆ ಸಹ ನಡೆಸಲಾಗುವುದು ಎಂದು ಹೇಳಿದ್ದಾರೆ.

ವಿದ್ಯಾರ್ಥಿ ವೇತನ: ಕಾಲೇಜು ನೀಟ್ ಪುನರಾವರ್ತಿತ ಅಭ್ಯರ್ಥಿಗಳಿಗೆ ಶುಲ್ಕ ವಿನಾಯಿತಿ ರೂಪದಲ್ಲಿ ಈ ಬಾರಿ ಒಂದು ರೂ. ಕೋಟಿಗೂ ಅಧಿಕ ವಿದ್ಯಾರ್ಥಿ ವೇತನ ನೀಡಲಿದೆ ಎಂದು ತಿಳಿಸಿದ್ದಾರೆ.

ನೀ???ನಲ್ಲಿ 400ಕ್ಕೂ ಹೆಚ್ಚು ಅಂಕ ಗಳಿಸಿದವರಿಗೆ ಶುಲ್ಕದ ಶೇ 90 ರಷ್ಟು, 380ಕ್ಕೂ ಅಧಿಕ ಅಂಕ ಪಡೆದವರಿಗೆ ಶೇ 80 ರಷ್ಟು, 360ಕ್ಕೂ ಹೆಚ್ಚು ಅಂಕ ಗಳಿಸಿದವರಿಗೆ ಶೇ 70

ರಷ್ಟು, 340ಕ್ಕೂ ಅಧಿಕ ಅಂಕ ಪಡೆದವರಿಗೆ ಶೇ 60 ರಷ್ಟು, 320ಕ್ಕೂ ಹೆಚ್ಚು ಅಂಕ

ಗಳಿಸಿದವರಿಗೆ ಶೇ 50 ರಷ್ಟು, 300ಕ್ಕೂ ಅಧಿಕ ಅಂಕ ಗಳಿಸಿದವರಿಗೆ ಶೇ 40 ರಷ್ಟು, 250ಕ್ಕೂ ಹೆಚ್ಚು ಅಂಕ ಪಡೆದವರಿಗೆ ಶೇ 30 ರಷ್ಟು, 200ಕ್ಕೂ ಅಧಿಕ ಅಂಕ ಗಳಿಸಿದವರಿಗೆ ಶೇ 20 ರಷ್ಟು ಹಾಗೂ 199ಕ್ಕಿಂತ ಕಡಿಮೆ ಅಂಕ ಪಡೆದವರಿಗೆ ಶೇ 15 ರಷ್ಟು ವಿದ್ಯಾರ್ಥಿ ವೇತನ ಕೊಡಲಾಗುವುದು ಎಂದು ಹೇಳಿದ್ದಾರೆ.

ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನದ ಲಾಭ ಪಡೆಯಬೇಕು ಎಂದು ಮನವಿ ಮಾಡಿದ್ದಾರೆ.

# ಜನಕೆಲಸವೇ ಆರ್‌ಟಿಐ ಕಾಯ್ದೆಯ ಉದ್ದೇಶ: ರುದ್ರಣ್ಣ ಹರ್ತಿಕೋಟೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆ 16 : ಆರ್‌ಟಿಐ ಕಾಯ್ದೆ ಉದ್ದೇಶವೇ ನಾಗರೀಕರನ್ನು ಸಬಲೀಕರಣ ಮಾಡುವುದಾಗಿದೆ. ಸರ್ಕಾರದ ಆಡಳಿತದಲ್ಲಿ ಪಾರದರ್ಶಕತೆ ತರುವುದು ಹೊಣೆಗಾರಿಕೆಗೆ ಉತ್ತೇಜನ ನೀಡುವುದು, ಭ್ರಷ್ಟಾಚಾರಕ್ಕೆ ತಡೆ ಹಾಕುವುದು, ಪ್ರಜಾಪ್ರಭುತ್ವದ ನಿಜವಾದ ಅರ್ಥದಲ್ಲಿ ಜನರ ಕೆಲಸ ಮಾಡುವುದು ಆರ್‌ಟಿಐ ಕಾಯ್ದೆಯ ಉದ್ದೇಶವಾಗಿದೆ ಎಂದು ಪೀಠ ಸಂಖ್ಯೆ 04ರ ರಾಜ್ಯ ಮಾಹಿತಿ ಆಯುಕ್ತರಾದ ರುದ್ರಣ್ಣ ಹರ್ತಿಕೋಟೆ ಅವರು ಹೇಳಿದರು.

ಆಗಸ್ಟ್ 16ರಂದು ನಗರದ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಮತ್ತು ಪ್ರಥಮ ಮೇಲ್ಮನವಿ ಪ್ರಾಧಿಕಾರಿಗಳಿಗೆ ನಡೆದ ತರಬೇತಿ ಕಾರ್ಯಾಗಾರದ ಬಳಿಕ ಅವರು ಸುದ್ದಿಗೋಷ್ಠಿ ನಡೆಸಿ ಮಾಹಿತಿ ನೀಡಿದರು.

ನಮ್ಮ ದೇಶದಲ್ಲಿ ಮಾಹಿತಿ ಹಕ್ಕು ಕಾಯ್ದೆ ಬಂದು 20 ವರ್ಷಗಳಾಗಿವೆ. ಇಡೀ ಪ್ರಪಂಚದಲ್ಲಿ ಯುನೆಸ್ಕೋದ ಸದಸ್ಯ ರಾಷ್ಟ್ರಗಳಲ್ಲಿ 132 ದೇಶಗಳಲ್ಲಿ ಮಾಹಿತಿ ಹಕ್ಕು ಕಾಯ್ದೆ ಬೇರೆ ಬೇರೆ ರೂಪದಲ್ಲಿದೆ. ನಮ್ಮ ದೇಶದಲ್ಲಿ 2005ರ ಅಕ್ಟೋಬರ್ 12ಕ್ಕೆ ಮಾಹಿತಿ ಹಕ್ಕು ಅಧಿನಿಯಮ ಜಾರಿ ಬಂದಿದೆ. ರಾಜಸ್ಥಾನದ ದೇವದುಂಗ್ರಿ ಎಂಬ ಹಳ್ಳಿಯಲ್ಲಿ ನಿವೃತ್ತ ಐಎಎಸ್ ಅಧಿಕಾರಿ ಅರುಣಾರಾಯ್, ನಿಖಿಲ್ ಡೇ ಮೊದಲಾದವರು ಮಣ್ಣೂರ್ ಕಿಸಾನ್ ಶಕ್ತಿ ಸಂಘಟನೆಯ ಮೂಲಕ ನಡೆಸಿದ ಹೋರಾಟದ ಫಲವಾಗಿ ಡಾ.ಮನಮೋಹನ್ ಸಿಂಗ್ ಸರ್ಕಾರವು 2005ರಲ್ಲಿ ಈ ಕಾಯ್ದೆ ತಂದಿತು. ಆದರೆ, ಅದಕ್ಕೂ ಮುನ್ನ ಅಫಿಶಿಯಲ್ ಸಿಕ್ರೆಟ್ ಕಾಯಿದೆ ಇತ್ತು. ಅದರ ದುರುಪಯೋಗ ಹೆಚ್ಚಾಗಿತ್ತು. ಆದ್ದರಿಂದಲೇ ಆರ್‌ಟಿಐ ಕಾಯ್ದೆಗಾಗಿ ಹೋರಾಟ ನಡೆಯಿತು ಎಂದು ತಿಳಿಸಿದರು.

ಇದು ಮಾಹಿತಿಯ ಯುಗವಾಗಿದೆ. ಹೋರಾಟದ ಮೂಲಕ ದೇಶಕ್ಕೆ ಸ್ವಾತಂತ್ರ್ಯ ಬಂದಿದ್ದು, ಅಂತಹ ಹೋರಾಟದ ಮೂಲಕವೇ ಬಂದ ಈ ಮಾಹಿತಿ ಹಕ್ಕು ಕಾಯ್ದೆಯು ಸಹ ಮಾಹಿತಿಯ ಸ್ವಾತಂತ್ರ್ಯ ನೀಡುತ್ತದೆ. ಈ ಕಾಯ್ದೆ ಬರುವುದಕ್ಕೆ ಮೊದಲು ಸಾರ್ವಜನಿಕರಿಗೆ ಮಾಹಿತಿ ಸಿಗುತ್ತಿರಲಿಲ್ಲ. ಕೆಲವರಿಗೆ ಮಾತ್ರ ಲಭ್ಯವಾಗುತ್ತಿತ್ತು. ಸಾರ್ವಜನಿಕ ದಾಖಲೆಗಳನ್ನು ಮುಕ್ತವಾಗಿ ಜನರ ಮುಂದಿಡುವ ಉದ್ದೇಶದಿಂದ ಈ ಕಾಯ್ದೆ ಜಾರಿ ಬಂದಿದೆ. ಸರ್ಕಾರಗಳನ್ನು ಬುಡಮೇಲು ಮಾಡುವಂತಹ ಶಕ್ತಿ ಈ ಕಾಯಿದೆಗಿದೆ. ಈ ಕಾಯಿದೆಯ ಬಳಕೆ ಸರಿಯಾಗಿರಬೇಕು. ಸಾಮಾಜಿಕ ಸ್ವಾತಂತ್ರ್ಯ ಕಾಪಾಡುವ ನಿಟ್ಟಿನಲ್ಲಿ ಸಾರ್ವಜನಿಕರು ಮಾಹಿತಿ ಕೇಳಬೇಕು ಎಂದರು.

ಯಾವ ಉದ್ದೇಶದಿಂದ ಈ ಮಾಹಿತಿ ಹಕ್ಕು ಕಾಯ್ದೆಯನ್ನು ಜಾರಿ ತರಲಾಗಿತ್ತೋ ಅದು ಈಗ ದುರ್ಬಲಗೊಳಿಸುವ ಪ್ರಯತ್ನ ವಿವಿಧ ಮಜಲುಗಳಲ್ಲಿ ನಡೆಯುತ್ತಿದೆ. ಆದರೆ ಆ ರೀತಿಯಲ್ಲಿ ಆಗದಿರುವಂತೆ ಎಚ್ಚರಿಕೆ ವಹಿಸುವ ಜವಾಬ್ದಾರಿ ವಿವಿಧ ಇಲಾಖೆಗಳ ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಮೇಲಿದೆ. ನಾಗರಿಕ ಸಮಾಜದ ಹೊಣೆಯೂ ಅಷ್ಟೇ ಇದೆ ಎಂದು ತಿಳಿಸಿದರು.

ಸರ್ಕಾರದ ಕಾರ್ಯವೈಖರಿಗಳನ್ನು, ಸರ್ಕಾರದಲ್ಲಿ ನಡೆಯುವ ಪ್ರತಿಯೊಂದು ಅಂಶವನ್ನು ಸಮಾಜದ ಮುಂದಿಡುವ ಬಹುದೊಡ್ಡ ಅಸ್ತ್ರ ಆರ್‌ಟಿಐ ಆಗಿದೆ. ಆದರೆ ಭ್ರಷ್ಟಾಚಾರವನ್ನು ತಡೆಯುವ ಉದ್ದೇಶದಿಂದ ತಂದ ಈ ಕಾಯ್ದೆಯನ್ನು ಬಳಸಿಕೊಂಡೆ ಕೆಲವರು ಭ್ರಷ್ಟಾಚಾರ ಮಾಡುತ್ತಿದ್ದಾರೆ



ಎಂಬ ಆರೋಪಗಳಿವೆ. ಅಧಿಕಾರಿಗಳಿಗೆ ಕಿರುಕುಳ ನೀಡಲಾಗುತ್ತಿದೆ ಎಂಬ ದೂರುಗಳಿವೆ. ಕಾಯ್ದೆಯನ್ನೇ ದುರ್ಬಲಗೊಳಿಸಲಾಗುತ್ತಿದೆ ಎಂಬ ಟೀಕೆಗಳಿವೆ. ಸುಪ್ರೀಂಕೋರ್ಟ್ ಅನೇಕ ಸಂದರ್ಭದಲ್ಲಿ ಇದೇ ಮಾತನ್ನೇ ಹೇಳಿದೆ. ಅಧಿಕಾರಿಗಳು ಹಾಗೂ ಆರ್‌ಟಐ ಕಾರ್ಯಕರ್ತರು ಕಾಯಿದೆಯ ಉದ್ದೇಶ ಅರ್ಥ ಮಾಡಿಕೊಂಡು ಕಾರ್ಯನಿರ್ವಹಿಸಿದಾಗಲೇ ಕಾಯ್ದೆಗೆ ನಿಜವಾದ ಅರ್ಥ ಬರಲಿದೆ ಎಂದರು.

ಇತ್ತೀಚಿನ ದಿನಗಳಲ್ಲಿ ಮಾಹಿತಿ ಹಕ್ಕು ಅಧಿನಿಯಮದಡಿಯಲ್ಲಿ ಅರ್ಜಿ ಸಲ್ಲಿಸುವವರ ಸಂಖ್ಯೆ ದಿನೇ ದಿನೇ ಹೆಚ್ಚಾಗುತ್ತಿದೆ. ಅದಕ್ಕೆ ಯಾವುದೇ ಕಾರಣಗಳಿರಬಹುದು. ಆದರೆ ಅದೊಂದು ಒಳ್ಳೆಯ ಬೆಳವಣಿಗೆ. ಪಿಐಒಗಳು ಯಾವುದೇ ಒತ್ತಡಕ್ಕೆ ಅಥವಾ ಹೆದರಿಕೆಗೆ ಒಳಗಾಗದೇ ಮಾಹಿತಿ ನೀಡಿದರೆ ಕಾಯ್ದೆಯ ಉದ್ದೇಶ ಸಫಲವಾಗುತ್ತದೆ. ಅರ್ಜಿದಾರ ಪ್ರಥಮ ಹಾಗೂ ದ್ವಿತೀಯ ಮೇಲ್ಮನವಿ ಹೋಗುವುದು ತಪ್ಪುತ್ತದೆ. ಮಾಹಿತಿ ನೀಡದಿದ್ದಲ್ಲಿ ದಂಡ, ಅರ್ಜಿದಾರರಿಗೆ ಪರಿಹಾರಕ್ಕೆ ಶಿಫಾರಸು ಮಾಡಲಾಗುತ್ತದೆ. ಪಿಐಒಗಳ ಸಂಬಳದಲ್ಲಿಯೇ ಕಡಿತ ಮಾಡಲಾಗುತ್ತದೆ ಎಂದರು.

ಮೂರನೇ ವ್ಯಕ್ತಿಯ ಮಾಹಿತಿಯನ್ನು ಕೋರಿದ ಸಂದರ್ಭದಲ್ಲಿ ವೈವಾಹಿಕ ವಿವರ, ಸೇವಾ ವಿವರ. ವೈಯಕ್ತಿಕ ಮಾಹಿತಿಯನ್ನು ನೀಡುವುದರಲ್ಲಿ ಕೆಲವೊಂದು ನಿರ್ಬಂಧಗಳಿವೆ. ಸೇವಾರಹಸ್ಯಗಳ ಬಗ್ಗೆ ಕೇಳಿದಾಗ ಬಾಧ್ಯಸ್ಥರ ಒಪ್ಪಿಗೆ ಪಡೆಯಬೇಕಾಗುತ್ತದೆ. ಗೌರವಾನ್ವಿತ ನ್ಯಾಯಾಲಯಗಳು, ಕೇಂದ್ರ ಮಾಹಿತಿ ಆಯೋಗ, ವಿವಿಧ ರಾಜ್ಯಗಳ ಮಾಹಿತಿ ಆಯೋಗಗಳ ತೀರ್ಪುಗಳನ್ನು ಗಮನಿಸಬೇಕು. ಪಿಐಒಗಳು ಮತ್ತು ಪ್ರಥಮ ಮೇಲ್ಮನವಿ ಪ್ರಾಧಿಕಾರಗಳು ಇವುಗಳ ಬಗ್ಗೆ ಅಧ್ಯಯನ ಮಾಡಿಕೊಂಡರೆ ಅರ್ಜಿಗಳ ವಿಲೇವಾರಿಯಲ್ಲಿ ವೇಗ ನೀಡಲು ಅನುಕೂಲವಾಗುತ್ತದೆ ಎಂದು ತಿಳಿಸಿದರು.

ಎರಡು ದಶಕಗಳ ಅವಧಿಯಲ್ಲಿ ಕಾಯ್ದೆ ಸಾಕಷ್ಟು ಬದಲಾವಣೆಗಳನ್ನು ತಂದಿದೆ. ನಾಗರೀಕರಿಗೆ ಸರ್ಕಾರದ ನಡವಳಿಕೆ ತಿಳಿಯುತ್ತಿದೆ. ಅಧಿಕಾರಿಗಳು ಹೊಣೆಗಾರರನ್ನಾಗಿ ಮಾಡಿದೆ. ನಾವು ವೇಗವಾಗಿ ಅರ್ಜಿಗಳ ವಿಚಾರಣೆ ಹಾಗೂ ವಿಲೇವಾರಿ ಮಾಡಿದರೂ ಸಹ ಇನ್ನೂ ಸಾಕಷ್ಟು ಅರ್ಜಿಗಳ ವಿಚಾರಣೆ ಬಾಕಿ ಇದೆ. ಸಾಕಷ್ಟು ಅಧಿಕಾರಿಗಳಲ್ಲಿ ಕಾಯ್ದೆಯ ಬಗ್ಗೆ ಅರಿವು ಕಡಿಮೆ ಇದೆ. ನಿಯಮಾವಳಿ ಪುಸ್ತಕವನ್ನು ಅಧ್ಯಯನ ಮಾಡುವುದು ಅಗತ್ಯವಾಗಿದೆ. ಅಧ್ಯಯನ ಮಾಡುವ ಮೂಲಕ ಪಾರದರ್ಶಕ ಹಾಗೂ ಹೊಣೆಗಾರಿಕೆಯ ಮತ್ತು ಭ್ರಷ್ಟಾಚಾರ ಮುಕ್ತ ಆಡಳಿತಕ್ಕೆ ಕೈಜೋಡಿಸಬೇಕು ಎಂದು ಕಾರ್ಯಗಾರದಲ್ಲಿ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಮತ್ತು ಪ್ರಥಮ ಮೇಲ್ಮನವಿ ಪ್ರಾಧಿಕಾರಿಗಳಿಗೆ ಮನವರಿಕೆ ಮಾಡಿದ್ದೇವೆ ಎಂದು ತಿಳಿಸಿದರು.

ಮಾಹಿತಿ ಹಕ್ಕು ಅರ್ಜಿಗಳಿಗೆ ಮಾಹಿತಿ ಒದಗಿಸಲು ವಿಳಂಬ ಮಾಡಿದಕ್ಕೆ ನೌಕರರ ಮೇಲೆ ದಂಡ ವಿಧಿಸುವುದಲ್ಲದೇ, ಆಯೋಗವು ಕೆಲವು ಮಾಹಿತಿ ಹಕ್ಕು ಅರ್ಜಿದಾರರನ್ನು ಬ್ಲಾಕ್ ಲೀಸ್ಟೆ ಸೇರಿಸಿದೆ. ನಮ್ಮ ರಾಜ್ಯದಲ್ಲಷ್ಟೇ ಅಲ್ಲ, ಬೇರೆ ಬೇರೆ ರಾಜ್ಯದಲ್ಲು ಸಹ ಕೆಲವು ಮಾಹಿತಿ ಹಕ್ಕು ಅರ್ಜಿದಾರರನ್ನು ಬ್ಲಾಕ್‌ಲಿಸ್ಟೆ ಸೇರಿಸಿದ ಉದಾಹರಣೆಗಳಿವೆ ಎಂದು ಅವರು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಪೀಠ ಸಂಖ್ಯೆ 05ರ ರಾಜ್ಯ ಮಾಹಿತಿ ಆಯುಕ್ತರಾದ ರಾಜಶೇಖರ ಎಸ್, ಅಪರ ಜಿಲ್ಲಾಧಿಕಾರಿ ಶಿವಾನಂದ ಭಜಂತ್ರಿ ಇದ್ದರು.

# ಆ.18 ಮಾದಿಗ ಸಮಾಜದಿಂದ ತಮಟೆ ಚಳುವಳಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.16– ನಾಗಮೋಹನದಾಸ್ ವರದಿಯನ್ವಯ ಮಾದಿಗ ಜಾತಿ, ಉಪಜಾತಿಗಳಿಗೆ ಶೇ.6 ರಷ್ಟು ಒಳಮೀಸಲಾತಿ ಜಾರಿಗೊಳಿಸುವಂತೆ ಒತ್ತಾಯಿಸಿ ಆ.18 ರಂದು ರಾಜ್ಯದ ಎಲ್ಲ ಜಿಲ್ಲೆ ಹಾಗೂ ತಾಲೂಕು ಕೇಂದ್ರಗಳಲ್ಲಿ ತಮಟೆ ಚಳುವಳಿ ಮಾಡಲಾಗುವುದು ಎಂದು ಮಾದಿಗ ಜಾತಿ ಉಪಜಾತಿ ಸಂಘಟನೆಗಳ ರಾಜ್ಯ ಒಕ್ಕೂಟದ ಸಂಘಟನಾ ಸಂಚಾಲಕ ಮುತ್ತಣ್ಣ ಬೆಣ್ಣೂರ ತಿಳಿಸಿದ್ದಾರೆ.

ಪ್ರತಿ ಜಿಲ್ಲಾ ಕೇಂದ್ರಗಳಲ್ಲಿ ತಮಟೆ ಚಳುವಳಿ ನಡೆಯಲಿದ್ದು, ಜಿಲ್ಲಾಧಿಕಾರಿಗಳ ಮೂಲಕ ಸರಕಾರಕ್ಕೆ ಮನವಿ ಸಲ್ಲಿಸಲಾಗುವುದು ಎಂದು ತಿಳಿಸಿದ್ದಾರೆ.

ಸೋಮವಾರ ಬಾಗಲಕೋಟೆಯಲ್ಲಿ ಜಿಲ್ಲಾ ಡಳಿತ ಭವನದ ಮುಂದೆ ತಮಟೆ ಚಳುವಳಿಯ ಪ್ರತಿಭಟನಾ ಮೆರವಣಿಗೆಯಲ್ಲಿ ಜಿಲ್ಲೆಯ ಮಾದಿಗ ಹಾಗೂ ಉಪಜಾತಿಗಳ ಸಮುದಾಯದ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸುವಂತೆ ಸಂಘಟನೆಯ

ಜಿಲ್ಲಾ ಗೌರವಾಧ್ಯಕ್ಷ ಯಲ್ಲಪ್ಪ ಬೆಂಡಿಗೇರಿ, ಜಿಲ್ಲಾಧ್ಯಕ್ಷ ಶಿವಾನಂದ ಟವಳಿ, ಸಂಚಾಲಕ ಕಾಂತಚಂದ್ರ ಜ್ಯೋತಿ, ರಾಮ ಕದಂ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರಣ್ಯ ಕಛೇರಿಯಲ್ಲಿ 79ನೇ ಸ್ವಾತಂತ್ರ್ಯ ದಿನಾಚರಣೆ

# ಪರಿಸರ ಉಳಿಸಿ ಬೆಳೆಸುವ ಮೂಲಕ ದೇಶ ಸೇವೆ ಮಾಡಬೇಕು:- ಗೊಬ್ಬುರ್



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:- ಪ್ರಾದೇಶಿಕ ಅರಣ್ಯವಲಯ ಮತ್ತು ಸಾಮಾಜಿಕ ಅರಣ್ಯ ವಲಯದ ವತಿಯಿಂದ ಅರಣ್ಯ ಇಲಾಖೆ ಆವರಣದಲ್ಲಿ 79ನೇ ಸ್ವಾತಂತ್ರ್ಯ ದಿನಾಚಾರಣೆಯನ್ನು ಆಚರಿಸಲಾಯಿತು. ಪ್ರಾದೇಶಿಕ ವಲಯ ಅರಣ್ಯಾಧಿಕಾರಿ ಐಶ್ವರ್ಯ ಗೊಬ್ಬುರ್ ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಈ ದಿನವು ಕೇವಲ ಸಂಭ್ರಮದ ದಿನವಲ್ಲ ಇದು ನಮ್ಮ ಹೊಣೆಗಾರಿಕೆಯನ್ನು ನೆನಪಿಸುವ ದಿನವೂ ಆಗಿದೆ, ಆದ್ದರಿಂದ ಅರಣ್ಯ, ಪರಿಸರವನ್ನು ಉಳಿಸಿ ಬೆಳೆಸುವ ಮೂಲಕ ದೇಶ ಸೇವೆ ಸಲ್ಲಿಸಬೇಕು ಎಂದು ಅಭಿಪ್ರಾಯಪಟ್ಟರು. 79ನೇ ಸ್ವಾತಂತ್ರ್ಯ ದಿನದ ನಿಮಿತ್ಯ ಸ್ವಾತಂತ್ರ್ಯ ಹೋರಾಟಗಾರರನ್ನು ಸ್ಮರಿಸುವ ಸಲುವಾಗಿ ವಲಯ ಕಛೇರಿ ಆವರಣದಲ್ಲಿ "ಅರಳಿ ಗಿಡ" ನೆಡುವ ಮೂಲಕ ವಿಶೇಷವಾಗಿ ಸ್ವಾತಂತ್ರ್ಯ ದಿನವನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ ಸಾಮಾಜಿಕ ವಲಯ ಅರಣ್ಯಧಿಕಾರಿ ಉಮಾ ನಾಯ್ಕು, ಉಪವಲಯ ಅರಣ್ಯಧಿಕಾರಿಗಳಾದ ಅಂಬಾದಾಸ, ರವೂಫಖಾನ, ಹರಿದಾಸ ಹೆಗಡೆ, ರಾಜಶೇಖರ ಧೂಪದ, ಪ್ರಾದೇಶಿಕ ಹಾಗೂ ಸಾಮಾಜಿಕ ಅರಣ್ಯ ವಲಯದ ನೆಡುತೋಪು ಕಾವಲುಗಾರರು, ಕಛೇರಿ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ಮಾಂಜ್ರಾ ನದಿಯ ನೀರು ಗಡಿಭಾಗಕ್ಕೆ; ಸಾರ್ವಜನಿಕರು

# ಮುಂಜಾಗ್ರತೆ ವಹಿಸಲು ತಹಶೀಲ್ದಾರ್ ಪಂಚಾಳ ಮನವಿ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ನೆರೆಯ ಮಹಾರಾಷ್ಟ್ರ ರಾಜ್ಯದ ಮಾಂಜ್ರಾ ನದಿಯ ನೀರು ಬಿಟ್ಟಿರುವ ಕಾರಣ ಕರ್ನಾಟಕದ ಗಡಿ ಭಾಗದ ಗ್ರಾಮಗಳಲ್ಲಿ ನದಿ, ಹಳ್ಳ, ಬ್ರಿಡ್ಜ್ ತುಂಬಿ ಹರಿಯುವ ಸಾಧ್ಯತೆ ಇರುತ್ತದೆ. ಅಲ್ಲದೆ ಮುಂಬರುವ 5 ದಿವಸಗಳಲ್ಲಿ ಭಾರಿ ಮಳೆ ಆಗುವ ಸಾಧ್ಯತೆ ಇರುವ ಕಾರಣ ತಾಲೂಕಿನ ಸಾರ್ವಜನಿಕರು ನದಿ, ಹಳ್ಳ, ಬ್ರಿಡ್ಜ್ ಕಡೆ ಹೋಗದಂತೆ ಹಾಗೂ ತಮ್ಮ ಹಸು, ಎಮ್ಮ, ಆಡುಗಳಿಗೂ ಕೂಡ ಜೀವ ಹಾನಿಯಾಗುವ ಸಾಧ್ಯತೆ ಇರುತ್ತದೆ. ಆದ್ದರಿಂದ ಸಾರ್ವಜನಿಕರು ತಮ್ಮ ತಮ್ಮ ಮನೆಯಲ್ಲಿಯೇ ಇದ್ದು ಯಾರು ನದಿ, ಹಳ್ಳ, ಬ್ರಿಡ್ಜ್ ಕಡೆ ಹೋಗದಂತೆ ಎಚ್ಚರಿಕೆಯಿಂದ ಇರಲು ತಹಶೀಲ್ದಾರ್ ಮಂಜುನಾಥ್ ಪಂಚಾಳ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಪ್ತ ಸಮಾಲೋಚಕರ ಹುದ್ದೆಗೆ ಅರ್ಜಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.16- ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ಪ್ರತಿಬಂಧಕ ಮತ್ತು ನಿಯಂತ್ರಣ ಘಟಕ ಬಾಗಲಕೋಟೆ ಜಿಲ್ಲೆ ಇವರ ವ್ಯಾಪ್ತಿಯಲ್ಲಿ ಬರುವ ಜಿಲ್ಲಾ ಆಸ್ಪತ್ರೆ ಬಾಗಲಕೋಟೆ ರಕ್ತ ಕೇಂದ್ರದಲ್ಲಿ ಆಪ್ತ ಸಮಾಲೋಚಕರ 1 ಹುದ್ದೆ ಹಾಗೂ ಸರ್ಕಾರೇತರ ರಕ್ತ ಕೇಂದ್ರವಾದ ರಾಮನಗೌಡ ರಕ್ತ ಕೇಂದ್ರ ಮುಧೋಳ ಅನುಮೋದಿತ ಪ್ರಯೋಗ ಶಾಲಾ ತಂತ್ರಜ್ಞರ 1 ಹುದ್ದೆಗೆ 2026ರ ಮಾರ್ಚ್ 31ರ ವರೆಗೆ ನೇರ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡುವ ಸಂಬಂಧ ಅನುಭವ ಮತ್ತು ಅರ್ಹತೆಗಳನುಸಾರವಾಗಿ ನಿಗದಿತವಯೋಮಾನದಡಿಯಲ್ಲಿ ನೇಮಕ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ಅರ್ಜಿಗಳನ್ನು ಜಿಲ್ಲಾ ಏಡ್ಸ್ ಪ್ರತಿಬಂಧಕ ಹಾಗೂ ನಿಯಂತ್ರಣ ಘಟಕ ನಂ: 34, ಜಿಲ್ಲಾ ಆಡಳಿತ ಭವನ ನವನಗರ ಕಛೇರಿಯಿಂದ ಆಗಸ್ಟ್ 26 ರೊಳಗಾಗಿ ಪಡೆದು, ಸೂಕ್ತ ದಾಖಲಾತಿಗಳೊಂದಿಗೆ ಅಗಸ್ಟ್ 31 ರೊಳಗಾಗಿ ಅರ್ಜಿ ಸಲ್ಲಿಸಬಹುದು ಎಂದು ಆಯ್ಕೆ ಸಮಿತಿ ಸದಸ್ಯ ಕಾರ್ಯದರ್ಶಿಗಳು ಮತ್ತು ಜಿಲ್ಲಾ ಏಡ್ಸ್ ನಿಯಂತ್ರಣ ಅಧಿಕಾರಿಗಳು ಪ್ರಕಟಣೆ ಮೂಲಕ ತಿಳಿಸಿದ್ದಾರೆ.

# ದಸರಾ ದರ್ಬಾರ ದಿಂದ ಅಂತರ ಕಾಯ್ದುಕೊಂಡ :ಹಾರಕೂಡದ ಶ್ರೀಗಳು



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಆ 16 ಕೆಲ ತಿಂಗಳ ಹಿಂದೆ ಭಕ್ತರು ಮತ್ತು ಕೆಲವು ಮಠಾದಿಶರುಗಳು ಸಭೆ ಸೇರಿ ಶ್ರೀ ರಂಭಪುರಿ ಜಗದ್ಗುರುಗಳ ವಾರ್ಷಿಕ "ದಶರಾ ದರ್ಬಾರ್ "ಅನ್ನು ಮಹಾತ್ಮಾ ಬಸವಣ್ಣನವರ ಕಾಯಕದ ಪುಣ್ಯ ಭೂಮಿ ಬಸವಕಲ್ಯಾಣದಲ್ಲಿ ಆಚರಿಸಲು ತೀರ್ಮಾನಿಸಲಾಯಿತು.

ದಿನಾಂಕ 10.08.2025ರಂದು ಹಾರಕೂಡ ಶ್ರೀಮಠದಲ್ಲಿ ಸಮೀತಿಯ ಎಲ್ಲಾ ಸದಸ್ಯರು ಕೂಡಿಕೊಂಡು ಸಮೀತಿಯ ಅಧ್ಯಕ್ಷರಾದ ಈಶ್ವರ ಖಂಡರೆಯವರ ಅನುಮತಿ ಪಡೆದು ಸಮೀತಿಯ ಕಾರ್ಯಧ್ಯಕ್ಷರಾದ ಹಾಗೂ ಶಾಸಕರಾದ ಶರಣು ಸಲಗರ ಅವರ ಸಮ್ಮುಖದಲ್ಲಿ ಹಾರಕೂಡ ಶ್ರೀಗಳ ನೇತೃತ್ವದಲ್ಲಿ ಎಲ್ಲರ ಸಹಮತದೊಂದಿಗೆ ವಿಜಯ ದಶಮಿ ಯಂದು ಬಸವಕಲ್ಯಾಣದಲ್ಲಿ ನಡೆಯುವ ರಂಭಾಪುರಿ ಜಗದ್ಗುರುಗಳ ಅಡ್ಡ ಪಲ್ಲಕ್ಕಿಯ ಮೆರವಣಿಗೆಯನ್ನು ಭಕ್ತರ ಹೆಗಲ ಮೇಲೆ ಮಾಡದೆ ಅಲಂಕಾರಿತ ವಾಹನದಲ್ಲಿ ನಡೆಸಲು ಒಮ್ಮತದಿಂದ ತೀರ್ಮಾನಿಸಲಾಯಿತು.

ಆದರೆ ದಿನಾಂಕ 13.08.2025 ಬುಧುವಾರ ದಂದು ತಡೋಳಾ ಶ್ರೀಗಳ ನೇತೃತ್ವದಲ್ಲಿ 20 ಶ್ರೀಗಳು ಹಾರಕೂಡ ಮಠಕ್ಕೆ ಆಗಮಿಸಿ ನಾವು ದಸರಾ ದರ್ಬಾರದ ವಿಜಯ ದಶಮಿಯ ದಿನ ಬಸವಕಲ್ಯಾಣದಲ್ಲಿ ರಂಭಾಪುರಿ ಜಗದ್ಗುರುಗಳ ಅಡ್ಡಪಲ್ಲಕ್ಕಿಯನ್ನು ಭಕ್ತರ ಹೆಗಲ ಮೇಲೆಯೇ ಮಾಡುತ್ತೇವೆ ಎಂದು ಹಠ ಹಿಡಿದು ನಿರ್ಗಮಿಸಿದರು.

ಬಸವಣ್ಣನವರ ಕಾಯಕದ ಪುಣ್ಯ ಭೂಮಿಯಲ್ಲಿ ಬಸವಣ್ಣ ನವರ ಆಶಯ ದಂತೆ ಮತ್ತು ತತ್ವ ಸಿದ್ಧಾಂತಕ್ಕೆ ಧಕ್ಕೆ ಬರಬಾರದು ಮತ್ತು ರಂಭಾಪುರಿ ಪೀಠದ ಘೋಷ ವಾಕ್ಯ "ಮಾನವ ಧರ್ಮಕ್ಕೆ ಜಯವಾಗಲಿ" ಎಂಬ ಉದ್ದೇಶದಂತೆ ಅಡ್ಡ ಪಲ್ಲಕ್ಕಿ ಮೆರವಣಿಗೆ ಯನ್ನು ನಮ್ಮ ಸಮೀತಿಯ ತೀರ್ಮಾನದಂತೆ ಭಕ್ತರು ಹೊರುವ ಬದಲು ಅಲಂಕಾರಿತ ವಾಹನದಲ್ಲಿ ಮಾಡಲು ಈ ಹಿಂದೆ ತೀರ್ಮಾನಿಸಲಾಗಿತ್ತು.

ಈಗ ರಂಭಾಪುರಿ ಶ್ರೀಗಳು ಅವರ ಪೀಠದ ಪರಂಪರೆಯಂತೆ ಭಕ್ತರ ಹೆಗಲ ಮೇಲೆಯೇ ಪಲ್ಲಕ್ಕಿ ಉತ್ಸವ ಮಾಡಿಕೊಳ್ಳುತ್ತೇವೆ ಎಂದು ತಿಳಿಸಿದರು.

ನಾವು ಈ ಮೊದಲು ಸಮಿತಿಯವರು ತೆಗೆದುಕೊಂಡ ನಿರ್ಣಯ ಬದಲಿಸಲು ನಿರಾಕರಿಸಿ ದಸರಾ ದರ್ಬಾರ ಕಾರ್ಯಕ್ರಮ ದಿಂದ ಹಾರಕೂಡ ಶ್ರೀಗಳಾದ ನಾವು ದೂರಸರಿಯಲು ತೀರ್ಮಾಸಿದ್ದೇವೆ.

ಕೋಟ್ಯಂತರ ಬಸವ ಭಕ್ತರಿಗೂ ಮತ್ತು ಮಾನವೀಯತೆಯಲ್ಲಿ ನಂಬಿಕೆ ಇಟ್ಟ ಜನರ ಮನಸ್ಸುಗಳನ್ನು ಘಾಸಿಗೊಳಿಸಬಾರದೆಂದು ದಸರಾ ದರ್ಬಾರ ದಿಂದ ನಾವು ದೂರ ಸರಿದಿದ್ದೇವೆ.

ಈ ಸಮಾಜದಲ್ಲಿ ವಡಕು ಉಂಟಾಗಬಾರದೆಂದು ನಮ್ಮ ನಿರ್ಣಯಕ್ಕೆ ಬದ್ಧವಾಗಿ ದಸರಾ ದರ್ಬಾರದಿಂದ ದೂರ ಉಳಿಯುವ ನಿರ್ಧಾರಕ್ಕೆ ಬಂದಿದ್ದೇವೆ.

ನಾವುಗಳು, ನಮ್ಮ ಮಠ ಮತ್ತು ನಾನು ಎಂದೂ ಯಾರಿಗೂ ಮನಸ್ಸು ನೋಯಿಸಿಲ್ಲ ಮತ್ತು ನೋಯಿಸುವುದಿಲ್ಲ, ಅವರ ಪರಂಪರೆ ಬೇಡ ಎನ್ನಲು ನಮಗೆ ಹಕ್ಕಿಲ್ಲ, ಅವರು ಆಚರಿಸುವ ದಸರಾ ದರ್ಬಾರಕ್ಕೆ ನಮ್ಮ ಶುಭ ಹಾರೈಕೆ ಇರುತ್ತದೆ ಎಂದು ಪತ್ರದಲ್ಲಿ ಬರೆದು ಮಾಧ್ಯಮಕ್ಕೆ ಬಿಡುಗಡೆ ಮಾಡಿದ್ದಾರೆ.


**CITATION**

**IN THE COURT OFH ATE PRL. CIVIL JUDGE AND JMFC HUMNABAD AT HUMNABAD**

**CRL.MISC. NO. 599/2025**

PETTITIONERS:-

1. Shushila W/o late Prakash Age; 50 years Occu: House Hold R/o Town Humnabad Dist:Bidar.

RESPONDENT:-

The Registrar Of Birth and Death –through the C.M.C., Humnabad.

Whereas the above named petitioners have filed the petition under section 13 (3) of Birth and Death Registration Act 1969 praying this Honourable court to issue Death certificate of husband of petitioner no. 1, Father-in-Law namely : Sabanna S/o Chanappa Who died on 07-09-1999 at Town Humnabad Tq:Humnabad. The petitioners claiming the death certificate of deceased Sabanna for transfer of property and other official purpose and home record.

Therefore, it is hereby proclaimed that if any persons have got any objection in this regard he/they may approach to honourable court on 11/09/2025 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this 13th day of August-2025.

//By order of the court//

(SMT. MAHANANDA MATHAPATI)
Chief Ministerial Officer,
Prl. Civil Judge and JMFC Court,
Humnabad


# ಕಾಂಗ್ರೆಸ್ ಸಮಿತಿಯ ಹಿಂದುಳಿದ ವರ್ಗಗಳ ರಾಜ್ಯ ಉಪಾಧ್ಯಕ್ಷ ವಾಘಮಾರೆಗೆ ಸನ್ಮಾನ





ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಕಾಂಗ್ರೆಸ್ ಹಿಂದುಳಿದ ವರ್ಗಗಳ ಹಿರಿಯ ಮುಖಂಡರಾದ ಡಾ. ಸಿದ್ರಾಮ ವಾಘಮಾರೇ ಇವರು ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ರಾಜ್ಯ ಉಪಾಧ್ಯಕ್ಷರಾಗಿ ಆಯ್ಕೆಯಾದ ಪ್ರಯುಕ್ತ ಪಟ್ಟಣದ ಗೊಂದಳಿ ಕಾಲೋನಿಯಲ್ಲಿರುವ ಶ್ರೀ ರೇಣುಕಾ ದೇವಿಯ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ ದೇವಿಯ ದರ್ಶನ ಪಡೆದರು. ಈ ಸಂದರ್ಭದಲ್ಲಿ ಸಮಾಜ ಕಾರ್ಯಕರ್ತ ಹಾಗೂ ಪರಿಸರವಾದಿ ಮಹಮ್ಮದ್ ಅಸ್ಲಾಂಮಿಯಾ ಅವರು ಹಾಗೂ ಗೊಂದಳಿ ಸಮಾಜದವರು ಶಾಲು ಹೊದಿಸಿ ಸನ್ಮಾನಿಸಿದರು. ನಂತರ ಸಮಾಜ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ ಮಾತನಾಡಿ, ಕರ್ನಾಟಕ ಕಾಂಗ್ರೆಸ್ ಹಿಂದುಳಿದ ವರ್ಗಗಳ ರಾಜ್ಯ ಉಪಾಧ್ಯಕ್ಷರಾಗಿ ಡಾ. ಸಿದ್ರಾಮ ವಾಘಮಾರೇ ಆಯ್ಕೆಮಾಡಿದನ್ನು ನನಗೆ ತುಂಬಾ ಸಂತೋಷ ತಂದಿದೆ ಎಂದರು. ಸಿದ್ರಾಮ ವಾಘಮಾರೇ ಅವರು ಸರ್ವ ಜನಾಂಗದವರ ಜೊತೆಯಲ್ಲಿ ಬಹಳ ಸರಳ ಸ್ವಭಾವದ ಇರುವ ವ್ಯಕ್ತಿ ಆಗಿದ್ದಾರೆ, ರಾಜ್ಯದ ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಿ ಎಂದು ಹೇಳಿದರು. ಡಾ. ಸಿದ್ರಾಮ ವಾಘಮಾರೇ ಮಾತನಾಡಿ, ನನಗೆ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಹಿಂದುಳಿದ ವರ್ಗಗಳ ವಿಭಾಗದ ರಾಜ್ಯ ಉಪಾಧ್ಯಕ್ಷರಾಗಿ ನೇಮಕ ಮಾಡಿದ ಕೆಪಿಸಿಸಿ ರಾಜ್ಯಾಧ್ಯಕ್ಷ ಡಿ.ಕೆ. ಶಿವಕುಮಾರ್ ಅವರಿಗೆ, ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ, ಹಿಂದುಳಿದ ವರ್ಗಗಳ ರಾಜ್ಯಾಧ್ಯಕ್ಷ ಎಸ್.ಮಧು ಬಂಗಾರಪ್ಪನವರಿಗೆ ಹಾಗೂ ಜಿಲ್ಲೆಯ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ, ರಹೀಮ್ ಖಾನ್, ಮಾಜಿ ಸಚಿವ ರಾಜಶೇಖರ ಪಾಟೀಲ್, ಜಿಲ್ಲಾಧ್ಯಕ್ಷ ಬಸವರಾಜ ಜಾಬಶೆಟ್ಟಿ ಸೇರಿದಂತೆ ಜಿಲ್ಲೆಯ ನಾಯಕರಿಗೆ, ಧನ್ಯವಾದಗಳು ಸಲ್ಲಿಸುತ್ತಾ ಮಾತನಾಡಿ, ಕಾಂಗ್ರೆಸ್ ಪಕ್ಷ ನನಗೆ ನೀಡಿರುವ ಜವಾಬ್ದಾರಿಯನ್ನು ನಿಷ್ಠೆಯಿಂದ ಪ್ರಾಮಾಣಿಕವಾಗಿ ಕೆಲಸ ಮಾಡಿ, ಕಾಂಗ್ರೆಸ್ ಹಿಂದುಳಿದ ವರ್ಗಗಳ ಸಂಘಟನೆಗಾಗಿ ಹಗಲಿರಳು ಶ್ರಮಿಸುವುದಾಗಿ ಹೇಳಿದರು. ಇದೇ ಸಂದರ್ಭದಲ್ಲಿ ಪರಿಸರವಾದಿ ಮಹಮ್ಮದ್ ಅಸ್ಲಾಂಮಿಯಾ ನೇತೃತ್ವದಲ್ಲಿ ಅರಳಿ ಗಿಡ ನೆಟ್ಟಲಾಯಿತ್ತು. ಈ ಸಂದರ್ಭದಲ್ಲಿ ಮಾಣಿಕರಾವ ಚವ್ಹಾಣ, ಮನೋಹರರಾವ ಚವ್ಹಾಣ, ರಮೇಶ ಉಪ್ಪಾರ, ಗುರು ಪಂಚಾಳ, ಬಾಲಾಜಿ ಗಣೇಶ್, ಮಂಗಲಬಾಯಿ ಚವ್ಹಾಣ, ಮಂಜುಳಾ ಚವ್ಹಾಣ, ಪೂಜಾ ಪಂಚಾಳ, ರಾಜಕುಮಾರ್ ಆರ್. ಹಡಪದ, ಸೈಯದ್ ಅಜೀಮ್, ಸೇರಿದಂತೆ ಇತರರು ಉಪಸ್ಥಿತರಿದ್ದರು.

# 'ವೀರ ರಕ್ತ ರಾಗಿಣಿ'

ಪ್ರಥಮ ಸ್ವಾತಂತ್ರ್ಯ ಸಂಗ್ರಾಮದ ಕಿಡಿಯು ಬಡಗಣದಿಂದ ತೆಂಕಣಕ್ಕೆ ಹಬ್ಬಿ
ಗೆಲುವಿನ ಕಾಮನಬಿಲ್ಲೊಂದು ಮೂಡುತ ಬದಲಾಯಿತು ಬರ ಸಿಡಿಲಿನಲಿ
ಪರೋಕ್ಷವಾಗಿ ಕೆಂಪು ಕದೀಮರಿಗೆ ನೆರವಾದ ಕುತಂತ್ರಿ ನಾಯಕರು
ದೇಶಕ್ಕೆ ದೇಶವ ದಬ್ಬಿದರು ಬ್ರಿಟಿಷರ ದಾಸ್ಯತ್ವದ ಮಡಿಲಿನಲಿ
ಕಡಲಾಚೆಯ ಕುನ್ನಿಗಳೆದುರು ಸಗ್ಗದ ಬಗ್ಗದ ಕ್ರಾಂತಿಕಾರಿಗಳು
ಮರಣಕೆ ಮೀರಿ ಹೋಮಕೆ ಹಾರಿ ಸಿಡಿದೆದ್ದರು ಬೆಳಗಂ-ಬಂಗಾಲದಲಿ
ಸಿಪಾಯಿ ದಂಗೆಯ ಕಿಚ್ಚಿನ ಬಿಸಿಯು ಮನೆ ಮನಗಳಿಗೆ ತಾಗುತಲಿರಲು
ಸ್ವರಾಜ್ಯದ ತಳಹದಿ ಹಾಕಿದರೆಲ್ಲರು ಕಂಕಣ ಕಟ್ಟಿ ಛಲದಲ್ಲಿ
.ಹೋರಾಟದ ಬೀಜವ ಬಿತ್ತಿದರು ನೆತ್ತರು ಹರಿಸಿ ನೆಲದಲ್ಲಿ
ಭಾರತ ಬಿಟ್ಟು ತೊಲಗೆಂಬ ಘೋಷಣೆ ಮೊಳಗಿಸಿ ಭುವಿ-ಬಾನಲ್ಲಿ
ಭಾರತಮಾತೆಯ ತಿಲಕವೀರರು, ಬಂಧನ ಕಳಚಿದ ಶೂರ ವೀರರು
ಕಪ್ಪವ ಕೊಡದೆ, ಖಡ್ಗವ ಹಿಡಿದು ನಿಂತರು ಕಡುಗಲಿಗಳು ಕರುನಾಡಲ್ಲಿ
ಕ್ರಾಂತಿಯ ಅಗ್ನಿಗೆ ತುಪ್ಪವ ಎರೆದು, ಮಾತೃಭೂಮಿಯ ಮುಕ್ತಿಗೆ ಒಲಿದು
ಜೀವ ಹೂವನು ಹೆಣೆಯುತ ಹೋದರು ರಕ್ತಮಂಜರಿಯ ಮಾಲೆಯಲಿ
ಬಂಧನ ಶೃಂಖಲೆಗಳೆಲ್ಲವ ಭೇದಿಸಿ, ನಾಡದೀಕ್ಷೆಯ ಭಸ್ಮವ ಧರಿಸಿ
ತ್ಯಾಗ ತಪಸ್ಸಿನ ದೀಪವ ಬೆಳಗಿ ಇಳಿದರು ರಣರಂಗದ ಜ್ವಾಲೆಯಲಿ
ರಕ್ತ ವೀಣೆಯ ರಾಗತಾಳದಿ, ಸ್ವಾಭಿಮಾನದ ಅಲೆಯ ಆಳದಿ
ಯಶಸ್ಸಿನ ಸುಮ ಸೌರಭ ಸೂಸಿತು ಸ್ವದೇಶಿ ಸೇನೆಯು ಸಮರದಲಿ
ವ್ಯಾಪಾರದ ತಕ್ಕಡಿ ಹಿಡಿದ ಕೈಯಿಂದ ಅಧಿಕಾರದ ಚುಕ್ಕಾಣಿ ಜಾರಲು
ಸ್ವತಂತ್ರದ ಸೂರ್ಯ ಉದಯವಾಯಿತು ನಡುರಾತ್ರಿಯ ಅಂಧಕಾರದಲಿ.



ಕವಯತ್ರಿ : ದೇವಿ ಶೀಲವಂತ
ಜೀವಶಾಸ್ತ್ರ ಉಪನ್ಯಾಸಕಿ
ಬಸವಕಲ್ಯಾಣ

# ಸಂಸ್ಮರಣಾ ಕಾರ್ಯಕ್ರಮ-ಅನ್ನ ಸಂತರ್ಪಣೆ ಬೀಳೂರು ಶ್ರೀಗಳ ಸಂಭ್ರಮದ ಪಲ್ಲಕ್ಕಿ ಉತ್ಸವ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.16- ಮಕ್ಕಳನ್ನು ಸೃಜನಶೀಲರು ಹಾಗೂ ಕ್ರೀಯಾಶೀಲರನ್ನಾಗಿ ಬೆಳೆಸುವ ನಿಟ್ಟಿನಲ್ಲಿ ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘ ಜ್ಞಾನ ದಾಸೋಹ ಮಾಡುತ್ತಿದೆ ಎಂದು ಶೇಗುಣಸಿ ವಿರಕ್ತಮಠದ ಪೂಜ್ಯ ಡಾ.ಮಹಾಂತಪ್ರಭು ಸ್ವಾಮೀಜಿ ಹೇಳಿದರು.

ನಗರದ ಬಿವಿವಿ ಸಂಘದ ನೂತನ ಸಭಾ ಭವನದಲ್ಲಿ ಬೀಳೂರು ಉತ್ಸವ ಸಮಿತಿಯಿಂದ ಶನಿವಾರ ಹಮ್ಮಿಕೊಂಡ ಸಂಘದ ಸಂಸ್ಥಾಪಕ ಅಧ್ಯಕ್ಷರಾದ ಬೀಳೂರು ಗುರುಬಸವ ಸ್ವಾಮಿಜಿ ಪುಣ್ಯಸ್ಮರಣೆ, ಶ್ರಾವಣ ಮಾಸದ ಉತ್ಸವ ಹಾಗೂ ಸಂಸ್ಮರಣಾ ಕಾರ್ಯಕ್ರಮದ ಸಾನಿಧ್ಯವಹಿಸಿ ಶ್ರೀಗಳು ಮಾತನಾಡಿದರು.

ನಿನಗೆ ನೀನು ಬೆಳಕಾದರೆ ಎಲ್ಲರಿಗೂ ಬೆಳಕಾಗುವ ಶಕ್ತಿ ನಿನ್ನಲ್ಲಿ ಬರುತ್ತದೆ. ಮನುಷ್ಯರನ್ನು ಮನುಷ್ಯರಾಗಿ ಬೆಳೆಸುವುದೇ ಶೀಕ್ಷಣ. ಸಾರ್ಥಕ 120 ವರ್ಷಗಳಿಂದ ಜನಸಾಮಾನ್ಯರಿಗೆ ಜ್ಞಾನವನ್ನು ನೀಡುತ್ತಿರುವ ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘ, ಮುಂದಿನ 30 ವರ್ಷಗಳ ಬೆಳವಣಿಗೆಯನ್ನು ಗಮದಲ್ಲಿಟ್ಟುಕೊಂಡು ಇಂದಿನ ವಿದ್ಯಾರ್ಥಿಗಳಿಗೆ ಬೇಕಾದ ಶಿಕ್ಷಣವನ್ನು ಬಿವಿವಿ ಸಂಘ ನೀಡುತ್ತಿದೆ ಇದಕ್ಕೆಲ್ಲಾ ಬೀಳೂರು ಗುರುಬಸವ ಶ್ರೀಗಳು ಪ್ರೇರಕ ಶಕ್ತಿಯಾಗಿದ್ದಾರೆ ಎಂದು ಸ್ವಾಮೀಜಿ ಹೇಳಿದರು.

ಉಪನ್ಯಾಸ ನೀಡಿದ ಬೀಳಗಿ ಕಲ್ಮಠದ ಗುರುಪಾದ ಶಿವಾಚಾರ್ಯರು, ಬೀಳೂರು ಅಜ್ಜನವರ ಮಹಾಸಂಕಲ್ಪಕ್ಕೆ ಕೈ ಜೋಡಿಸಿದ ನಗರದ ಅನೇಕ ಜನ ವರ್ತಕರು, ಶಿಕ್ಷಣ ದಾನಿಗಳ ಸಾಮಾಜಿಕ ಸೇವೆ ಸ್ಮರಣಿಯವಾಗಿದೆ. ಕಾಲ ಕಾಲಕ್ಕೆ ಅವರನ್ನು ನೆನಪಿಸಿಕೊಳ್ಳುವುದು ಅಗತ್ಯ ಎಂದರು. ಟೀಕಿನಮಠದ ಮಲ್ಲಿಕಾರ್ಜುನ ದೇವರು ಮಾತನಾಡಿ, ಬಿವಿವಿ ಸಂಘ ಸಾಮಾಜಿಕ, ಶೈಕ್ಷಣಿಕ ಸೇವೆಯನ್ನು ವಿಸ್ತಾರಗೊಳಿಸುತ್ತಿರುವುದು ಹೆಮ್ಮೆಯ ವಿಷಯವಾಗಿದೆ ಎಂದರು.

ಸಂಘದ ಆಡಳಿತಾಧಿಕಾರಿ ವಿ.ಆರ್.ಶಿರೂಳ ಪ್ರಾಸ್ತಾವಿಕವಾಗಿ ಮಾತನಾಡಿ, ಐದು ಜನ ವಿದ್ಯಾರ್ಥಿಗಳಿಂದ ಪ್ರಾರಂಭವಾದ ಸಂಸ್ಥೆ ಇಂದು 60 ಸಾವಿರ ವಿದ್ಯಾರ್ಥಿಗಳಿಗೆ ಜ್ಞಾನದಾಸೋಹ ನೀಡುತ್ತಿದೆ. ಒಂದು ಸಂಸ್ಕೃತ ಪಾಠಶಾಲೆಯಿಂದ ಪ್ರಾರಂಭವಾದ ವಿದ್ಯಾಸಂಸ್ಥೆ ಇಂದು 178 ಸಂಸ್ಥೆಗಳಾಗಿ ಬೆಳೆದಿದೆ ಎಂದು ತಿಳಿಸಿದರು.

ಬಿವಿವಿ ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ, ಉತ್ಸವ ಸಮಿತಿ ಅಧ್ಯಕ್ಷ ಬಿ.ಆರ್.ಬೋಳಿಶೆಟ್ಟಿ, ಎ.ಎಸ್.ಪಾವಟೆ ಮತ್ತಿತರರು ಇದ್ದರು.

ಬೆಳಗಿನ ಜಾವ ಬೀಳೂರು ಗುರುಬಸವ ಸ್ವಾಮೀಜಿ ಮೂರ್ತಿಗೆ ರುದ್ರಾಭಿಷೇಕ, ಶಿವ ಸಹಸ್ರನಾಮ ಸ್ತೋತ್ರಗಳಿಂದ ಪೂಜೆ ಸಲ್ಲಿಸಿ, ಮಹಾಮಂಗಳಾರುತಿ ಮಾಡಿ ನಂತರ ಸ್ವಾಮೀಜಿಗಳು ಹಾಗೂ ಸಂಘದ ಕಾರ್ಯಾಧ್ಯಕ್ಷ ವೀರಣ್ಣ ಚರಂತಿಮಠ ಅಜ್ಜನವರ ಮೂರ್ತಿಗೆ ಮಾಲಾರ್ಪಣೆ ಮಾಡಿದರು.

ನಂತರ ಬೀಳೂರ ಅಜ್ಜನವರ ಪಲ್ಲಕ್ಕಿ ಉತ್ಸವದ ಮೆರವಣಿಗೆ ದೇವಸ್ಥಾನದ ಆವರಣದಿಂದ ಕರಡಿಮಜಲು, ವಾದ್ಯವೈಭವದೊಂದಿಗೆ ಆರಂಭವಾಗಿ ಸಂಘ ಆವರಣದಲ್ಲಿರುವ ಮಹಾವಿದ್ಯಾಲಯಗಳ ಮುಂದೆ ಸಾಗಿ ಬನ್ನಿಕಟ್ಟೆಯವರೆಗೆ ಹೋಗಿ, ಮರಳಿ ದೇವಸ್ಥಾನಕ್ಕೆ ಬಂದಿತು.

ಮಧ್ಯಾಹ್ನ ವೀರಭದ್ರೇಶ್ವರ ಸಾಂಸ್ಕೃತಿಕ ಭವನ ಹಾಗೂ ಬಸವೇಶ್ವರ ಮಂಗಲ ಭವನದಲ್ಲಿ ಅನ್ನಸಂತರ್ಪಣೆ ಏರ್ಪಡಿಸಲಾಗಿತ್ತು. ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು, ಶಿಕ್ಷಕರು, ಸಾರ್ವಜನಿಕರು ಅನ್ನ ಪ್ರಸಾದ ಸವಿದರು.

# ಜಿಲ್ಲೆಯಲ್ಲಿ ಕೈಗಾರಿಕೆ ಸ್ಥಾಪನೆಗೆ ಆದ್ಯತೆ:ಸಂಸದ ಸಾಗರ ಖಂಡ್ರೆ

## ಭಾಲ್ಕಿ:ಅ.16: ಜಿಲ್ಲೆಯಲ್ಲಿ ಕೈಗಾರಿಕೆ ಸ್ಥಾಪನೆಗೆ ಆದ್ಯತೆ ನೀಡುವುದಾಗಿ ಸಂಸದ ಸಾಗರ ಖಂಡ್ರೆ ಭರವಸೆ ನೀಡಿದರು.



ಹಣ, ಅಂತಸ್ತು, ಅಧಿಕಾರ ಮುಖ್ಯವಲ್ಲ ಉತ್ತಮ ಚಾರಿತ್ರ್ಯ, ವ್ಯಕ್ತಿತ್ವ ಇರುವವರು ನಿಜವಾದ ಶ್ರೀಮಂತರು.

**– ಗುರುಬಸವ ಪಟ್ಟದ್ದೇವರು ಹಿರೇಮಠ ಸಂಸ್ಥಾನ ಭಾಲ್ಕಿ**

ವಿದ್ಯಾರ್ಥಿಗಳಲ್ಲಿ ಕಲಿಕಾ ಆಸಕ್ತಿ ಇದ್ದರೆ ಸಮಾಜದಲ್ಲಿ ಶ್ರೇಷ್ಠ ವ್ಯಕ್ತಿಯನ್ನಾಗಿ ಬೆಳೆಯಲು ಸಾಧ್ಯವಾಗುತ್ತದೆ.

**– ಸಾಗರ ಖಂಡ್ರೆ ಸಂಸದರು ಬೀದರ್**

ಪಟ್ಟಣದ ಜಿ.ಹೆಚ್.ಶಿವಮಠ ನಿಡಗುಂದಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರ ಅಮೃತಮಹೋತ್ಸವ ಅಂಗವಾಗಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಬೀದರ್ ಮತ್ತು ಆಯೋಜಿಸಿದ್ದ ಮಹೀಂದ್ರಾ ಆಂಡ್ ಮಹೀಂದ್ರಾ ಕಂಪನಿ ಸಹಯೋಗದಲ್ಲಿ ಶನಿವಾರ ಆಯೋಜಿಸಿದ್ದ ಅಪ್ರೆಂಟಿಸ್ ತರಬೇತಿ ಕ್ಯಾಂಪಸ್ ಸಂದರ್ಶನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಗಡಿಭಾಗದಲ್ಲಿ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಶೈಕ್ಷಣಿಕ ಕ್ರಾಂತಿಗೈದಿದ್ದಾರೆ. ಅವರ ಸಮಾಜ ಸೇವೆ ನಮ್ಮೆಲ್ಲರಿಗೂ ಪ್ರೇರಣೆಯಾಗಿದೆ. ಅಂತಹ ಪೂಜ್ಯರ ಅಮೃತ ಮಹೋತ್ಸವದ ಸವಿನೆನಪಿಗಾಗಿ ಐಟಿಐ ವಿದ್ಯಾರ್ಥಿಗಳಿಗೆ ಅಪ್ರೆಂಟಿಸ್ ತರಬೇತಿ ಸಂದರ್ಶನ ಏರ್ಪಡಿಸಿರುವುದು ಖುಷಿ ತಂದು ಕೊಟ್ಟಿದೆ ಎಂದರು.

ಜಿಲ್ಲೆಯಲ್ಲಿ ಹೆಚ್ಚೆಚ್ಚು ಕೈಗಾರಿ–ಕೆ ಸ್ಥಾಪಿಸಿ ನಿರುದ್ಯೋಗಿ ಯುವಕರಿಗೆ ಉದ್ಯೋಗ ಕೊಡಿಸುವ ಕೆಲಸ ಆಗಬೇಕಿದೆ ಆ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ತಿಳಿಸಿದರು.

ಐಟಿಐ ಪೂರೈಸಿದವರೆಗೆ ವಿಪುಲ ಅವಕಾಶಗಳಿವೆ. ವಿದ್ಯಾರ್ಥಿಗಳು ತಮ್ಮ ಹಾಜರಾತಿ ಉತ್ತಮವಾಗಿರಿಸಿಕೊಂಡು ಪ್ರತಿಷ್ಠಿತ ಕಂಪನಿಗಳಲ್ಲಿ ಉದ್ಯೋಗಪಡೆದುಕೊಳ್ಳಬೇಕು ಎಂದು ತಿಳಿಸಿದರು.ಸಾನ್ನಿಧ್ಯ ವಹಿಸಿದ ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮಾತನಾಡಿ, ನಮ್ಮ ಭಾಗದ ವಿದ್ಯಾರ್ಥಿಗಳಲ್ಲಿ ಅದ್ಭುತ ಪ್ರತಿಭೆ ಅಡಗಿದೆ. ಅದನ್ನು ಗುರುತಿಸಲು ಸೂಕ್ತ ವೇದಿಕೆ ಕಲ್ಪಿಸುವ ಅಗತ್ಯವಿದೆ.

ಪೂಜ್ಯರ ಅಮೃತ ಮಹೋತ್ಸವ ನೆಪದಲ್ಲಿ ನಮ್ಮ ಭಾಗದ ವಿದ್ಯಾರ್ಥಿಗಳಿಗೆ ಮಹೀಂದ್ರಾ ಕಂಪನಿ ಅವರು ಅಪ್ರೆಂಟಿಸ್ ತರಬೇತಿ ಸಂದರ್ಶನ ಆಯೋಜಿಸಿರುವುದು ಸಂತಸದ ಸಂಗತಿ ಎಂದು ತಿಳಿಸಿದರು.

ಜಿಲ್ಲಾ ಕಸಾಪದ ಕೋಶಾಧ್ಯಕ್ಷ ಶಿವಶಂಕರ ಟೋಕರೆ ಮಾತನಾಡಿ ಜಿಲ್ಲೆಯಲ್ಲಿ 72 ಕೈಗಾರಿಕಾ ತರಬೇತಿ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿವೆ.ಆದರೆ ಹೇಳಿಕೊಳ್ಳುವಂತಹ ಒಂದು ಕೂಡ ಕೈಗಾರಿಕೆ ಇಲ್ಲ.ಸಂಸದರು ಕಾಳಜಿ ವಹಿಸಿ ಜಿಲ್ಲೆಯಲ್ಲಿ ಕೈಗಾರಿಕೆ ಸ್ಥಾಪನೆಗೆ ಒತ್ತು ನೀಡಬೇಕು ಎಂದು ಮನವಿ ಮಾಡಿದರು.

ಪ್ರಾಚಾರ್ಯ ದೇವರಾಜ ಕುಂಬಾರ ಅಧ್ಯಕ್ಷತೆ ವಹಿಸಿದ್ದರು. ಈ ಸಂದರ್ಭದಲ್ಲಿ ಮಹೀಂದ್ರಾ ಕಂಪನಿಯ ವ್ಯವಸ್ಥಾಪಕಿ ಯಾಸ್ಮೀನ್,ಸುನಿಲ್,ಸರಕಾರಿ ಐಟಿಐ ಕಾಲೇಜಿನ ಪ್ರಾಚಾರ್ಯ ಪ್ರಭು, ಎಸ್‌ವಿಇ ಐಟಿಐ ಕಾಲೇಜಿನ ಪ್ರಾಚಾರ್ಯ ಸಂಗಪ್ಪ ಹುಲಸೂರೆ, ಪ್ರವೀಣ ಹಿರೇಮಠ, ರಾಜಕುಮಾರ ಕಲಶೆಟ್ಟಿ,ಬಸವರಾಜ ಗೊರನಾಳೆ, ಮಲ್ಲಿಕಾರ್ಜುನ ಮೇತ್ರೆ,ಪ್ರೇಮ ಕೋರಾಳೆ ಸೇರಿದಂತೆ ಹಲವರು ಇದ್ದರು. ಸುರೇಶ ಪುರವಂತ ಸ್ವಾಗತಿಸಿದರು. ರಾಜಕುಮಾರ ಸ್ವಾಮಿ ನಿರೂಪಿಸಿದರು.

# ನಮ್ಮ ಸಂಸ್ಕೃತಿ, ಪರಂಪರೆಯನ್ನು ಉಳಿಸಲು ಮುಂದಾಗಿ: ಶಾಸಕ ಪ್ರಭು ಚವ್ಹಾಣ





ಔರಾದ:ಅ.16:ಶ್ರೀಕೃಷ್ಣ ಜನ್ಮಾಷ್ಟಮಿಯ ನಿಮಿತ್ತ ಉದ್ಭವಲಿಂಗ ಅಮರೇಶ್ವರ ದಹಿ ಹಂಡಿ ಉತ್ಸವ ಸಮಿತಿಯಿಂದ ಔರಾದ(ಬಿ)ಪಟ್ಟಣದಲ್ಲಿ ಶನಿವಾರ ನಡೆದ 'ದಹಿ ಹಂಡಿ ಸ್ಪರ್ಧೆ' ಜನಮನ ಸೆಳೆಯಿತು.ಯುವಕರ ತಂಡಗಳು ಉತ್ಸಾಹದಿಂದ ಪಾಲ್ಗೊಂಡವು.

ಶ್ರೀಕೃಷ್ಣನ ಬಾಲಲೀಲೆಗಳನ್ನು ಪ್ರತಿಬಿಂಬಿಸುವ ದಹಿ ಹಂಡಿ ಸ್ಪರ್ಧೆಗಾಗಿ ಹೂಹಾರಗಳಿಂದ ಅಲಂಕೃತಗೊಂಡ ಕ್ರೇನ್‌ಗೆ ಎತ್ತರದಲ್ಲಿ ಹಗ್ಗಕ್ಕೆ ಹಂಡಿ(ಮಡಕೆ) ಕಟ್ಟಲಾಗಿತ್ತು. ಯುವಕರ ತಂಡಗಳು ಮಾನವ ಗೋಪುರ ನಿರ್ಮಿಸಿ ಹಂಡಿ ಒಡೆಯಲು ಹಲವು ಪ್ರಯತ್ನಗಳನ್ನು ನಡೆಸಿದವು."ಗೋವಿಂದಾ ಆಲಾ ರೇ!"ಎಂಬ ಘೋಷಣೆಗಳ ಮಧ್ಯೆ ಕಾರ್ಯಕ್ರಮ ಸಂಭ್ರಮದಿಂದ ನೆರವೇರಿತು.ಶಾಸಕರಾದ ಪ್ರಭು ಚವ್ಹಾಣ ಅವರು ಅಮರೇಶ್ವರ ಹಾಗೂ ಶ್ರೀಕೃಷ್ಣನ ಭಾವಚಿತ್ರಕ್ಕೆ ಪೂಜೆ ನೆರವೇರಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಕೃಷ್ಣ–ರುಕ್ಮಿಣಿ ವೇಷಧಾರಿಗಳಾಗಿ ಆಗಮಿಸಿದ್ದ ಮಕ್ಕಳಿಗೆ ಶಾಸಕರು ಬಹುಮಾನ ನೀಡಿ ಪ್ರೋತ್ಸಾಹಿಸಿದರು.

ಈ ವೇಳೆ ಮಾತನಾಡಿದ ಅವರು, ಶ್ರೀಕೃಷ್ಣ ಜನ್ಮಾಷ್ಟಮಿ ನಮ್ಮ ಸಂಸ್ಕೃತಿಯ ಪ್ರಮುಖ ಹಬ್ಬವಾಗಿದೆ.ಶ್ರೀಕೃಷ್ಣಪರಮಾತ್ಮರ ಲೀಲೆಗಳನ್ನು ತಿಳಿಸಲು ಶ್ರೀಕೃಷ್ಣ ಜನ್ಮಾಷ್ಟಮಿಯಂದು ದಹಿ ಹಂಡಿ ಉತ್ಸವವನ್ನು ಆಯೋಜಿಸಲಾಗುತ್ತದೆ. ಈ ಕಾರ್ಯಕ್ರಮ ಉತ್ತರಭಾರತದಲ್ಲಿ ಅತ್ಯಂತ ವಿಜೃಂಬಣೆಯಿಂದ ನಡೆಯುತ್ತದೆ. ನಮ್ಮಲ್ಲಿಯೂ ಕೂಡ ದಹಿ ಹಂಡಿ ಉತ್ಸವ ಜರುಗಬೇಕೆಂಬುದು ಬಹಳಷ್ಟು ದಿನಗಳ ಬಯಕೆಯಾಗಿತ್ತು. ಅದರಂತೆ ಕಳೆದ ವರ್ಷ ಔರಾದ್‌ನಲ್ಲಿ ವೈಭವದಿಂದ ದಹಿ ಹಂಡಿ ಉತ್ಸವ ನಡೆಸಲಾಗಿತ್ತು. ಈ ವರ್ಷವೂ ಆಯೋಜಿಸಲಾಗುತ್ತಿದೆ ಎಂದರು.

ನಮ್ಮ ದೇಶದ ಸಂಸ್ಕೃತಿ, ಪರಂಪರೆಗಳನ್ನು ಉಳಿಸಲು ಇಂತಹ ಕಾರ್ಯಕ್ರಮಗಳು ನಿರಂತರವಾಗಿ ನಡೆಯಬೇಕು. ಈ ದಿಶೆಯಲ್ಲಿ ಎಲ್ಲರೂ ಪ್ರಯತ್ನಿಸಬೇಕು. ಈ ಉದ್ದೇಶದೊಂದಿಗೆ ಯಾವುದೇ ಪಕ್ಷಬೇಧಗಳಿಲ್ಲದೇ ದಹಿ ಹಂಡಿ ಉತ್ಸವ ಏರ್ಪಡಿಸಲಾಗುತ್ತಿದೆ. ಇದು ನನ್ನ ಕಾರ್ಯಕ್ರಮವಲ್ಲ. ಶ್ರೀ ಅಮರೇಶ್ವರರ ಮತ್ತು ಔರಾದ ಪಟ್ಟಣದ ಕಾರ್ಯಕ್ರಮವಾಗಿದ್ದು, ಎಲ್ಲರೂ ಭಾಗವಹಿಸಬಹುದಾಗಿದೆ ಎಂದರು.

ಶಿಕ್ಷಣಕ್ಷೇತ್ರದ ಸುಧಾರಣೆಯಾಗಬೇಕು. ನಮ್ಮ ಮಕ್ಕಳು ಕೂಡ ಐಎಎಸ್, ಐಪಿಎಸ್ ನಂತಹ ಹುದ್ದೆಗಳನ್ನು ಅಲಂಕರಿಸುವಂತಾಗಬೇಕೆಂಬ ಉದ್ದೇಶದಿಂದ ವಿದ್ಯಾರ್ಥಿಗಳ ಮನೋಬಲ ಹೆಚ್ಚಿಸಲು ಪ್ರತಿ ವರ್ಷ ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿ ವಿದ್ಯಾರ್ಥಿಗಳು ಮತ್ತು ಶಿಕ್ಷಕರಿಗೆ ಸನ್ಮಾನಿಸುತ್ತಾ ಬಂದಿದ್ದೇನೆ.ನಮ್ಮ ಸಂಸ್ಕೃತಿಯ ಭಾಗವಾಗಿರುವ ಹಬ್ಬಗಳು, ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಮುಂದುವರೆಸಿಕೊಂಡು ಹೋಗಲು ರಕ್ಷಾಬಂಧನವೂ ಆಯೋಜಿಸಲಾಗುತ್ತಿದೆ. ಈ ವರ್ಷ ನಡೆದಿಲ್ಲ. ಮುಂದೆ ಎಲ್ಲ ಕಾರ್ಯಕ್ರಮಗಳನ್ನು ಮುಂದುವರೆಸಲಾಗುವುದು. ದಹಿ ಹಂಡಿ ಕಾರ್ಯಕ್ರಮ ಜೀವಮಾನ ಇರುವವರೆಗೆ ಮುಂದುವರೆಯಲಿದೆ ಎಂದರು.

ಕನ್ನೈಯ್ಯಾ,ಗೋಪಾಲ,ಕೇಶವ, ದ್ವಾರಕಾಧೀಶ, ವಾಸುದೇವ ಹೀಗೆ ಹಲವಾರು ಹೆಸರುಗಳಿಂದ ಕರೆಸಿಕೊಳ್ಳುವ ಶ್ರೀಕೃಷ್ಣನ ಲೀಲೆಗಳು ಸಾಕಷ್ಟಿವೆ. ಇವರ ಬಗ್ಗೆ ಮಹಾಭಾರತ ಹಾಗೂ ಭಗವದ್ಗೀತೆ ಕಂಡು ಬರುತ್ತದೆ. ಜಗತ್ತಿನಲ್ಲಿ ಅನ್ಯಾಯ,ಅತ್ಯಾಚಾರ ಅಧರ್ಮ, ಅಸತ್ಯ ಹೆಚ್ಚಾದಾಗ ಶ್ರೀಕೃಷ್ಣ ಅವತರಿಸುತ್ತಾರೆ. ಶ್ರೀಕೃಷ್ಣ ಪರಮಾತ್ಮನನ್ನು ಭಕ್ತಿಯಿಂದ ಪೂಜಿಸಿದರೆ ಕಷ್ಟಗಳು ದೂರವಾಗುತ್ತವೆ ಎಂದು ತಿಳಿಸಿದರು.

ನಾನು ಮಹಾಜನತೆಯ ಸೇವಕನಾಗಿದ್ದು ಸದಾ ನಿಮ್ಮ ಜೊತೆಗಿದ್ದೇನೆ. ಸರ್ಕಾರದ ಯೋಜನೆಗಳು ಪ್ರತಿ ಗ್ರಾಮಕ್ಕೆ ತಲುಪಿಸಬೇಕು. ಅರ್ಹರಿಗೆ ಸರ್ಕಾರದ ಸೌಲಭ್ಯಗಳು ಸಿಗಬೇಕೆಂಬ ಉದ್ದೇಶದಿಂದ ಕೆಲಸಮಾಡುತ್ತಿದ್ದು,ಅಭಿವೃದ್ಧಿಯ ಸಂಕಲ್ಪದೊಂದಿಗೆ ಕೆಲಸ ಮಾಡುತ್ತಿದ್ದೇನೆ. ಜನತೆಯೂ ನನ್ನ ಜೊತೆಗಿದ್ದು, ಯಾವುದೇ ಕಷ್ಟಗಳಿಗೆ ಕುಗ್ಗದೇ ಅಭಿವೃದ್ಧಿ ಕೆಲಸಗಳನ್ನು ಮುಂದುವರೆಸುತ್ತೇನೆ ಎಂದು ಹೇಳಿದರು.

ಬಿಜೆಪಿ ಜಿಲ್ಲಾಧ್ಯಕ್ಷರಾದ ಸೋಮನಾಥ ಪಾಟೀಲ ಮಾತನಾಡಿ, ನಮ್ಮ ಸನಾತನ ಸಂಸ್ಕೃತಿಯನ್ನು ಉಳಿಸಿ ಬೆಳೆಸಲು ಶಾಸಕ ಪ್ರಭು ಚವ್ಹಾಣ ಅವರು ನಿರಂತರ ಶ್ರಮಿಸುತ್ತಿದ್ದಾರೆ. ಕೇವಲ ಉತ್ತರ ಭಾರತಕ್ಕೆ ಸೀಮಿತವಾಗಿದ್ದ ದಹಿ ಹಂಡಿ ಉತ್ಸವವನ್ನು ಔರಾದ(ಬಿ) ಪಟ್ಟಣದಲ್ಲಿ ನಡೆಸುತ್ತಿರುವುದು ಉತ್ತಮ ಬೆಳವಣಿಗೆ. ಇಂತಹ ಕಾರ್ಯಕ್ರಮಗಳು ಎಲ್ಲಾ ಕಡೆಗಳಲ್ಲಿ ಆಗಬೇಕು ಎಂದು ಹೇಳಿದರು. ಕಸಾಪ ತಾಲ್ಲೂಕು ಅಧ್ಯಕ್ಷರಾದ ಬಿ.ಎಂ ಅಮರವಾಡಿ ಮಾತನಾಡಿದರು. ಉದ್ಭವಲಿಂಗ ಶ್ರೀ ಅಮರೇಶ್ವರ ದಹಿ ಹಂಡಿ ಉತ್ಸವ ಸಮಿತಿಯ ಅಧ್ಯಕ್ಷ ಶಿವರಾಜ ಅಲ್ಮಾಜೆ ಪ್ರಾಸ್ತಾವಿಕ ಮಾತನಾಡಿದರು.

ಗದಗ ಜಿಲ್ಲೆ ಕಲಕೇರಿ ಮಠದ ಪೂಜ್ಯ ನವೀನಶಾಸ್ತ್ರಿಗಳು ದಿವ್ಯ ಸಾನಿಧ್ಯ ವಹಿಸಿದ್ದರು. ಔರಾದ(ಬಿ)ಪಟ್ಟಣ ಪಂಚಾಯತ್ ಅಧ್ಯಕ್ಷರಾದ ಸರುಬಾಯಿ ಘೂಳೆ, ತಹಸೀಲ್ದಾರರಾದ ಮಹೇಶ ಪಾಟೀಲ, ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಕಿರಣ ಪಾಟೀಲ, ಮುಖಂಡರಾದ ಮಾರುತಿ ಚವ್ಹಾಣ, ರಾಮಶೆಟ್ಟಿ ಪನ್ನಾಳೆ, ಶಿವಾಜಿರಾವ ಪಾಟೀಲ ಮುಂಗನಾಳ, ದಯಾನಂದ ಘೋಳೆ, ಸಂಜು ವಡೆಯರ್, ಬಾಬು ಪವಾರ್, ಸಚಿನ ರಾಠೋಡ, ಕೇರಬಾ ಪವಾರ್, ಉದಯ ಸೋಲಾಪೂರೆ, ಸುಜಿತ ರಾಠೋಡ, ಪ್ರದೀಪ ಪವಾರ, ಧನಾಜಿ ರಾಠೋಡ, ಅಶೋಕ ಶೆಂಬೆಳ್ಳಿ, ಸಂದೀಪ ಪಾಟೀಲ, ಬಸವರಾಜ ಹಳ್ಳೆ, ರಾಮ ನರೋಟೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

*ಬಹುಮಾನ ಗಿಟ್ಟಿಸಿದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು:*ಕಾಲೇಜು ವಿಭಾಗದ ಸ್ಪರ್ಧೆಯಲ್ಲಿ ಔರಾದ(ಬಿ) ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯದ ವಿದ್ಯಾರ್ಥಿಗಳ ತಂಡವು ಅತಿ ಕಡಿಮೆ ಅವಧಿಯಲ್ಲಿ ದಡಡೆಯುವ ಮೂಲಕ ಗೆಲುವಿನ ನಗೆ ಬೀರಿತು. ಅಮರೇಶ್ವರ ಪದವಿ ಕಾಲೇಜು ತಂಡ ದ್ವಿತೀಯ ಮತ್ತು ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ತಂಡ ತೃತಿಯ ಸ್ಥಾನ ಪಡೆಯಿತು. ಸಾರ್ವಜನಿಕ ವಿಭಾಗದಲ್ಲಿ ಮುಕ್ತಿನಾಥ ತಂಡ ಪ್ರಥಮ, ಸಿದ್ದರಾಮೇಶ್ವರ ತಂಡ ದ್ವಿತೀಯ ಮತ್ತು ಇಂದಿರಾನಗರ ತಾಂಡಾ ತಂಡವು ತೃತಿಯ ಸ್ಥಾನ ಗಳಿಸಿತು. ವಿಜೇತ ತಂಡಗಳಿಗೆ ಶಾಸಕರು ನಗದು ಬಹುಮಾನ, ಪಾರಿತೋಷಕ ಹಾಗೂ ಪ್ರಮಾಣ ಪತ್ರ ನೀಡಿ ಗೌರವಿಸಿದರು. ಪ್ರಥಮ ಸ್ಥಾನ ಪಡೆದ ತಂಡಕ್ಕೆ 25 ಸಾವಿರ, ಎರಡನೇ ತಂಡಕ್ಕೆ 15 ಸಾವಿರ ಮತ್ತು ಮೂರನೇ ತಂಡಕ್ಕೆ 10 ಸಾವಿರ ನಗದು ಬಹುಮಾನ ನಿಗದಿಪಡಿಸಲಾಗಿತ್ತು.

# ಹುಮ್ಮಸ್ಸಿನಿಂದ ರಕ್ತ ದಾನ ಮಾಡಿ:ಸಿಪಿಐ ಅಮರೇಶ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಅ.16:ಯುವಕರು ಹುಮ್ಮಸ್ಸಿನಿಂದ ರಕ್ತದಾನ ಮಾಡಲು ಮುಂದಾಗಬೇಕು ಎಂದು ನಗರ ಠಾಣೆಯ ಸಿಪಿಐ ಅಮರೇಶ ಬಿ. ಸಲಹೆ ನೀಡಿದರು.ಪಟ್ಟಣದ ಖಂಡ್ರೆ ಗಲ್ಲಿಯಲ್ಲಿರುವ ಪಾಟೀಲ್ ಮಲ್ಟಿಸ್ಪೆಲಿಸ್ಟ್ ಆಸ್ಪತ್ರೆಯಲ್ಲಿ ರೋಟರಿ ಕ್ಲಬ್ ಆಫ್ ಭಾಲ್ಕಿ ಫೋರ್ಟ್‌ನವರು ಹಮ್ಮಿಕೊಂಡ ರಕ್ತದಾನ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ಇತ್ತೀಚೆಗೆ ರಸ್ತೆ ಅಪಘಾತಗಳು ಹೆಚ್ಚಾಗುತ್ತಿವೆ.ಅಪಘಾತಕ್ಕೊಳಗಾದವರಿಗೆ ರಕ್ತದ ಅವಶ್ಯಕತೆಯಿರುತ್ತದೆ.ಆದರೆ ರಕ್ತದಾನಿಗಳ ಕೊರತೆಯಿಂದ ಬ್ಲಡ್‌ಬ್ಯಾಂಕ್‌ನಲ್ಲಿ ರಕ್ತದ ಅಭಾವ ಕಂಡುಬರುತ್ತಿದೆ.ಬ 'ೀಡಿಕೆಗನುಗುಣವಾಗಿ ರಕ್ತದ ಪೂರೈಕೆಯಿಲ್ಲದಿರುವುದರಿಂದ ದೂರಿನ ಸ್ಥಳಗಳಿಂದ ರಕ್ತ ತರಿಸಿಕೊಳ್ಳಬೇಕಾಗುತ್ತಿದೆ.ಕಾರಣ ನಿರೋಗಿಯಾದ ವ್ಯಕ್ತಿ ಕನಿಷ್ಠ ವರ್ಷಕ್ಕೊಂದು ಸಾರಿ ರಕ್ತದಾನ ಮಾಡಬಹುದು ಎಂದುಹೇಳಿ, ಪ್ರತಿ ವರ್ಷ ರೋಟರಿಕ್ಲಬ್‌ನವರು ಸಾರ್ವಜನಿಕರಿಗಾಗಿ ಉಪಯುಕ್ತವಾದ ಶಿಬಿರಗಳನ್ನು ಏರ್ಪಡಿಸುವ ಕಾರ್ಯಚಟುವಟಿಕೆಗಳು ಶ್ಲಾಘನೀಯವಾಗಿವೆ ಎಂದರು.

ರಕ್ತದಾನ:ಸ್ವಯಂಪ್ರೇರಣೆಯಿಂದ 102 ಜನ ರಕ್ತದಾನ ಮಾಡಿ ಮಾನವೀಯತೆ ಮೆರೆದರು. ಈ ಸಂದರ್ಭದಲ್ಲಿ ರೋಟರಿ ಕ್ಲಬ್ ಅಧ್ಯಕ್ಷ ಅಶ್ವಿನ ಭೋಸ್ಲೆ, ಕಾರ್ಯದರ್ಶಿ ಬಸವ ಪಾಟೀಲ,ಖಜಾಂಚಿ ಸೌರಭ ನಾಯಕ ಮತ್ತು ಪ್ರಮುಖರಾದ ಡಾ.ನಿತೀನ ಪಾಟೀಲ,ಡಾ. ಅನೀಲ ಸುಕಾಳೆ,ನಿ.ಪ್ರಾ. ಅಶೋಕ ರಾಜೋಳೆ,ಜಿಲ್ಲಾ ಅಂಕಿತಾಧಿಕಾರಿ ಡಾ.ಸಂತೋಷ ಕಾಳೆ,ಡಾ.ಅಮೀತ ಅಷ್ಟೂರೆ, ಡಾ.ವಸಂತ ಪವಾರ, ಉದ್ಯಮಿ ಯೋಗೇಶ ಅಷ್ಟೂರೆ,ಡಾ.ಯುವರಾಜ ಜಾಧವ, ವಕೀಲರಾದ ಸಾಗರ ನಾಯಕ, ಶಾಂತನು ಕುಲಕರ್ಣಿ, ಉದ್ಯಮಿ ಸಂಜಯಕುಮಾರ ಪಂಡರಗೆರೆ,ರೋ.ದತ್ತಾತ್ರಿಮೆಹಕ್ರೆ,ಡಾ. ಕವಿತಾಪಾಟೀಲ,ಡಾ.ಶಶಿಕಾಂತ ಭೂರೆ,ಡಾ.ವಿಕ್ರಮ ದೇವಪ್ಪ, ಡಾ.ವಿಲಾಸಕನಸೆ,ಡಾ.ಶ್ರೀರಂಗ ಬಿರಾದಾರ,ಡಾ.ವಿಜಯಕುಮಾರ ರಾಠೋಡ,ಡಾ.ಪ್ರಭುಕೋಟೆ,ಡಾ.ಶರತ ತುಕದೆ,ಡಾ.ವಿಕ್ರಮ ಭಾಲ್ಕೆ,ಡಾ. ಗುಂಡೇರಾವ ಶೆಡೋಳೆ,ಡಾ. ಧನರಾಜ ಹುಲಸುರೆ,ರೋ. ಅಮರ ಜಲ್ದೆ,ರೋ.ಅವಿನಾಶ ಮುಲ್ಗೆ ಸೇರಿದಂತೆ ಆಸ್ಪತ್ರೆ ಸಿಬ್ಬಂದಿ ಉಪಸ್ಥಿತರಿದ್ದರು.

# ದೇಶಕ್ಕೆ ಸ್ವಾತಂತ್ರ್ಯ ಹೋರಾಟಗಾರರ ಕೊಡುಗೆ ಅನನ್ಯ : ಜೆ. ಎಸ್. ಬಿರಾದಾರ



ಮಲ್ಲಮ್ಮ ನುಡಿ ವಾರ್ತೆ

ಔರಾದ(ಬಾ):ಅ.16:ಪಟ್ಟಣದ ನಾಲಂದಾ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಸಂಯುಕ್ತ ಪದವಿ ಪೂರ್ವ ಮಹಾವಿದ್ಯಾಲಯ ಹಾಗೂ ನಾಲಂದಾ ಪ್ರೌಢ ಶಾಲೆಯಲ್ಲಿ ಇಂದು 79 ನೇಯ ಸ್ವಾತಂತ್ರ್ಯ ದಿನಾಚರಣೆಯನ್ನು ಬಹಳ ವಿಜೃಂಭಣೆಯಿಂದ ಆಚರಿಸಲಾಯಿತು.ಪ್ರಾಂಶುಪಾಲರು &ಮುಖ್ಯಗುರುಗಳು,ಅತಿಥಿಗಳೂ ಸೇರಿ ಧ್ವಜಾರೋಹಣ ನೆರವೇರಿಸಿ, ರಾಷ್ಟ್ರಗೀತೆಯನ್ನು ಹಾಡುವ ಮೂಲಕ ಕಾರ್ಯಕ್ರಮವನ್ನು ಪ್ರಾರಂಭಿಸಿದರು.

ಬಳಿಕ, ವಿದ್ಯಾರ್ಥಿಗಳು ದೇಶಭಕ್ತಿಗೀತೆಗಳನ್ನು ಹಾಡಿದರು, ಎಲ್ಲರ ಮೈನವಿರೇಳಿಸುವಂತಹ ಭಾಷಣ ಮಾಡಿದರು ಮತ್ತು ಸ್ವಾತಂತ್ರ್ಯ ಹೋರಾಟಗಾರರ ವೇಷಭೂಷಣಗಳನ್ನು ಧರಿಸಿದ ಕೆಲ ವಿದ್ಯಾರ್ಥಿನಿಯರು ಕುಣಿದು – ಕುಪ್ಪಳಿಸಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಪ್ರದರ್ಶಿಸಿದರು. ಶಾಲೆಯ ಆವರಣವು ಬಣ್ಣ – ಬಣ್ಣದ ರಂಗವಲ್ಲಿಯಿಂದ ಸ್ವಾಗತಿಸಿ, ತ್ರಿವರ್ಣ ಧ್ವಜಗಳಿಂದ ಸಿಂಗರಿಸಲಾಗಿತ್ತು, ಇಡೀ ವಾತಾವರಣ ದೇಶಭಕ್ತಿಯಿಂದ ತುಂಬಿ – ತುಳುಕುತ್ತಿತ್ತು. ಈ ಕಾರ್ಯಕ್ರಮವು ವಿದ್ಯಾರ್ಥಿಗಳಲ್ಲಿ ದೇಶಪ್ರೇಮ ಮತ್ತು ರಾಷ್ಟ್ರೀಯ ಭಾವೈಕ್ಯತೆಯನ್ನು ಮೂಡಿಸುವಲ್ಲಿ ಯಶಸ್ವಿಯಾಯಿತು.

ಮುಖ್ಯಗುರು ಜೆ.ಎಸ್. ಬಿರಾದಾರ ಮಾತನಾಡಿ ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ ಬಲಿದಾನಗಳನ್ನು ಸ್ಮರಿಸುತ್ತಾ, ವಿದ್ಯಾರ್ಥಿಗಳಿಗೆ ದೇಶಕ್ಕಾಗಿ ಏನಾದರೂ ಸಾಧಿಸುವಂತೆ ಪ್ರೇರೇಪಿಸಿ ಸ್ವಾತಂತ್ರ್ಯದ ಮಹತ್ವವನ್ನು ಒತ್ತಿ ಹೇಳಿದರು.

ಸಹಶಿಕ್ಷಕಿ ಪ್ರೀಯಾ. ಎಮ್.ಬಿರಾದಾರ ತಮ್ಮ ಭಾಷಣದಲ್ಲಿ ದೇಶವನ್ನುದ್ದೇಶಿಸಿ 'ಹರ್ ಕಂಕರ್ ಕಂಕರ್ ಮೇ ಶಂಕರ್ ಹೈ, ಹರ್ ಬಿಂದು ಬಿಂದು ಮೇ ಗಂಗಾಜಲ್ ಹೈ' ಎಂಬ ಅಭಿಮಾನದ ಮಾತುಗಳಿಗೆ ಎಲ್ಲರಿಂದಲೂ ಅನಿಯಮಿತವಾಗಿ ಚಪ್ಪಾಳೆಗಳ ಸದ್ದು ಕೇಳಿ ಬಂದಿತ್ತು.

ವಿವಿಧ ಸ್ಪರ್ಧೆ ಹಾಗೂ ಕ್ರೀಡೆಗಳಲ್ಲಿ ವಿಜೇತರಾದ ಮಕ್ಕಳಿಗೆ ಆಕರ್ಷಕ ಬಹುಮಾನಗಳನ್ನು ವಿತರಿಸಿ, 2024 – 25 ನೇ ಶೈಕ್ಷಣಿಕ ವರ್ಷದ ಎಸ್.ಎಸ್. ಎಲ್.ಸಿ ಫಲಿತಾಂಶದಲ್ಲಿ ಅಗ್ರಶ್ರೇಣಿಯಿಂದ ಉತ್ತೀರ್ಣಳಾದ ರೇಣುಕಾ ವಿಠ್ಠಲ್ ಗೆ ಸಹ ಶಿಕ್ಷಕರಾದ ದಿಲೀಪಕುಮಾರ. ಎನ್.ಮೇತ್ರೆ 11,000, ಬಾಲಾಜಿ ರಣವೀರಕರ್ 2,000 ವೈಯ್ಯಕ್ತಿಕವಾಗಿ ಧನಸಹಾಯ ಮತ್ತು ಅಮರ ಸಾಯಲು ಗೆ 3,000 ನೀಡಿ, ಶಾಲು ಹೋದಿಸಿ ಸತ್ಕರಿಸಲಾಯಿತು.

ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ವೇದಿಕೆಗೆ ಶೋಭೆ ತಂದು ಕೊಟ್ಟು, ಜೀವ ತುಂಬಿದ ನೃತ್ಯಗಾಯನ ತಂಡಗಳಿಗೆ ಹಾಗೂ ಅದ್ಭುತವಾಗಿ ಭಾಷಣ ಪಠಿಸಿದ ವಿದ್ಯಾರ್ಥಿಗಳಿಗೆ ಪ್ರಾಂಶುಪಾಲ ಡಾ. ಮನ್ಮಥ ಡೋಳೆ, ಉಪನ್ಯಾಸಕ ದಿಲೀಪ್ ತಾರೆ,

ಸಹಶಿಕ್ಷಕಿ ಜ್ಯೋತಿ.ಡಿ.ಘೂಳೆಯವರು ವಿಶೇಷ ನಗದು ಬಹುಮಾನ ನೀಡಿ, ಅಭಿನಂದಿಸಿದರು.

ಈ ಸಂದರ್ಭದಲ್ಲಿ ಪ್ರೌಢ ಶಾಲೆಯ ಸಹಶಿಕ್ಷಕರಾದ ದಿಲೀಪಕುಮಾರ.ಎನ್.ಮೇತ್ರೆ, ಪರಮೇಶ್ವರ.ಬಿ.ಬಿರಾದಾರ, ಮಲ್ಲಿಕಾರ್ಜುನ.ವ್ಹಿ.ಕೋಟೆ, ಅಸ್ಪಾಕ್ ಮಿಯ್ಯಾ.ಎಸ್.ಬೇಗ್, ಬಾಲಾಜಿ ರಣವೀರಕರ್, ಸಿದ್ಧಾರ್ಥ.ಜೆ.ಕಾಂಬಳೆ,ದೈಹಿಕಶಿಕ್ಷಕ ಸುನೀಲಕುಮಾರ.ಬಿ.ವಾಗಮೋಡೆ, ಸಹ ಶಿಕ್ಷಕಿಯರಾದ

ಪ್ರೀಯಾ.ಎಮ್.ಬಿರಾದಾರ, ಜ್ಯೋತಿ.ಡಿ.ಘೂಳೆ, ಮುಂಡೆ ಜ್ಞಾನೇಶ್ವರಿ. ಎಸ್ ಮತ್ತು ಕಾಲೇಜಿನ ಪ್ರಾಂಶುಪಾಲ ಡಾ. ಮನ್ಮಥ ಡೋಳೆ ಹಾಗೂ ಉಪನ್ಯಾಸಕರು ಸೇರಿದಂತೆ ಬೋಧಕೇತರ ಸಿಬ್ಬಂಧಿ ವರ್ಗದವರು ಉಪಸ್ಥಿತರಿದ್ದರು. ಶಿಕ್ಷಕ ಮಲ್ಲಿಕಾರ್ಜುನ.ವ್ಹಿ.ಕೋಟೆಯವರ ಅಚ್ಚುಕಟ್ಟಾದ ನಿರೂಪಣೆಗೆ ಗಣ್ಯರು ಶ್ಲಾಘಿಸಿದರು. ವಿದ್ಯಾರ್ಥಿಗಳು ಹಾಜರಿದ್ದರು.

# ಸ್ಟಡಿ ಅಬ್ರಾಡ್' ಕಾರ್ಯಕ್ರಮದ ಪೋಸ್ಟರ್ ಬಿಡುಗಡೆ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ:ರಾಜ್ಯದ ವಿದ್ಯಾರ್ಥಿಗಳಿಗೆ ಜಾಗತಿಕ ಉನ್ನತ ಶಿಕ್ಷಣದ ಅವಕಾಶಗಳನ್ನು ಪರಿಚಯಿಸುವ ಉದ್ದೇಶದಿಂದ ಕೌಶಲ್ಯಾಭಿವೃದ್ಧಿ ಮತ್ತು ಜೀವನೋಪಾಯ ಇಲಾಖೆ ಹಾಗೂ ಕರ್ನಾಟಕ ವೃತ್ತಿ ತರಬೇತಿ ಮತ್ತು ಕೌಶಲ್ಯಾಭಿವೃದ್ಧಿ ನಿಗಮ ನಿಯಮಿತ (ಕೆ.ವಿ.ಟಿ.ಎಸ್.ಡಿ.ಸಿ) ವತಿಯಿಂದ ಆಗಸ್ಟ್ 17 ರಂದು ಬೆಂಗಳೂರಿನ ದಿ ಲಲಿತ್ ಅಶೋಕ ಹೋಟೆಲ್‌ನಲ್ಲಿ ಏರ್ಪಡಿಸಲಾಗಿರುವ 'ಸ್ಟಡಿ ಅಬ್ರಾಡ್' ಕಾರ್ಯಕ್ರಮದ ಪೋಸ್ಟ್–ಗಳನ್ನು ಜಿಲ್ಲಾಧಿಕಾರಿ ಡಾ. ಸುರೇಶ್ ಬಿ. ಇಟ್ನಾಳ ಅವರು ಬುಧವಾರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಬಿಡುಗಡೆ ಮಾಡಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಂಜುನಾಥ ಗುಂಡೂರ್, ಜಂಟಿ ಕೃಷಿ ನಿರ್ದೇಶಕ ಟಿ.ಎಸ್. ರುದ್ರೇಶಪ್ಪ, ಕೊಪ್ಪಳ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಕೆ.ಗವಿಶಂಕರ್, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಕೃಷ್ಣ ಸಿ. ಉಕ್ಕುಂದ್, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಅಜ್ಮೀರ್ ಅಲಿ, ಮುಖಂಡರಾದ ನಜೀರಸಾಬ್ ಮೂಲಿಮನಿ, ಮೆಹಬೂಬ್ ಪಾಷಾ ಮಾನ್ವಿ, ಎಂ.ಡಿ ಸಿರಾಜ್ ಸಿದ್ದಾಪುರ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಕೌಶಲ್ಯಾಭಿವೃದ್ಧಿ ಇಲಾಖೆಯ ಇತರೆ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

# ಭಾರತದ ಸ್ವತಂತ್ರ ಸಂಗ್ರಾಮಕ್ಕೆ ಅನೇಕರ ತ್ಯಾಗವಿದೆ: ಡಾ.ಹನಸಿ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ಯುರೋಪಿಯನ್ ವ್ಯಾಪಾರಿಗಳು 17 ನೇ ಶತಮಾನದ ಅಂತ್ಯದ ವೇಳೆಗೆ ಭಾರತೀಯ ಉಪಖಂಡದಲ್ಲಿ ಹೊರಠಾಣೆಗಳನ್ನು ಸ್ಥಾಪಿಸಿದ್ದರು. ಅಗಾಧವಾದ ಮಿಲಿಟರಿ ಶಕ್ತಿಯ ಮೂಲಕ, ಈಸ್ಟ್ ಇಂಡಿಯಾ ಕಂಪನಿಯು ಸ್ಥಳೀಯ ಸಾಮ್ರಾಜ್ಯಗಳನ್ನು ಹೋರಾಡಿ ಮತ್ತು ಸ್ವಾಧೀನಪಡಿಸಿಕೊಂಡಿತು ಎಂದು ಪ್ರಾಂಶುಪಾಲ ಡಾ.ಬಸವರಾಜ ಹನಸಿ ಹೇಳಿದರು.

ಪಟ್ಟಣದ ಗದಗ ರಸ್ತೆಯಲ್ಲಿರುವ ಶಿವಪ್ರೀಯಾ ಕಾನೂನು ಮಹಾವಿದ್ಯಾಲಯದಲ್ಲಿ ಜರುಗಿದ 79ನೇ ಸ್ವಾತಂತ್ರ್ಯ ದಿನಾಚರಣೆ ನಿಮಿತ್ಯ ಧ್ವಜಾರೋಹಣ ನೇರವೇರಿಸಿ ಅವರು ಮಾತನಾಡಿದರು.

18 ನೇ ಶತಮಾನದ ವೇಳೆಗೆ ತಮ್ಮನ್ನು ಪ್ರಬಲ ಶಕ್ತಿಯಾಗಿ ಸ್ಥಾಪಿಸಿತು. 1857 ರ ಭಾರತೀಯ

# ಹನುಮ ದೇವರ ಧ್ವನಿ ಸುರುಳಿ ಬಿಡುಗಡೆ



ಮಲ್ಲಮ್ಮ ನುಡಿ ವಾರ್ತೆ


ಲಿಂಗಸುಗೂರು:– ತಾಲೂಕಿನ ಕೆಸರಹಟ್ಟಿ ಗ್ರಾಮದಲ್ಲಿ ಆರಾಧ್ಯ ದೈವ ವೀರಾಂಜನೇಯ ಪವಾಡಗಳ ಕುರಿತು ಧ್ವನಿಸುರುಳಿ ಬಿಡುಗಡೆಗೊಳಿಸಲಾಯಿತು.

ಕೆಸರಹಟ್ಟಿ ಗ್ರಾಮದ ಸರಕಾರಿ ಶಾಲೆಯ ಶಿಕ್ಷಕ ವೀರೇಶ್ ತೇರದಾಳ್ ರವರು ತಾವು ಕರ್ತವ್ಯ ನಿರ್ವಹಿಸುತ್ತಿರುವ ಗ್ರಾಮದ ಆರಾಧ್ಯ ದೇವರಾದ ವಿರಾಂಜನೇಯನ ಪವಾಡಗಳನ್ನು ಸಂಗ್ರಹಿಸಿ ,ಆ ಪವಾಡಗಳಿಗೆ ಸ್ವರಚಿತ ಸಾಹಿತ್ಯ ,ಗಾಯನ ನೀಡಿದ್ದು,ಇವರೊಂದಿಗೆ ಸಹ ಗಾಯಕರಾದ ಮಂಜುಳಾ ಹಟ್ಟಿ,ಹಾಗೂ ಹೃದಯ ಸಂಗಮ ರೆಕಾರ್ಡಿಂಗ್ ಸ್ಟುಡಿಯೋ ದ ಮಾಲಿಕರಾದ ಹುಸೇನ್ ಸಾಬ್,ಗ್ರಾಮದ ಹಿರಿಯರಾದ ಹನುಮಗೌಡ ಪೊಲೀಸ್ ಪಾಟೀಲ್ ಸೇರಿದಂತೆ ಇತರರು ಕೂಡ ಸಹಕಾರ ನೀಡಿದ್ದಾರೆ.

ಶ್ರಾವಣ ಮಾಸದ ಶನಿವಾರದಂದು ವೀರಾಂಜನೇಯ ಜಾತ್ರಾ ಮಹೋತ್ಸವದ ಪ್ರಯುಕ್ತ ದೇವರಿಗೆ ಅಭಿಷೇಕ ಮಾಡಿ ನಂತರ ಭಕ್ತರ ಸಮ್ಮುಖದಲ್ಲಿ ಹನುಮ ಭಕ್ತಿಗೀತೆಗಳ ಧ್ವನಿ ಸುರುಳಿ ಬಿಡುಗಡೆಗೊಳಿಸಿದರು.

ಈ ಸಂಧರ್ಭದಲ್ಲಿ ಹನುಮಗೌಡ ಮಾಲಿ ಪಾಟೀಲ್,ಹನುಮಂತ ಮರದ,ಹನುಮಂತ ಕುರಿ,ರಾಮಣ್ಣ ಪೂಜಾರಿ,ಪ್ರದ್ಯುಮನ್ ಶಾಸ್ತ್ರಿ,ಸೋಮು ಜಾದವ್ ಸೇರಿದಂತೆ ಇತರರಿದ್ದರು.

# ಅತಿಥಿ ಶಿಕ್ಷಕರ ವೇತನ ಬಿಡುಗಡೆಗೆ ಆಗ್ರಹ




ಶಹಾಪುರ:ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಅತಿಥಿ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿರುವ ಶಿಕ್ಷಕರಿಗೆ ವೇತನ ಬಿಡುಗಡೆ ಮಾಡಬೇಕು ಎಂದು ಅತಥಿ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷರಾದ ತಿಪ್ಪಣ್ಣ ವಡಗೇರಾ ತಾಲುಕಾ ಅಧ್ಯಕ್ಷರಾದ ವೀರೇಶ ಕೊಂಕಲ್ ,ಶಹಾಪುರ ತಾಲುಕಾ ಅಧ್ಯಕ್ಷರಾದ ಮಲ್ಲಿಕಾರ್ಜುನ ರಸ್ತಾಪುರವರು ಶಹಾಪುರ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿ ಆಗ್ರಹ ಮಾಡಿದರು, ಈ ಸಮಯದಲ್ಲಿ ಪಧಾಧಿಕಾರಿಗಳಾದ ಅನೀಲಕುಮಾರ ಹತ್ತಿಗೂಡೂರ, ಮಲ್ಲಿಕಾರ್ಜುನ ಳಿಸಗರ, ಸಂಗಮನಾಥ ಶಹಾಪುರ, ಚಂದ್ರಪ್ಪ ಗೋಗಿ, ಮಲ್ಲಪ್ಪ ಬೋಲಾರಿ, ಮಲ್ಲಿಕಾರ್ಜುನ ಬೀರನೂರ, ವಿಶ್ವಾರಾಧ್ಯ ಕೊಂಕಲ್, ಬೈರಪ್ಪ ಕೌಳೂರ, ಸೇರಿದಂತೆ ಮುಂತಾದವರು ಹಾಜರಿದ್ದರು.

## ನಶಾ ಮುಕ್ತಕ್ಕೆ ಯುವಕರು ಸಮಾಜಮುಖಿ ದಾರಿಯಲ್ಲಿ ತಮ್ಮ ಶಕ್ತಿ ಬಳಸಿ : ಪ್ರೊ. ಬಿ.ಕೆ. ರವಿ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ಯುವಕರು ದೇಶದ ಭವಿಷ್ಯದ ಶಕ್ತಿ. ಅವರ ಶಕ್ತಿಯನ್ನು ಸಮಾಜಮುಖಿ ದಾರಿಯಲ್ಲಿ ಬಳಸಿದಾಗಲೇ ನಶಾ ಮುಕ್ತ, ಅಭಿವೃದ್ಧಿಶೀಲ ಭಾರತದ ಕನಸು ನನಸಾಗುತ್ತದೆ ಎಂದು ಕೊಪ್ಪಳ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಿ.ಕೆ. ರವಿ ಹೇಳಿದರು.

ಯಲಬುರ್ಗಾ ಪಟ್ಟಣದ ಸ್ನಾತಕೋತ್ತರ ಕೇಂದ್ರದಲ್ಲಿ ಹಮ್ಮಿಕೊಂಡಿದ್ದ ಅಂತರಾಷ್ಟ್ರೀಯ ಯುವ ದಿನಾಚರಣೆ ಹಾಗೂ ನಶಾ ಮುಕ್ತ ಭಾರತ ಆಂದೋಲನ ಕಾರ್ಯಕ್ರಮದಲ್ಲಿ ಉದ್ಘಾಟಿಸಿ ಮಂಗಳವಾರ ಮಾತನಾಡಿದರು.

ಇಂದಿನ ಯುವ ಪೀಳಿಗೆಯಲ್ಲಿರುವ ಚುರುಕು, ಬುದ್ಧಿಶಕ್ತಿ, ಸೃಜನಶೀಲತೆ ಇವೆಲ್ಲವನ್ನು ರಾಷ್ಟನಿರ್ಮಾಣದಲ್ಲಿ ಬಳಕೆ ಮಾಡಿಕೊಳ್ಳಬೇಕಿದೆ. ಆದರೆ ಮದ್ಯ, ಮಾದಕ ಪದಾರ್ಥಗಳು ಮತ್ತು ತಂಬಾಕು ಉತ್ಪನ್ನಗಳಂತಹ ವ್ಯಸನಗಳು ಅವರ ಭವಿಷ್ಯವನ್ನು ಹಾಳು ಮಾಡಬಲ್ಲದು. ಅದನ್ನು ತಡೆಗಟ್ಟುವುದು ಪ್ರತಿಯೊಬ್ಬರ ಜವಾಬ್ದಾರಿ ಎಂದರು.

ನಶಾ ಮುಕ್ತ ಭಾರತದ ಕನಸು ಕೇವಲ ಸರ್ಕಾರದ ಯೋಜನೆಯಲ್ಲ, ಅದು ಜನಜಾಗೃತಿ ಚಳವಳಿಯಾಗಿದೆ. ವಿದ್ಯಾರ್ಥಿಗಳು ಈ ಸಂದೇಶವನ್ನು ತಮ್ಮ ಮನೆ, ಬೀದಿ, ಹಾಗೂ ಗ್ರಾಮಗಳಿಗೆ ಕೊಂಡೊಯ್ಯಬೇಕು. ಆರೋಗ್ಯಕರ ಜೀವನಶೈಲಿ, ಉತ್ತಮ ಶಿಕ್ಷಣ ಮತ್ತು ಸಾಮಾಜಿಕ ಹೊಣೆಗಾರಿಕೆ ಇವೇ ನಿಜವಾದ ಯುವಶಕ್ತಿಯ ಗುರುತು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಯಲಬುರ್ಗಾ ಸ್ನಾತಕೋತ್ತರ ಕೇಂದ್ರದ ಆಡಳಿತಾಧಿಕಾರಿ ಛತ್ರದ, ವಿವಿಧ ವಿಭಾಗಗಳ ಉಪನ್ಯಾಸಕರು, ಬೋಧಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ನವಿಕರಣಗೊಂಡ ಗಾಂಧಿ ಮೂರ್ತಿ ಸ್ಥಳ ಲೋಕಾರ್ಪಣೆ

# 15 ಲಕ್ಷ ರೂ. ಅನುದಾನದಲ್ಲಿ ವಿವಿಧ ಕಾಮಗಾರಿ ಕೈಗೊಳ್ಳಲಾಗಿದೆ : ಶಾಸಕ ಪಾಟೀಲ್



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ನವಿಕರಣಕೊಂಡ ಮತ್ತು ವಿವಿಧ ರೀತಿಯಲ್ಲಿ ವಿನ್ಯಾಸಗೊಳಿಸಿ ಹೈಟೆಕ್ ಟಚ್ ನೀಡಿ ಸಿದ್ದಗೊಳಿಸಿದ ಗಾಂಧಿ ಚೌಕ್ ನಲ್ಲಿರುವ ಗಾಂಧಿ ತಾತನ ಮೂರ್ತಿ ಕೆಲಸವನ್ನು ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರು ಶನಿವಾರ ಉದ್ಘಾಟಿಸಿದರು.

ಈ ವೇಳೆ ಮಾತನಾಡಿದ ಅವರು, ರಾಜ್ಯದ ಎಲ್ಲಿಯೂ ಗಾಂಧಿ ಮೂರ್ತಿಗೆ ಮೇಲ್ಚಾವಣಿ ಇಲ್ಲ. ಸುಮಾರು 15 ಲಕ್ಷ ರೂ. ಅನುದಾನದಲ್ಲಿ ವಿವಿಧ ಕಾಮಗಾರಿಗಳನ್ನು ಮಾಡುವ ಮೂಲಕ ಇದನ್ನು ನವಿಕರಿಸಲಾಗಿದೆ ಎಂದರು.

ಯೂರೋಪ್ ದೇಶದಲ್ಲಿ ಸಿದ್ಧವಾಗುವ ಡಾಂಬರ್ ರೂಫ್ (ಸಿಂಗಲ್ಸ್) ಹೊದಿಕೆ ಹೊಚ್ಚಲಾಗಿದ್ದು, ಸುತ್ತಲ್ಲೂ ಸ್ಟೀರ್ ಗ್ರಿಡ್ ಆಳವಡಿಸಲಾಗಿದೆ. ರಾತ್ರಿ ಹೊತ್ತು ಬಣ್ಣ ಬಣ್ಣ ನೀರಿನ ಕಾರಂಪ ಜನಣೆಗೆ ಕಣ್ಣಿಗೆ ಸಂವು ನೀಡಲಿದೆ. ಸರ್ಕಲ್‌ನಲ್ಲಿ ಹೈಮಾಕ್ಸ್ ದೀಪ ಅಳವಡಿಸಿದ್ದು, ಕಟ್ಟೆಯ ಸುತ್ತಲೂ ಗ್ರ್ಯಾನೆಟ್ ಕಲ್ಲು ಹಾಸಲಾಗಿದೆ ಎಂದರು.

ನಗರಸಭೆ ಅಧ್ಯಕ್ಷರಾದ ಲಲಿತಾ ಅನಪೂರ, ನಿರ್ಮಿತಿ ಕೇಂದ್ರ ಇಂಜಿನಿಯರ್ ನಾಗೇಶ ಕುಲಕರ್ಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಾಬುರಾವ ಕಾಡ್ಲೂರ್, ಬ್ಲಾಕ್ ಅಧ್ಯಕ್ಷ ಲಚಮರೆಡ್ಡಿ, ಮಂಜುನಾಥ ದಾಸನಕೇರಿ, ಸಾಬಣ್ಣ ಕೆಂಗುರಿ, ತಿಮ್ಮಣ್ಣನಾಯಕ, ಮಂಜು ಮಡ್ಡಿ, ಕಲೀಮ್ ಜೈನಾ, ದೇವಿದ್ರಪ್ಪ ಪ್ಯಾಟಿ, ಶಿವಕುಮಾರ ಕರ್ದಳ್ಳಿ, ಶರಣಗೌಡ ಮಾಲಿಪಾಟೀಲ್, ವಿಶ್ವನಾಥ್ ಠಾಣಗುಂದಿ, ವಿಶ್ವನಾಥ್ ಬುಡನೂರ್, ಆರೀಫ್ ಇತರರಿದ್ದರು.

## ಪಿಯುಸಿಗೆ ಪ್ರವೇಶ: ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

ರಾಯಚೂರು ಆಗಸ್ಟ್ 12 ಜಿಲ್ಲೆಯ ಮುದಗಲ್ ಪಿ.ಎಮ್ ಶ್ರೀ ಜವಾಹರ್ ನವೋದಯ ವಿದ್ಯಾಲಯದ ವತಿಯಿಂದ ಪಿಯುಸಿ ವಿಜ್ಞಾನ ವಿಭಾಗದ ಪ್ರವೇಶಕ್ಕೆ ಅರ್ಜಿ ಸಲ್ಲಿಸುವ ಅವಧಿಯನ್ನು ಆಗಸ್ಟ್ 20ರವರೆಗೆ ವಿಸ್ತರಿಸಲಾಗಿದೆ. 10ನೇ ತರಗತಿ ಪಾಸದ ರಾಯಚೂರು ಜಿಲ್ಲೆಯ ವಿದ್ಯಾರ್ಥಿಗಳು ವೆಬ್‌ಸೈಟ್ ವಿಳಾಸ: https://forms.gle/6cgjmjq21ZkeqULs7 ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 7204109046 ಅಥವಾ 9703473495ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಪಿ.ಎಮ್ ಶ್ರೀ ಜವಾಹರ್ ನವೋದಯ ವಿದ್ಯಾಲಯದ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ಕಾರದ ಆದೇಶ ಪಾಲಿಸದ ಅಧಿಕಾರಿಗಳ ಅಮಾನತು ಮಾಡಿ: ರಾಯಣ್ಣ ಅಭಿಮಾನಿಗಳಿಂದ ಡಿಸಿಗೆ ಮನವಿ



ಮಲ್ಲಮ್ಮ ನುಡಿವಾರ್ತೆ

ಯಾದಗಿರಿ: ಆಗಸ್ಟ್–15 ಸ್ವಾತಂತ್ರ ದಿನಾಚರಣೆಯಂದು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣರವರ ಭಾವಚಿತ್ರಕ್ಕೆ ಪೂಜೆ ಮಾಡದೇ ಸರ್ಕಾರದ ನಿಯಮ ಉಲ್ಲಂಘಿಸಿರುವ ಯಾದಗಿರಿ ನಗರಸಭೆ ಪೌರಾಯುಕ್ತರು ಹಾಗೂ ಯಾದಗಿರಿ ಕೋಲಿವಾಡ ಸರ್ಕಾರಿ ಪ್ರೌಢಶಾಲೆಯ ಮುಖ್ಯ ಗುರುಗಳ ಮೇಲೆ ಸುಮೋಟೋ ಪ್ರಕರಣ ದಾಖಲಿಸಿ, ಅಮಾನತ್ತು ಮಾಡುವಂತೆ ಸಂಗೊಳ್ಳಿ ರಾಯಣ್ಣ ಅಭಿಮಾನಿ ಬಳಗ ಒತ್ತಾಯಿಸಿದೆ.

ಈ ಕುರಿತು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದ ಅಭಿಮಾನಿ ಬಳಗದ ಅಧ್ಯಕ್ಷ ಹಾಗೂ ಸಾಮಾಜಿಕ ಹೋರಾಟಗಾರ ಭೀಮು ಪೂಜಾರಿ ಮಾತನಾಡಿ, ಆಗಸ್ಟ್–15 ಸ್ವಾತಂತ್ರ ದಿನಾಚರಣೆಯಂದು ಯಾದಗಿರಿ ಜಿಲ್ಲೆಯ ಸರ್ಕಾರಿ ಕಛೇರಿಯಲ್ಲಿ, ಸರ್ಕಾರಿ/ಖಾಸಗಿ ಶಾಲಾ /ಕಾಲೇಜುಗಳಲ್ಲಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣರವರ ಭಾವಚಿತ್ರಕ್ಕೆ ಪೂಜೆ ಮಾಡಿ, ಗೌರವ ಸಲ್ಲಿಸಲು ಉಲ್ಲೇಖಿತ ಪತ್ರದ ಮೂಲಕ ಸರ್ಕಾರ ಹಾಗೂ ಜಿಲ್ಲಾಧಿಕಾರಿಗಳು ಮತ್ತು ಉಪನಿರ್ದೇಶಕರು ಆದೇಶ ಹೊರಡಿಸಿದ್ದು, ಇರುತ್ತದೆ.

ಆದರೆ ನಗರಸಭೆ ಪೌರಾಯುಕ್ತರು ಹಾಗೂ ಯಾದಗಿರಿ ಕೋಲಿವಾಡ ಸರ್ಕಾರಿ ಪ್ರೌಢಶಾಲೆಯ ಮುಖ್ಯಗುರುಗಳು ಭಾವಚಿತ್ರ ಇಟ್ಟು ಪೂಜೆ ಸಲ್ಲಿಸಿದೇ ಅವಮಾನಿಸಿದ್ದು, ಕಾರಣ ಇವರ ಮೇಲೆ ಸುಮೋಟೋ ಪ್ರಕರಣ ದಾಖಲಿಸಿ, ಈ ಕೂಡಲೇ ಅಮಾನತ್ತುಗೊಳಿಸಲು ಒತ್ತಾಯಿಸಿದರು.

ಒಂದು ವೇಳೆ ಕ್ರಮ ಕೈಗೊಳ್ಳದೇ ಹೋದಲ್ಲಿ ಮಾನ್ಯ ಉಪನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ ಮತ್ತು ನಗರಸಭೆಗೆ ಮುಳ್ಳು ಬೇಲಿ ಮತ್ತು ಮಸಿ ಹಚ್ಚಿ ಪ್ರತಿಭಟನೆ ಮಾಡಲಾಗುವುದು ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ತೇಕರಾಳ ಗ್ರಾ.ಪಂ. ಸದಸ್ಯ ಹಣಮಂತ್ರಾಯಗೌಡ ಮಾ.ಪಾ॥, ಭೀಮು ಪೂಜಾರಿ ವಾಡಿ, ಭಾಗಣ್ಣ ತಡಿಬಿಡಿ, ಮಾಳಪ್ಪ ಪೂಜಾರಿ ಬಬಲಾದ, ಜಕ್ಕಪ್ಪ ಬಬಲಾದ, ಯಲ್ಲಾಲಿಂಗ ಪೂಜಾರಿ ಕನಗನಹಳ್ಳಿ, ಸಾಬಣ್ಣ ಭಜಂತ್ರಿ ಚಟ್ನಳ್ಳಿ, ವೀರೇಶ ವಾಲಿ, ಅಂಜು ಪೂಜಾರಿ ಮುದ್ನಾಳ, ಮಲ್ಲು ಬಂದಳ್ಳಿ, ಮಧು ಅಂಬಿಗೇರ, ನಾಗು ಪೂಜಾರಿ ಬಬಲಾದ ಸೇರಿದಂತೆ ಇನ್ನಿತರರು ಇದ್ದರು.

# ವಿದ್ಯಾರ್ಥಿಗಳಲ್ಲಿ ದೇಶಪ್ರೇಮ ಬೆಳೆಯಲಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ,: ವಿದ್ಯಾರ್ಥಿಗಳಲ್ಲಿ ದೇಶಪ್ರೇಮ ಬೆಳೆಯಬೇಕು ಎಂದು ಡಾ.ಸುಶೀಲ ಸಾವಂತ ಹೇಳಿದರು. ಪಟ್ಟಣದ ಖಡಕೇಶ್ವರ ಪ್ರೌಢ ಶಾಲೆಯಲ್ಲಿ ಶುಕ್ರವಾರ ಆಯೋಜಿಸಿದ್ದ 79ನೆಯ ಸ್ವಾತಂತ್ರೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಅನೇಕ ಮಹಾತ್ಮರ ತ್ಯಾಗ, ಬಲಿದಾನದಿಂದ ದೇಶಕ್ಕೆ ಸ್ವಾತಂತ್ರ ಸಿಕ್ಕಿದೆ. ದೇಶಕ್ಕಾಗಿ ರಕ್ತ ಹರಿಸಿದ ಮಹಾತ್ಮರ ಜೀವನ, ಚರಿತ್ರೆಯನ್ನು ವಿದ್ಯಾರ್ಥಿಗಳು ತಿಳಿದುಕೊಳ್ಳಬೇಕು. ಉತ್ತಮ ಶಿಕ್ಷಣ ಪಡೆದು ಸಮಾಜಕ್ಕೆ ತಮ್ಮದೆ ಆದ ಕೊಡುಗೆ ನೀಡಬೇಕು ಎಂದರು. ಖಡಕೇಶ್ವರ ವಿದ್ಯಾ ಸಂಸ್ಥೆ ಸಾವಿರಾರೂ ವಿದ್ಯಾರ್ಥಿಗಳ ಭವಿಷ್ಯವನ್ನು ರೂಪಿಸುತ್ತಿದೆ. ನಾನು ಕೂಡ ಈ ಇಂತಹ ಸಂಸ್ಥೆಯ ವಿದ್ಯಾರ್ಥಿಯಾಗಿದ್ದೇನೆ ಎನ್ನುವುದಕ್ಕೆ ಹೆಮ್ಮೆ ಎನಿಸುತ್ತಿದೆ. ಈ ಸಂಸ್ಥೆಯ ಗುಣಮಟ್ಟದ ಶಿಕ್ಷಣ, ಉತ್ತಮ ಸಂಸ್ಕಾರದ ಪರಿಣಾಮ ನಾನು ಇಂದು ವೈದ್ಯಕೀಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿದ್ದೇನೆ ಎಂದು ತಿಳಿಸಿದರು.

ಸಂಸ್ಥೆಯ ಅಧ್ಯಕ್ಷ ಸುಧೀರ ನಾಯಕ ಮಾತನಾಡಿದರು. ಮುಖ್ಯಗುರು ಆನಂದ ಕಲ್ಯಾಣೆ ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಕೋಶಾಧ್ಯಕ್ಷ ಪ್ರಭುರಾವ ಧೂಪೆ, ಡಾ.ಸುಷ್ಮಾ ಸುಶೀಲ ಸಾವಂತ, ಶಿಕ್ಷಕರಾದ ಶುಭಂ ರಾಯವಾಡೆ, ಅಂಜಲಿ ಜೋಶಿ ಇದ್ದರು. ಜಯಪ್ರಕಾಶ ಸಹಾನೆ ಸ್ವಾಗತಿಸಿದರು. ಉದಯ ಜೋಶಿ ನಿರೂಪಿಸಿದರು. ಪ್ರಕಾಶ ರುದನೂರೆ ಬಹುಮಾನ ವಿತರಣೆ ಕಾರ್ಯಕ್ರಮ ನಡೆಸಿಕೊಟ್ಟರು.

# ಸಿಸಿ ಟಿವಿ ಕಣ್ಗಾವಲು ಉದ್ಘಾಟನೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಯೋಜನೆಯಡಿ ಯಾದಗಿರಿ ನಗರದಲ್ಲಿ ಸಿಸಿ ಟಿವಿ ಕಣ್ಗಾವಲು ವ್ಯವಸ್ಥೆಯನ್ನು ಅಳವಡಿಸಲಾಗಿದೆ. ನಗರದಲ್ಲಿ ನಡೆದ ಉದ್ಘಾಟನಾ ಸಮಾರಂಭವನ್ನು ಶಾಸಕರಾದ ಶ್ರೀ ಚನ್ನಾರೆಡ್ಡಿ ಪಾಟೀಲ್ ಅವರು ನೆರವೇರಿಸಿ ಮಾತನಾಡಿದರು.

ಅವರು ಮಾತನಾಡುತ್ತಾ – "ಯಾದಗಿರಿ ನಗರದಲ್ಲಿ ಅಪರಾಧ ತಡೆಗಟ್ಟುವ ಉದ್ದೇಶದಿಂದ ಕೋಮುಸೂಕ್ಷ್ಮ ಮತ್ತು ಆಯಕಟ್ಟಿನ 85 ಪ್ರದೇಶಗಳಲ್ಲಿ ಸಿಸಿ ಕ್ಯಾಮರಾಗಳನ್ನು ಅಳವಡಿಸಲಾಗಿದೆ. ಇದರ ಮೂಲಕ ಕಾನೂನು ಸುವ್ಯವಸ್ಥೆ ಕಾಪಾಡಲು ಹೆಚ್ಚಿನ ನೆರವು ದೊರೆಯಲಿದೆ" ಎಂದರು.

ಜಿಲ್ಲಾ ಪೊಲೀಸ್ ವರಿಷ್ಟಾಧಿಕಾರಿ ಪೃಥ್ವಿಕ್ ಶಂಕರ್ ಮಾತನಾಡಿ "ಶಾಸಕರು ಹಾಗೂ ಸಚಿವರ ಅನುದಾನದಡಿ ರೂ.70 ಲಕ್ಷ ವೆಚ್ಚದಲ್ಲಿ ಈ ಕ್ಯಾಮರಾಗಳನ್ನು ಅಳವಡಿಸಲಾಗಿದೆ. ಮೊದಲ ಹಂತದಲ್ಲಿ ನಗರದ ಗಡಿ ಭಾಗಗಳು ಮತ್ತು ಮತೀಯ ಸೂಕ್ಷ್ಮ ಪ್ರದೇಶಗಳಿಗೆ ಆದ್ಯತೆ ನೀಡಲಾಗಿದೆ. ಅಳವಡಿಸಿದ ಕ್ಯಾಮರಾಗಳ ಮೂಲಕ ಸ್ಥಳೀಯ ಪೊಲೀಸ್ ಠಾಣೆ ಹಾಗೂ ಜಿಲ್ಲಾ ಪೊಲೀಸ್ ಕಂಟ್ರೋಲ್ ರೂಮ್‌ನಲ್ಲಿ ನಿರಂತರ ವೀಕ್ಷಣೆ ನಡೆಯಲಿದೆ" ಎಂದು ತಿಳಿಸಿದರು.

ನಗರಸಭೆ ಅಧ್ಯಕ್ಷೆ ಲಲಿತ ಅನಪುರ್ ಮಾತನಾಡಿ , "ನಗರದಲ್ಲಿ ಅಳವಡಿಸಿರುವ ಸಿಸಿ ಕ್ಯಾಮರಾಗಳಿಂದ ಅಪರಾಧ ನಿಯಂತ್ರಣವಾಗುವುದರ ಜೊತೆಗೆ ವಾಹನ ಚಾಲಕರಲ್ಲಿ ಜಾಗೃತಿ ಹೆಚ್ಚುತ್ತದೆ. ನಿಯಮ ಉಲ್ಲಂಘನೆ ಮಾಡಿದರೆ ದಂಡ ವಿಧಿಸಲಾಗುವುದು" ಎಂದು ಹೇಳಿದರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಅಧ್ಯಕ್ಷ ಬಾಬುರಾವ ಕಾಡ್ಲೂರ್, ಜಿಲ್ಲಾಧಿಕಾರಿ ಹರ್ಷಲ್ ಬೋಯರ್, ನಗರಸಭೆ ಪೌರಾಯುಕ್ತ ಉಮೇಶ್ ಚೌಹಾಣ್, ಜಿಲ್ಲಾ ಪೊಲೀಸ್ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಹಾಜರಿದ್ದರು.

## ಲಿಂಗಸುಗೂರು ಸರಕಾರಿ ಬಾಲಕಿಯರ ಹಿ ಪ್ರಾ. ಶಾಲೆಯಲ್ಲಿ 79ನೇ ಸ್ವಾತಂತ್ರ್ಯ ದಿನಾಚರಣೆ.

ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು: ಪಟ್ಟಣದ ಸರಕಾರಿ ಬಾಲಕಿಯರ ಹಿ.ಪ್ರಾ.ಶಾಲೆಯಲ್ಲಿ 79ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಸಂಭ್ರಮದಿಂದ ಆಚರಿಸಲಾಯಿತು. ಎಸ್‌ಡಿಎಂಸಿ ಅಧ್ಯಕ್ಷ ಸತ್ಯಪ್ಪ ರಾಮಣ್ಣ ಬಂಡಿ ಧ್ವಜಾರೋಹಣ ನೆರವೇರಿಸಿದರು. ಬಳಿಕ ಸಭಾ ಕಾರ್ಯಕ್ರಮ ನಡೆಯಿತು. ಶಾಲೆಯ ಮುಖ್ಯಗುರು ಚಂದ್ರಶೇಖರ್ ಅವರು ಸ್ವಾಗತಿಸಿ, ಸ್ವಾತಂತ್ರ್ಯ ದಿನಾಚರಣೆ ಕುರಿತು ಮಾತನಾಡಿದರು ನಂತರ ಮಾರುತಿ ಮೆಡಿಕಲ್ ಕರ್ನಾಟಕದ ಅಗ್ರಗಣ್ಯ ಔಷಧಿ ಮಳಿಗೆ ಬೆಂಗಳೂರು ಇವರ ಸೇವೆ ವತಿಯಿಂದ ನೋಟ್ ಬುಕ್ ಗಳನ್ನು 1ರಿಂದ 7ನೇ ತರಗತಿ ವಿದ್ಯಾರ್ಥಿನಿಗಳಿಗೆ. ಎಸ್‌ಡಿಎಂಸಿ ಉಪಾಧ್ಯಕ್ಷ ರಂಗಮ್ಮ ಅಮರೇಶ್ ಗೋಸ್ಲೆ ಕರಡಕಲ್ ಹಾಗೂ ಸದಸ್ಯರು ವಿತರಿಸಿದರು. ಈ ಸಂದರ್ಭದಲ್ಲಿ ಡಾ ಮುರ್ತುಜಾ ಸಾಬ್, ಮಾರುತಿ ಮರಿಯಪ್ಪ ಗೊಸ್ಲಿ, ಗುರುನಾಥ್ ಶಿವಪ್ಪ ಹನುಮಂತಿ ಯಲ್ಲಪ್ಪ ಸಹ ಶಿಕ್ಷಕರಾದ ಮುದುಕನ ಗೌಡ, ಶ್ರೀಮತಿ ಶರಣಮ್ಮ, ರುದ್ರಮುನಿ ಗೊರಬಾಳ್, ಮಾಂತಗೌಡ ಕೋಮಲ, ಶ್ರೀದೇವಿ, ಆಯಿಷಾ, ಜ್ಯೋತಿ ಎಸ್‌ಡಿಎಂಸಿ ಸದಸ್ಯರು, ಸಿಬ್ಬಂದಿಗಳು ಪಾಲ್ಗೊಂಡಿದ್ದರು.

## ಜಿನೇವಾ ಒಪ್ಪಂಧದಿಂದ ವಿಶ್ವದಾದ್ಯಂತ ಪಸರಿಸಿದ ಮಾನವೀಯತೆ :ನಾಗರಾಜ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿನೇವಾ ಒಪ್ಪಂಧದಿಂದ ವಿಶ್ವದಾದ್ಯಂತ ಮಾನವೀಯತೆ ಪಸರುವಂತೆ ಮಾಡಿದೆ ಎಂದು ಉಪನ್ಯಾಸಕ ನಾಗರಾಜದಂಡೋತಿಹೇಳಿದ್ದಾರೆ.

ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಶ್ರೀ ಗವಿಸಿದ್ಧೇಶ್ವರ ಶಿಕ್ಷಣ ಮಹಾವಿದ್ಯಾಲಯದ ಜಂಟಿ-ಯಾಗಿಕಾಲೇಜಿನಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಜಿನೇವಾ ಒಪ್ಪಂಧ ದಿನಾಚರಣೆ, ರಕ್ತದಾನ ಶಿಬಿರ, ಯುವ ರೆಡ್ ಕ್ರಾಸ್ ಘಟಕ ಉದ್ಘಾಟನಾ ಸಮಾರಂಭದಲ್ಲಿ ಜಿನೇವಾ ಒಪ್ಪಂಧದ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಎರಡನೇ ಮಹಾಯುದ್ಧದ ನಂತರ 1945 ರಿಂದ 49 ರಲ್ಲಿ ನಡೆದ ಜಿನೇವಾ ಸಮ್ಮೇಳನದಲ್ಲಿ 1949 ಆ. 12 ರಂದು ಜಿನೇವಾ ಒಪ್ಪಂಧ ಮಾಡಲಾಯಿತು. ಇದಕ್ಕೆ ಜಗತ್ತಿನ 176 ರಾಷ್ಟಗಳು ಸಹಿ ಹಾಕುವ ಮೂಲಕ ಯುದ್ಧ ಪೀಡಿತ ಪ್ರದೇಶದಲ್ಲಿನ ಆಗುವ ತೊಂದರೆಯನ್ನು ನಿವಾರಿಸಲು ಬಹುದೊಡ್ಡ ನಿರ್ಣಯಗಳನ್ನು ತೆಗೆದುಕೊಳ್ಳಲಾಯಿತು. ಒಪ್ಪಂಧದ ಮೂಲಕ ಯುದ್ಧ ಕೈದಿಯನ್ನು ಸಂರಕ್ಷಣೆ ಮಾಡಬೇಕು ಮತ್ತು ಯುದ್ಧದಿಂದ ಗಾಯಗೊಂಡವರನ್ನು ಸಂರಕ್ಷಣೆ ಮಾಡುವುದು ಸೇರಿದಂತೆ ಹಲವಾರು ಮಾವೀಯಕಳಕಳಿಯುಳ್ಳ ನಿರ್ಣಯಗನ್ನು ಕೈಗೊಳ್ಳಲಾಯಿತು ಎಂದರು.

ಈಗಲೂ ಆ ನಿರ್ಣಯಗಳ ಆಧಾರದಲ್ಲಿಯೇ ರೆಡ್ ಕ್ರಾಸ್ ಸಂಸ್ಥೆ ಯುದ್ಧಪೀಡಿತ ಪ್ರದೇಶದಲ್ಲಿ ಬಹುದೊಡ್ಡ ಮಾನವೀಯ ಸೇವೆ ಮಾಡುತ್ತಿದೆ ಎಂದರು.

ಕಾರ್ಯಕ್ರಮ ಉದ್ಘಾಟಿಸಿದ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಛೇರಮನ್ ಸೋಮರಡ್ಡಿ ಅಳವಂಡಿ ಅವರು ಮಾತನಾಡಿ, ಯುದ್ಧಭೂಮಿಯಲ್ಲಿಯೂ ಗಾಯಾಳುಗಳನ್ನು ರೆಡ್ ಕ್ರಾಸ್ ಸಂಸ್ಥೆ ಉಪಚಾರ ಮಾಡುವ ಮಹಾನ್ ಕಾರ್ಯ ಮಾಡುತ್ತದೆ. ಯುದ್ಧದಿಂದ ಸೆರೆ ಸಿಕ್ಕ ಕೈದಿಗಳನ್ನು ಬಿಡುಸುವಲ್ಲಿ ನೇತೃತ್ವವಹಿಸುತ್ತದೆ ಎಂದರು.

ರೆಡ್ ಕ್ರಾಸ್ ಸಂಸ್ಥೆಯ ನಿರ್ದೇಶಕ ಡಾ. ಮಂಜುನಾಥ ಹಾಗೂ ರಾಜೇಶ ಯಾವಗಲ್ ಅವರು ರಕ್ತದಾನದ ಮಹತ್ವ ಮತ್ತು ಯುವ ರೆಡ್ ಕ್ರಾಸ್ ಸಂಸ್ಥೆಯ ಕಾರ್ಯವೈಖರಿಯನ್ನು ವಿವರಿಸಿದರು.

ಶ್ರೀ ಗವಿಸಿದ್ದೇಶ್ವರ ಶಿಕ್ಷಣ ಮಹಾವಿದ್ಯಾಲಯದ ಸಂಯೋಜ-ಕರಾದ ಡಾ. ಕವಿತಾ ಕೆ. ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರಾಂಶುಪಾಲರಾದ ಡಾ. ಎಸ್.ಬಿ.ಕುಂಬಾರ ಅವರು ಅಧ್ಯಕ್ಷತೆವಹಿಸಿದ್ದರು. ಪ್ರೋಪೆಸರ್ ಎಚ್. ಬಿ. ಆನಂದಹಳ್ಳಿರವರು ಉಪಸ್ಥಿತರಿದ್ದರು. ಮಹಾವಿದ್ಯಾಲಯದ ಪ್ರಶಿಕ್ಷಣಾರ್ಥಿ ಸುಭಾಷಿಣಿ ಕಾರ್ಯಕ್ರಮವನ್ನು ನಿರೂಪಿಸಿದರು. ಈ ಕಾರ್ಯಕ್ರಮ ನಂತರ ಸ್ವಯಂ ಪ್ರೇರಿತ ರಕ್ತದಾನ ಶಿಬಿರ-ಕ್ಕೆ ಚಾಲನೆ ನೀಡಲಾಯಿತು. ನಂತರ ಮಹಾವಿದ್ಯಾಲಯದ ರೆಡ್ ಕ್ರಾಸ್ ಸಂಯೋಜಕ ಶ್ರೀಧರ ಪೂಜಾರ ರವರು ಕಾರ್ಯಕ್ರಮದ ಕೊನೆಯಲ್ಲಿ ವಂದಿಸಿದರು.

ಬಳ್ಳಾರಿಯಲ್ಲಿ ಅದ್ದೂರಿ ಶ್ರೀ ಕೃಷ್ಣನ ಜಯಂತ್ಯೋತ್ಸವ

## ಮಕ್ಕಳಿಗೆ ಶ್ರೀಕೃಷ್ಣನ ವಿಚಾರಧಾರೆಗಳನ್ನು ಬೋಧಿಸಬೇಕು: ಶಾಸಕ ನಾರಾ ಭರತ್ ರೆಡ್ಡಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.16-ಈಗಿನ ಮಕ್ಕಳಿಗೆ ಬಿಡುವಿನ ವೇಳೆಯಲ್ಲಿ ಭಗವದ್ಗೀತೆಯ ಶ್ರೀಕೃಷ್ಣನ ವಿಚಾರಧಾರೆಗಳನ್ನು ಬೋಧಿಸಬೇಕು ಎಂದು ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ರಾಜ್ ಕುಮಾರ್ ರಸ್ತೆಯ ಬಿಡಿಎಎ ಫುಟ್‌ಬಾಲ್ ಮೈದಾನ ಸಭಾಂಗಣದಲ್ಲಿ ಶನಿವಾರ ಆಯೋಜಿಸಿದ್ದ ಶ್ರೀ ಕೃಷ್ಣ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಶ್ರೀಕೃಷ್ಣ ಮಹಾಪುರುಷ. ಲೋಕ ಕಲ್ಯಾಣಕ್ಕಾಗಿ ಹಾಗೂ ಮಾನವೀಯ ಧರ್ಮದ ಉಳಿವಿಗಾಗಿ ಹಲವಾರು ಸಂದೇಶಗಳನ್ನು ನೀಡಿದ್ದಾನೆ. ಪೋಷಕರು ಶಾಲೆಯ ಬಿಡುವಿನ ನಂತರದಲ್ಲಿ ಭಗವದ್ಗೀತೆ ಮತ್ತು ಮಹಾಭಾರತದಲ್ಲಿನ ವಿಚಾರಧಾರೆಗಳನ್ನು ಮಕ್ಕಳಿಗೆ ತಿಳಿಸಿದಾಗ ಜಯಂತಿ ಆಚರಣೆಗೆ ಸಾರ್ಥಕ ರೂಪು ಪಡೆಯುವುದಲ್ಲದೇ, ಮುಂದಿನ ಪೀಳಿಗೆಗೆ ಸನ್ಮಾರ್ಗವಾಗುತ್ತದೆ ಎಂದರು.

ನಮ್ಮ ರಾಜ್ಯ ಸರ್ಕಾರವು ಪ್ರತಿ ಸಮುದಾಯವನ್ನು ಗುರುತಿಸಿ, ಅವರ ಸಾಮಾಜಿಕ, ಶೈಕ್ಷಣಿಕವಾಗಿ ಮುನ್ನೆಲೆಗೆ ತರುವ ಕೆಲಸ ಮಾಡುತ್ತಿದೆ. ಬಳ್ಳಾರಿ ನಗರದಲ್ಲಿ ಗೊಲ್ಲರ ಸಮಾಜದ ಸಮುದಾಯ ಭವನ ನಿರ್ಮಾಣಕ್ಕಾಗಿ 25 ಲಕ್ಷ ರೂ. ನೀಡಲಾಗುವುದು ಎಂದು ಹೇಳಿದರು.

ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ ಅವರು ಮಾತನಾಡಿ, ಶ್ರೀಕೃಷ್ಣನು ಆದರ್ಶ ಪುರುಷ, ವಿಷ್ಣುವಿನ ಅವತಾರ ಪಡೆದಿದ್ದನು. ಶ್ರೀಕೃಷ್ಣನ ಜನ್ಮಾಷ್ಟಮಿ ದಿನವನ್ನು ದೇಶದೆಲ್ಲೆಡೆಯು ವಿಜೃಂಭಣೆಯಿಂದ ಆಚರಿಸುತ್ತಾರೆ. ಇದನ್ನು ಮನಗಂಡ ನಮ್ಮ ರಾಜ್ಯ ಸರ್ಕಾರವು ಸಹ ಆಚರಿಸಲು ಅನುವು ಮಾಡಿಕೊಟ್ಟಿತು ಎಂದರು.

ದೇಶದಲ್ಲಿ ಕ್ರೈಸ್ತರಿಗೆ ಬೈಬಲ್, ಮುಸ್ಲಿಂ ರಿಗೆ ಖುರಾನ್ ನಂತೆ ಹಿಂದೂಗಳಿಗೆ ಭಗವದ್ಗೀತೆಯು ಒಂದು. ಭೂಮಿಯ ಮೇಲೆ ಅಧರ್ಮ ನೆಲೆಸಿದಾಗ ಶ್ರೀಕೃಷ್ಣನು ಮತ್ತೆ ಹುಟ್ಟಿ ಬರುತ್ತಾನೆ ಎಂಬ ಸಂದೇಶವಿದೆ ಎಂದು ತಿಳಿಸಿದರು.



ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್ ಅವರು ಮಾತನಾಡಿ, ಶ್ರೀಕೃಷ್ಣನ ಜಯಂತಿಯನ್ನು ದೇಶದಲ್ಲಿ ಜಾತಿ ಮೀರಿ ಆಚರಿಸುತ್ತಾರೆ. ಆ ದಿನ ಮಕ್ಕಳ ಕೃಷ್ಣ-ರಾಧೆಯ ವೇಶ ನೋಡುವುದೇ ಒಂದು ಅದ್ಭುತ ಎಂದು ಸಂತಸ ವ್ಯಕ್ತಪಡಿಸಿದರು.

ಕನ್ನಡ ಸಾಹಿತ್ಯ ಪರಿಷತ್ತಿನ ನಿಕಟ ಪೂರ್ವ ಅಧ್ಯಕ್ಷ ಸಿದ್ಧರಾಮ ಕಲ್ಮಠ ಅವರು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, ಶ್ರೀಕೃಷ್ಣನು ಧರ್ಮ ಪಾಲನೆಯ ಬಗ್ಗೆ ತಿಳಿಸಿದ ಮಹಾನ್ ದಾರ್ಶನಿಕ ವ್ಯಕ್ತಿ. ಭಗವದ್ಗೀತೆಯ ಮೂಲಕ ಧರ್ಮ ಮಾರ್ಗದ ಮೂಲಕ ಹೇಗೆ ಬದುಕಬೇಕು ಎಂಬುದನ್ನು ತಿಳಿಸಿದವರು. ಶ್ರೀಕೃಷ್ಣನ ತತ್ವಗಳು ಇಂದಿಗೂ ಪ್ರಸ್ತುತ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಮಹಾನಗರ ಪಾಲಿಕೆಯ ಸಭಾ ನಾಯಕರು ಹಾಗೂ ಜಿಲ್ಲಾ ಗೊಲ್ಲರ ಸಂಘ ಅಧ್ಯಕ್ಷ ಪಿ.ಗಾದೆಪ್ಪ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ, ಪಾಲಿಕೆ ಸದಸ್ಯರಾದ ಹೊನ್ನುರಪ್ಪ, ಝುಬ್ಬರ್ ಸೇರಿದಂತೆ ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು, ಸಮಾಜದ ಮುಖಂಡರು, ಸಾರ್ವಜನಿಕರು ಹಾಗೂ ಇತರರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಬಳ್ಳಾರಿಯ ವೈ.ಬಸವರಾಜ ತಂಡದಿಂದ ಸಮೂಹ ನೃತ್ಯ ಪ್ರದರ್ಶಿಸಿದರು.

*ಅದ್ದೂರಿ ಮೆರವಣಿಗೆ:*

ಶ್ರೀ ಕೃಷ್ಣ ಜಯಂತಿ ಕಾರ್ಯಕ್ರಮದ ನಗರದಲ್ಲಿ ಅದ್ದೂರಿ ಮೆರವಣಿಗೆ ನಡೆಯಿತು. ಡೊಳ್ಳು ವಾದ್ಯ, ತಾಷೆ ರಾಂಡೋಲ್ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಲಾತಂಡಗಳು ಭಾಗವಹಿಸಿ ಮೆರವಣಿಗೆಗೆ ಮೆರಗು ನೀಡಿದವು.

ಮೆರವಣಿಗೆಯು ನಗರದ ಶ್ರೀ ಕನಕ ದುರ್ಗಮ್ಮ ದೇವಸ್ಥಾನ ಆವರಣದಿಂದ ಆರಂಭಗೊಂಡು ಗಡಿಗಿ ಚನ್ನಪ್ಪ ವೃತ್ತದ ಮೂಲಕ ಬಿಡಿಎಎ ಫುಟ್‌ಬಾಲ್ ಮೈದಾನ ಸಭಾಂಗಣದವರೆಗೆ ಸಾಗಿಬಂದಿತು.

## ಆ.23 ರಂದು ವಿಶೇಷಚೇತನರಿಗಾಗಿ ಉದ್ಯೋಗ ಮೇಳ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.16-ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಮತ್ತು ಸಮರ್ಥನ ಸಂಸ್ಥೆಯ ಸಂಯುಕ್ತಾಶ್ರಯದಲ್ಲಿ ಆ.23ರಂದು ಬೆಳಿಗ್ಗೆ 09 ರಿಂದ ಮಧ್ಯಾಹ್ನ 02 ಗಂಟೆಯವರೆಗೆ ನಗರದ ಎಸ್.ಎನ್.ಪೇಟೆಯ ಶ್ರೀಮತಿ ಸರಳಾದೇವಿ ಸತೀಶ್ಚಂದ್ರ ಅಗರ್ ವಾಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜು (ಸ್ವಾಯತ್ತ) ಇಲ್ಲಿ ವಿಶೇಷಚೇತನರಿಗಾಗಿ ಉದ್ಯೋಗ ಮೇಳ ಆಯೋಜಿಸಲಾಗಿದೆ.

ಅದೇ ದಿನದಂದು (ಆ.23 ರಂದು) ಬೆಳಿಗ್ಗೆ 09 ಗಂಟೆಗೆ ಬೆಂಗಳೂರಿನ ಜಯನಗರದ 4ನೇ ಬ್ಲಾಕ್ ನ 16 ನೇ ಮುಖ್ಯರಸ್ತೆಯ ಬಿಇ.ಎಸ್. ಕಲಾ ವಾಣಿಜ್ಯ ಮತ್ತು ವಿಜ್ಞಾನ ಪದವಿ ಕಾಲೇಜಿನಲ್ಲಿಯೂ ಸಹ ವಿಶೇಷಚೇತನರಿಗಾಗಿ ಉದ್ಯೋಗ ಮೇಳ ಆಯೋಜಿಸಲಾಗಿದ್ದು, ಬಳ್ಳಾರಿ ಜಿಲ್ಲೆಯ ವಿಕಲಚೇತನರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಇದರ ಸದುಪಯೋಗಪಡೆದುಕೊಳ್ಳಬೇಕು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಬೆಂಗಳೂರಿನ ಸಮರ್ಥನಂ ಸಂಸ್ಥೆಯ ಸಿಬ್ಬಂದಿ ವೀರಭದ್ರಪಾಟಿಲ್-9480812121, ಸುಭಾಷ್-9449864693 ಹಾಗೂ ಬಳ್ಳಾರಿಯ ಸಮರ್ಥನಂ ಸಂಸ್ಥೆಯ ಸಹಾಯವಾಣಿ ಸಂಖ್ಯೆ 08068333999, ಮೊ.9148793888,8152808563, 9148792888, 9480812138 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಮ್ಮ ದೇಶಕ್ಕೆ ಸ್ವತಂತ್ರ್ಯವು ತ್ಯಾಗ ಮತ್ತು ಬಲಿದಾನದಿಂದ ಬಂದಿದೆ-ಜ್ಯಾಂತೀಕರ್.



ಮಲ್ಲಮ್ಮ ನುಡಿ ವಾರ್ತ

ಹುಮನಾಬಾದ: ಭಾರತ ದೇಶಕ್ಕೆ ಸ್ವತಂತ್ರ್ಯ ದೊರಕಬೇಕಾದರೆ ನಮ್ಮ ಹಿರಿಯರ ತ್ಯಾಗ ಮತ್ತು ಬಲಿದಾನದಿಂದ ಫಲವಾಗಿದೆ ಇದು ನಮ್ಮ ಮುಂದಿನ ಪಿಳಿಗೆಗೆ ತಿಳಿಸುವ ಕಾರ್ಯವಾಗಬೇಕಾಗಿದೆ ಎಂದು ಸಂಯುಕ್ತ ಸಹಕಾರಿಯ ರಾಜ್ಯ ನಿರ್ದೇಶಕ ಗುರುನಾಥ ಜ್ಯಾಂತೀಕರ್ ತಿಳಿಸಿದರು. ಬೀದರ ಜಿಲ್ಲಾ ಸೌಹಾರ್ದ ಸಹಕಾರಿಗಳ ಒಕ್ಕೂಟ ನಿ., ಬೀದರ ಇದರ ಕಛೇರಿಯಲ್ಲಿ 79ನೇ ಸ್ವತಂತ್ರ್ಯೋಸವದ ನಿಮಿತ್ಯ ಧ್ವಜಾರೋಹಣ ನೇರವೆರಿಸಿ ಮಾತನಾಡಿದರು. ಧ್ವಜಾರೋಹಣ ಕಾರ್ಯಕ್ರಮದಲ್ಲಿ ಒಕ್ಕೂಟ ಉಪಾಧ್ಯಕ್ಷರಾದ ಸಂಜೀವಕುಮಾರ ಪಾಟೀಲ್, ಸಂಜ್ಯಕ್ಯಾಸಾ, ಶ್ರೀಕಾಂತ ಸ್ವಾಮಿ ಸೋಲಪೂರ, ನಾಗಶೇಟಿ ಪಾಟೀಲ್, ಡಾ.ಅಣ್ಣಾರಾವ ನಾವದಗೇರೆ, ಹಿರಿಯ ಸಹಕಾರಿಗಳಾದ ವಿಜಯಕುಮಾರ ಗಾಜರೆ, ರಾಜು ಬೆಮಳಖೇಡ್, ಶಿವರಾಜ ಹುಡೆದ, ಶಿವರಾಜ ಹೂಗಾರ, ಪ್ರವಿಣ, ನಾಗೇಶ, ಶಿವಾನಂದ, ಸಂಜೀವ, ಅನೀಲಕುವಾರ, ಶ್ರೀಕಾಂತ, ರಂಜನಾ ಅಗ್ರವಾಲ್, ಭವಾನಿ, ಅಮೃತ ಹೊಸಮನಿ ಇತರರು ಉಪಸ್ಥಿತರಿದ್ದರು.

## ಐತಿಹಾಸಿಕ ತಾಣಗಳನ್ನು ಸಂರಕ್ಷಿಸಿ: ಪ್ರೊ.ಪರಮಶಿವಮೂರ್ತಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.16-ಪ್ರಾಗ್ಯೈತಿಹಾಸಿಕ ಹಸ್ತಪ್ರತಿಗಳು, ನಾಣ್ಯಗಳು, ಸ್ಮಾರಕಗಳು, ತಾಳೆಗರಿಗಳು, ಕುರುಹುಗಳು, ಕಡತಗಳು ನಿರ್ವಹಣೆ ಕೊರತೆಯಿಂದ ನಶಿಸಿ ಹೋಗುತ್ತಿದ್ದು, ಅವುಗಳು ಸಂರಕ್ಷಿಸುವ ಕಾರ್ಯವಾಗಬೇಕಿದೆ ಎಂದು ಹಂಪಿ ಕನ್ನಡ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ.ಡಿ.ವಿ.ಪರಮಶಿವಮೂರ್ತಿ ಅವರು ಹೇಳಿದರು.

ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಇತಿಹಾಸ ಮತ್ತು ಪುರಾತತ್ವ ಅಧ್ಯಯನ ವಿಭಾಗ ಮತ್ತು ಕರ್ನಾಟಕ ಇತಿಹಾಸ ಅಕಾಡೆಮಿ(ರಿ) ಜಂಟಿ ಸಹಯೋಗದಲ್ಲಿ ಆಯೋಜಿಸಿದ್ದ 'ಐತಿಹಾಸಿಕ ಪರಂಪರೆ ಉಳಿಸಿ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಹಿಂದಣ ಹೆಜ್ಜೆಯಿಂದ ಗುರುತುಳಿಂದ ಮುಂದಣ ಹೆಜ್ಜೆಗಳ ಇಡಲು ಸಾಧ್ಯವಾಗುತ್ತದೆ. ಆದಿಮಾನವರ ಶಿಲಾಯುಗದಲ್ಲಿ ನೆಲೆಸಿದ್ದ ಹೆಚ್ಚಿನ ಕುರುಹುಗಳು ಬಳ್ಳಾರಿ ಜಿಲ್ಲೆಯಲ್ಲಿವೆ. ಆಧುನಿಕತೆಯ ಭರಾಟೆಯಲ್ಲಿ ಅಪರೂಪದ ಐತಿಹಾಸಿಕ ತಾಣಗಳು ಕ್ರಮೇಣ ನೆಲೆಸಮವಾಗುತ್ತಿವೆ. ಇವುಗಳನ್ನು ಉಳಿಸುವ, ಸಂರಕ್ಷಿಸುವ ಕಾರ್ಯ ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದರು.

ವಿಶ್ರೀಕೃ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಎಂ.ಮುನಿರಾಜು ಮಾತನಾಡಿ, ಐತಿಹಾಸಿಕ ಪರಂಪರೆಯನ್ನು ಉಳಿಸಲು ಉಪನ್ಯಾಸಕರುಗಳು ಹಾಗೂ ವಿದ್ಯಾರ್ಥಿಗಳ ಪಾತ್ರ ಮುಖ್ಯವಾಗಿದೆ. ಹಂಪಿಯ ವಿರೂಪಾಕ್ಷ ದೇವಾಲಯ ಸೇರಿದಂತೆ ಅನೇಕ ಸ್ಮಾರಕಗಳು ಐತಿಹಾಸಿಕವಾಗಿ ವಿಶಿಷ್ಟ ಸ್ಥಾನವನ್ನು ಹೊಂದಿವೆ. ಇತಿಹಾಸ ಸೃಷ್ಟಿಸಿರುವ ಶಿಲ್ಪಿಗಳು, ಕಲಾವಿದರ ಪರಿಚಯ ಇಂದಿನ ಪೀಳಿಗೆಗೆ ತಿಳಿಸುವ ಅಗತ್ಯವಿದೆ. ವಿವಿಯ ಕಲಾ ಮತ್ತು ಸಮಾಜ ವಿಜ್ಞಾನ ನಿಕಾಯಗಳ ಸಂಶೋಧನೆಗೆ ಉತ್ತೇಜನ ನೀಡಲಾಗುವುದು ಎಂದು ತಿಳಿಸಿದರು.

ಮುಂಬರುವ ದಿನಗಳಲ್ಲಿ ಪ್ರವಾಸೋದ್ಯಮ ಮತ್ತು ಐತಿಹಾಸಿಕ ಸ್ಮಾರಕಗಳ ಅಧ್ಯಯನಕ್ಕೆ ಹಂಪಿ ವಿವಿಯ ಸಹಭಾಗಿತ್ವದೊಂದಿಗೆ ಹೊಸ ಕೋರ್ಸ್ ಆರಂಭಿಸುವುದಾಗಿ ಹೇಳಿದರು.

ತುಮಕೂರು ವಿಶ್ವವಿದ್ಯಾಲಯದ ಕುಲಸಚಿವ ಡಾ.ಎಂ.ಕೊಟ್ರೇಶ್ ಅವರು ಮಾತನಾಡಿ, ವಿಶ್ವ ಪಾರಂಪರಿಕ ತಾಣಗಳ ಪೈಕಿ 44 ಭಾರತದಲ್ಲಿದ್ದು, ಅದರಲ್ಲಿ 4 ತಾಣಗಳು ಕರ್ನಾಟಕದಲ್ಲಿವೆ. ಐತಿಹಾಸಿಕ ತಾಣಗಳ ಸಂರಕ್ಷಣೆಗೆ ವಿವಿಯಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳು ಆಯಾ ಗ್ರಾಮ ಅಥವಾ ಸ್ಥಳವನ್ನು ದತ್ತು ಪಡೆದು ಅಲ್ಲಿನ ಸ್ಮಾರಕಗಳ ರಕ್ಷಣೆ ಮಾಡಬೇಕು ಎಂದು ಹೇಳಿದರು.

ವಿವಿಯ ಕುಲಸಚಿವ ಸಿ.ನಾಗರಾಜು ಅವರು ಮಾತನಾಡಿ, ದೇಶದ ಐತಿಹಾಸಿಕ ಸ್ಥಳಗಳ ಕುರಿತು ಮತ್ತಷ್ಟು ಸಂಶೋಧನೆಗಳು ನಡೆ-ಯಲಿ ಎಂದರು.

ಕರ್ನಾಟಕ ಇತಿಹಾಸ ಅಕಾಡೆಮಿ ಅಧ್ಯಕ್ಷ ಡಾ.ದೇವರಕೊಂಡಾರೆಡ್ಡಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಕರ್ನಾಟಕದ ಐತಿಹಾಸಿಕ ಪರಂಪರೆಗಳನ್ನು ಸಂರಕ್ಷಿಸಲು 40 ವರ್ಷಗಳಿಂದಲೂ ಪ್ರಯತ್ನ ನಡೆದಿದೆ. 6ನೇ ವಿಕ್ರಮಾದಿತ್ಯನ 52 ವರ್ಷಗಳ ಆಡಳಿತವನ್ನು ನಡೆಸಿದ್ದನು. ಆತನು 200ಕ್ಕೂ ಅಧಿಕ ದೇವಾಲಯಗಳನ್ನು ನಿರ್ಮಿಸಿದ್ದನು. ಕುಡುತಿನಿ, ಕುರುಗೋಡುಗಳಲ್ಲಿರುವ ಶಾಸನ, ಕುಡುತಿನಿಯ ಟಂಕಶಾಲೆಯ ಹೊನ್ನಿನ ನಾಣ್ಯ (ನವಿಲು ಪೊನ್ನೂ)ಗಳನ್ನು ಸಂರಕ್ಷಿಸಲಾಗಿದೆ ಎಂದರು.

ವಿದ್ಯಾರ್ಥಿಗಳು ತಮ್ಮ ಗ್ರಾಮಗಳ ಮತ್ತು ಸುತ್ತಮುತ್ತಲಿನ ಸ್ಥಳಗಳ ಇತಿಹಾಸವನ್ನು ತಿಳಿದುಕೊಂಡು ಯಾವುದಾದರೂ ಶಾಸನ, ಸ್ಮಾಕರ ಅಥವಾ ಕುರುಹುಗಳು ಕಂಡು ಬಂದಲ್ಲಿ ಇತಿಹಾಸ ತಜ್ಞರಿಗೆ ಸಂಪರ್ಕಿಸಬೇಕು ಎಂದು ಹೇಳಿದರು.

ಕರ್ನಾಟಕ ಇತಿಹಾಸ ಅಕಾಡೆಮಿಯ ಪ್ರಧಾನ ಕಾರ್ಯದರ್ಶಿ ಕೆ.ಎಲ್.ರಾಜಶೇಖರ್ ಅಕಾಡೆಮಿಯ ಕಾರ್ಯವೈಖರಿ ಬಗ್ಗೆ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಐತಿಹಾಸಿಕ ಪರಂಪರೆ ಉಳಿಸಿ ಎಂಬ ಭಿತ್ತಿಪತ್ರವನ್ನು ಗಣ್ಯರು ಅನಾವರಣಗೊಳಿಸಿದರು. ಇತಿಹಾಸ ಮತ್ತು ಪುರಾತತ್ವ ವಿಭಾಗದ ಮುಖ್ಯಸ್ಥರಾದ ಪ್ರೊ ತಿಪ್ಪೇಸ್ವಾಮಿ ವೇದಿಕೆಯಲ್ಲಿ ಉಪಸ್ಥಿತರಿದ್ದರು. ಅಕಾಡೆಮಿಯ ಜಿಲ್ಲಾಧ್ಯಕ್ಷರಾದ ಟಿ.ಹೆಚ್. ಎಂಬಸವರಾಜು ಅತಿಥಿಗಳನ್ನು ಪರಿಚಯಿಸಿ ಸ್ವಾಗತಿಸಿದರು. ಕಾರ್ಯಕ್ರಮವನ್ನು ಕನ್ನಡ ವಿಭಾಗದ ಡಾ.ಶಿವಪ್ರಕಾಶ್ ನಿರೂಪಿಸಿದರು. ಸಹಾಯಕ ಪ್ರಾಧ್ಯಾಪಕ ಸಂತೋಷಕುಮಾರ ವಂದಿಸಿದರು. ವಿವಿಧ ನಿಕಾಯಗಳ ಡೀನರು, ವಿವಿಧ ವಿಭಾಗಗಳ ಮುಖ್ಯಸ್ಥರು, ಸಂಯೋಜಕರು, ಬೋಧಕರು, ಸಂಶೋಧನಾ ವಿದ್ಯಾರ್ಥಿಗಳು, ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಹಾಜರಿದ್ದರು.

## ಆ.20 ರಂದು ಡಿ.ದೇವರಾಜ ಅರಸು ಅವರ 110ನೇ ಜನ್ಮದಿನಾಚರಣೆ ಸಮಾರಂಭ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.16-ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಸಾಮಾಜಿಕ ನ್ಯಾಯದ ಹರಿಕಾರ, ಹಿಂದುಳಿದ ವರ್ಗಗಳ ನೇತಾರ ಹಾಗೂ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರ 110ನೇ ಜನ್ಮದಿನಾಚರಣೆಯ ಸಮಾರಂಭ ಕಾರ್ಯಕ್ರಮವನ್ನು ಆ.20 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಜಿಲ್ಲಾ ಕ್ರೀಡಾಂಗಣ ರಸ್ತೆಯ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಏರ್ಪಡಿಸಲಾಗಿದೆ.

ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಬಿ.ಜಡ್.ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಬಳ್ಳಾರಿ ನಗರ ಶಾಸಕ ನಾರಾ ಭರತ್‌ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.

ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ಶಾಸಕ ಜೆ.ಎನ್.ಗಣೇಶ್, ಸಂಸದರಾದ ಈ ತುಕಾರಾಂ, ಕೆ.ರಾಜಶೇಖರ ಬಸವರಾಜ ಹಿಟ್ನಾಳ, ಡಾ.ಸೈಯದ್ ನಾಸೀರ್ ಹುಸೇನ್, ಬಳ್ಳಾರಿ ಗ್ರಾಮೀಣ ಶಾಸಕ ಬಿ.ನಾಗೇಂದ್ರ, ವಿಧಾನ ಪರಿಷತ್ ಶಾಸಕ ಚಂದ್ರಶೇಖರ ಬಿ.ಪಾಟೀಲ್, ಶಾಸಕರಾದ ಬಿ.ಎಂ.ನಾಗರಾಜ, ಈ. ಅನ್ನಪೂರ್ಣ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಶಿ, ವೈ.ಎಂ.ಸತೀಶ್, ಬಾಬು ಜಗಜೀವನರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮೇಯರ್ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸವರು.

ಹೊಸಪೇಟೆಯ ಹಂಪಿ ವಿದ್ಯಾರಣ್ಯ ಕನ್ನಡ ವಿಶ್ವವಿದ್ಯಾಲಯದ ಸಾಹಿತ್ಯ ಅಧ್ಯಯನ ವಿಭಾಗದ ಪ್ರಾಧ್ಯಾಪಕ ಹಾಗೂ ಮುಖ್ಯಸ್ಥ ಡಾ.ವೆಂಕಟಗಿರಿ ದಳವಾಯಿ ಅವರು ಡಿ.ದೇವರಾಜ ಅರಸು ಅವರ ಜನ್ಮದಿನಾಚರಣೆ ಕುರಿತು ವಿಶೇಷ ಉಪನ್ಯಾಸ ನೀಡುವರು.

ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ, ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರಿಸ್ ಸುಮೇರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್., ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಜಲಾಲಪ್ಪ ಎ.ಕೆ ಸೇರಿದಂತೆ ಜಿಲ್ಲೆಯ ಚುನಾಯಿತ ಪ್ರತಿನಿಧಿಗಳು, ಹಿಂದುಳಿದ ವರ್ಗಗಳ ವಿವಿಧ ಸಂಘ ಸಂಸ್ಥೆಗಳ ಅಧ್ಯಕ್ಷರು ಮತ್ತು ಪದಾಧಿಕಾರಿಗಳು, ಇಲಾಖೆಯ ನೌಕರರು, ಸಿಬ್ಬಂದಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

## ವಿವಿಧೆಡೆ ದಾಳಿ: 06 ಬಾಲಕಾರ್ಮಿಕ, ಕಿಶೋರ ಕಾರ್ಮಿಕ ಮಕ್ಕಳ ರಕ್ಷಣೆ

ಮಲ್ಲಮ್ಮ ನುಡಿ ವಾರ್ತೆ


ಬಳ್ಳಾರಿ,ಆ.16-ನಗರದ ರೂಪನಗುಡಿ ರಸ್ತೆ, ಕೋಲ್ಮಿ ಬಜಾರ್, ಎ.ಪಿ.ಎಂ.ಸಿ, ಮಿಲ್ಲರಪೇಟೆ, ಕಣೆಕಲ್ ಬಸ್ ನಿಲ್ದಾಣ ಮುಂತಾದ ವಿವಿಧ ಸ್ಥಳಗಳಲ್ಲಿನ ಗ್ಯಾರೇಜ್, ಮೆಕ್ಯಾನಿಕ್ ಶಾಪ್, ಬೇಕರಿ ಇತ್ಯಾದಿ ಉದ್ದಿಮೆಗಳ ಮೇಲೆ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರ ಟಾಸ್ಕ್ ಫೋರ್ಸ್ ಸಮಿತಿಯು ದಾಳಿ ನಡೆಸಿ 04 ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಮಕ್ಕಳನ್ನು ರಕ್ಷಿಸಲಾಗಿದೆ.

ಮಕ್ಕಳ ಹೇಳಿಕೆಗಳನ್ನು ಸ್ಥಳದಲ್ಲಿ ಪಡೆದುಕೊಂಡು ಎಲ್ಲಾ ಮಕ್ಕಳನ್ನು ಪುನರ್ವಸತಿಗಾಗಿ ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರುಪಡಿಸಲಾಗಿದೆ. ಎಲ್ಲಾ ಉದ್ದಿಮೆಗಳ ಮಾಲೀಕರಿಗೆ ಕರಪತ್ರ ಹಾಗೂ ಪೋಸ್ಟರ್‌ಗಳನ್ನು ನೀಡಿ ಜಾಗೃತಿ ಮೂಡಿಸಲಾಯಿತು.


ಜಿಲ್ಲಾಧಿಕಾರಿಯವರ ನಿರ್ದೇಶನದ ಮೇರೆಗೆ ಹಾಗೂ ಪ್ಯಾನ್-ಇಂಡಿಯಾ ರಕ್ಷಣೆ ಮತ್ತು ಪುನರ್ವಸತಿ ಅಭಿಯಾನ ಅಂಗವಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಹೊಸಮನೆ ಇವರ ಅಧ್ಯಕ್ಷತೆಯಲ್ಲಿ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರ ಟಾಸ್ಕ್ ಫೋರ್ಸ್ ಸಮಿತಿ ಸಭೆ ನಡೆಸಿ ಈ ದಾಳಿ ಕೈಗೊಳ್ಳಲಾಗಿದೆ. ಟಾಸ್ಕ್ ಫೋರ್ಸ್ ಸಮಿತಿಯಲ್ಲಿ ಕಾರ್ಮಿಕ ನಿರೀಕ್ಷಕರಾದ ರಮೇಶ್, ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ಮೌನೇಶ್, ಮಕ್ಕಳ ಸಹಾಯವಾಣಿ ಸಿಬ್ಬಂದಿ ಕಾರ್ತಿಕ್, ರೀಚ್ ಸಂಸ್ಥೆಯ ಸಂಯೋಜಕ ಹನುಮಂತಪ್ಪ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.



ಹುಮನಾಬಾದ:ಕೃಷ್ಣ ಜನ್ಮಾಷ್ಟಮಿ ನಿಮಿತ್ತ ತಾಲ್ಲೂಕಿನ ವರವಟ್ಟಿ ಗ್ರಾಮದ ಅಡಯ್ಯ ಸ್ವಾಮಿ ರವರ ಸುಪುತ್ರ ಅಥರ್ವ ರವರಿಗೆ ಶ್ರೀ ಕೃಷ್ಣನ ವೇಷ ಹಾಕಲು ಧೋತಿ, ಕಿರೀಟ, ನವಿಲುಗರಿ, ಕೊಳಲು, ಆಭರಣಗಳು, ಕೈಪಟ್ಟಿ, ಸೊಂಟಪಟ್ಟಿ ತಿಲಕ ಹಚ್ಚಿ, ವೇಷ ಧರಿಸಿ, ಸಂಭ್ರಮಿಸಿದ ಕ್ಷಣ ಕಾಣಬಹುದು. (ಮಲ್ಲಮ್ಮ ನುಡಿ ಚಿತ್ರ).



ಆಳಂದ:- ಕೃಷ್ಣ ಜನ್ಮಾಷ್ಟಮಿಯ ಅಂಗವಾಗಿ ತಾಲೂಕಿನ ರುದ್ರವಾಡಿ ಜಮಗಾ ಗ್ರಾಮದ ಸವಿತಾ ಶಿವಕುಮಾರ್ ಹಡಪದ ರವರ ಸುಪುತ್ರಿ ಕು. ಪಾವನಿ ಎಸ್. ಹಡಪದ ಇವಳು ರಾಧೆಯ ವೇಷ ಧರಿಸಿ ಗಮನ ಸೆಳೆದಳು. (ಮಲ್ಲಮ್ಮ ನುಡಿ ಚಿತ್ರ)



ಹುಮನಾಬಾದ:- ಕೃಷ್ಣ ಜನ್ಮಾಷ್ಟಮಿಯ ಅಂಗವಾಗಿ ಪಟ್ಟಣದ ಶ್ವೇತಾ ಶಿವಪುತ್ರ ರಾಮಶೆಟ್ಟಿ ರವರ ಸುಪುತ್ರಿ ಕು. ಪ್ರಾರ್ಥನಾ ಎಸ್. ರಾಮಶೆಟ್ಟಿ ಇವಳು ರಾಧೆಯ ವೇಷ ಧರಿಸಿ ಗಮನ ಸೆಳೆದಳು.
(ಮಲ್ಲಮ್ಮ ನುಡಿ ಚಿತ್ರ)



ಚಿಟಗುಪ್ಪ:- ಕೃಷ್ಣ ಜನ್ಮಾಷ್ಟಮಿಯ ಅಂಗವಾಗಿ ಪಟ್ಟಣದ ಪುರಸಭೆ ಮಾಜಿ ಅಧ್ಯಕ್ಷೆ ಮಾಲಾಶ್ರೀ ಶಾಮರಾವ ಭುತ್ತಾಳೆ ರವರ ಸುಪುತ್ರ ಕು. ಸಾಕಶಾಂತ ಎಸ್. ಭುತ್ತಾಳೆ ಕೃಷ್ಣನ ವೇಷ ಧರಿಸಿ ಗಮನ ಸೆಳೆದನು. (ಮಲ್ಲಮ್ಮ ನುಡಿ ಚಿತ್ರ)

# ಪಿಓಪಿ ಗಣೇಶ ಮಾರಾಟ ಮಾಡಿದರೆ ಕ್ರಮ ಪರಿಸರ ಸ್ನೇಹಿ ಗಣೇಶ ಪ್ರತಿಷ್ಠಾಪನೆಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.16-ಉಚ್ಚ ನ್ಯಾಯಾಲಯದ ಆದೇಶದನ್ವಯ ಪ್ಲಾಸ್ಟರ್ ಆಫ್ ಪ್ಯಾರಿಸ್ ಮತ್ತು ಬಣ್ಣ ಲೇಪಿತ ಗಣೇಶ ವಿಗ್ರಹಗಳನ್ನು ಕೆರೆ ಮತ್ತು ಇತರೆ ಜಲಮೂಲಗಳಲ್ಲಿ ವಿಸರ್ಜಿಸುವದನ್ನು ನಿಷೇಧಿಸಲಾಗಿದ್ದು, ಈ ಹಿನ್ನೆಲೆಯಲ್ಲಿ ಪರಿಸರ ಸ್ನೇಹಿ ಗಣೇಶ ಮೂರ್ತಿಗಳ ಪ್ರತಿಷ್ಠಾಪನೆ ಮಾಡುವಂತೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಜಿಲ್ಲಾ ಪರಿಸರ ಅಧಿಕಾರಿ ಅನೀಲಕುಮಾರ ತಳಗೇರಿ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿರುವ ಅವರು, ಪ್ರತಿ ವರ್ಷದಂತೆ ಈ ಬಾರಿಯು ಸ್ವರ್ಣಗೌರಿ ಹಾಗೂ ವರಸಿದ್ಧಿ ವಿನಾಯಕ ಚತುರ್ಥಿ ಹಬ್ಬವು ಸಮೀಪಿಸುತ್ತಿದ್ದು, ಸಾರ್ವಜನಿಕರು ಪ್ಲಾಸ್ಟರ ಆಫ್ ಪ್ಯಾರಿಸ್ (ಪಿಓಪಿ) ಮತ್ತು ಬಣ್ಣದ ವಿಗ್ರಹಗಳನ್ನು ಸ್ಥಾಪಿಸಿ ಪೂಜಿಸಿದ ನಂತರ ಕೆರೆ, ಬಾವಿ ಹಾಗೂ ಇನ್ನಿತರ ಜಲಮೂಲಗಳಿಗೆ ವಿಸರ್ಜಿಸುವುದು ಸಂಪ್ರದಾಯವಾಗಿದೆ. ಆದರೆ ಇದ-ರಿಂದ ನೈಸರ್ಗಿಕ ಜಲಮೂಲಗಳು ಕಲುಷಿತಗೊಂಡು ಇವುಗಳ ಭೌತಿಕ ಹಾಗೂ ರಾಸಾಯನಿಕ ಗುಣಗಳು ಮಾರ್ಪಟ್ಟು ಪರಿಸರದ ಮೇಲೆ ದುಷ್ಪರಿಣಾಮ ಉಂಟಾಗುತ್ತದೆ.

ರಾಜ್ಯ ಮಾಲಿನ್ಯ ಮಂಡಳಿಯು ಈ ಹಬ್ಬದ ಆಚರಣೆಯಿಂದ ನೈಸರ್ಗಿಕ ಜಲ ಮೂಲಗಳನ್ನು ರಕ್ಷಿಸುವ ನಿಟ್ಟಿನಲ್ಲಿ ಜುಲೈ 20, 2016 ರಂದು ಅಧಿಸೂಚನೆಯನ್ನು ಹೊರಡಿಸಿದ್ದು, ಪ್ಲಾಸ್ಟರ ಆಫ್ ಪ್ಯಾರಿಸ್ ಮತ್ತು ಬಣ್ಣದ ಲೇಪಿತವಾದ ವಿಗ್ರಹಗಳನ್ನು ಇನ್ನುಮುಂದೆ ರಾಜ್ಯದ ಯಾವುದೇ ಕೆರೆ ಮತ್ತು ಇತರೆ ಜಲ ಮೂಲಗಳಲ್ಲಿ ವಿಸರ್ಜಿಸುವುದನ್ನು ನಿಷೇಧಿಸಲಾಗಿದೆ. ಈ ಆದೇಶ ಉಲ್ಲಂಘಿಸಿದಲ್ಲಿ ಜಲಮಾನ್ಯ ತಡೆ ಮತ್ತು ನಿಯಂತ್ರಣ ಕಾಯ್ದೆ, 1974ರ ಕಲಂ 45-ಎ ರ ಅನ್ವಯ ದಂಡವನ್ನು ಮತ್ತು ಜೈಲುವಾಸವನ್ನು ವಿಧಿಸಲು ಅವಕಾಶವಿರುತ್ತದೆ.

ಗೌರಿ ಹಾಗೂ ಗಣೇಶ ಹಬ್ಬದ ಸಂದರ್ಭದಲ್ಲಿ ರಾಸಾಯನಿಕ ಬಣ್ಣಗಳಿಂದ ಮಾಡಿದ ಮೂರ್ತಿಗಳ ಬದಲಾಗಿ ನೈಸರ್ಗಿಕ ವಸ್ತುಗಳಿಂದ ತಯಾರಿಸಿದ ಹಾಗೂ ನೈಸರ್ಗಿಕ ಬಣ್ಣ ಲೇಪಿತ ಮೂರ್ತಿಗಳನ್ನು ಪ್ರತಿಷ್ಠಾಪಿಸಿ, ಪೂಜಿಸಿ ನಂತರ ಸಾಮೂಹಿಕವಾಗಿ ಗುರುತಿಸಿದ ಸ್ಥಳಗಳಲ್ಲಿ ವಿಸರ್ಜನೆ ಮಾಡಬೇಕು. ಗಣೇಶ ವಿಸರ್ಜನೆ ಸಂದರ್ಭದಲ್ಲಿ ಹೂ, ಹಣ್ಣು, ಬಾಳೆ, ಕಂಬ, ಮಾವಿನ ತೋರಣ ಇತ್ಯಾದಿ ಅಲಂಕಾರಿಕ ವಸ್ತುಗಳನ್ನು ಪ್ರತ್ಯೇಕಿಸಿ ಮೂರ್ತಿಗಳೊಂದಿಗೆ ನೀರಿಗೆ ವಿಸರ್ಜಿಸದೇ ನಗರಸಭೆ, ಪುರಸಭೆ, ಪಟ್ಟಣ ಪಂಚಾಯತಿ ಕಸ ಸಂಗ್ರಹಣ ವಾಹನಕ್ಕೆ ನೀಡಬೇಕು ಎಂದು ತಳಗೇರಿ ತಿಳಿಸಿದ್ದಾರೆ.

ಸಾರ್ವಜನಿಕವಾಗಿ ನಡೆಸುವ ಗಣೇಶ ಮೂರ್ತಿಯ ಉತ್ಸವದ ಚಪ್ಪರಕ್ಕೆ ಪರಿಸರ ಸ್ನೇಹಿ ವಸ್ತುಗಳನ್ನೇ ಬಳಸಿ ನಿಷೇಧಿತ ಪ್ಲಾಸ್ಟಿಕ್ ವಸ್ತುಗಳ ಬಳಕೆ ಮಾಡಬಾರದು. ಮಾಲಿನ್ಯ ನಿಯಂತ್ರಣ ಮಂಡಳಿ ವತಿಯಿಂದ ಪ್ರತಿ ವರ್ಷ ಬಾಗಲಕೋಟೆ ನಗರದ ಆಯ್ದ ಸ್ಥಳಗಳಲ್ಲಿ ಗಣೇಶ ಮೂರ್ತಿಗಳನ್ನು ವಿಸರ್ಜಿಸಲು ಸಂಚಾರಿ ತೊಟ್ಟಿ ವ್ಯವಸ್ಥೆ ಮಾಡಲಾಗುತ್ತಿದೆ. ಇದರ ಸದುಪಯೋಗ ಪಡೆಯಲು ಸಾರ್ವಜನಿಕರಲ್ಲಿ ವಿನಂತಿಸಲಾಗಿದೆ. ವಿವರಗಳನ್ನು ಗಣೇಶ ವಿಗ್ರಹಗಳನ್ನು ಮನೆಗಳಲ್ಲಿ ಕೂರಿಸುವ ಮುನ್ನ ತಿಳಿಸಲಾಗುತ್ತದೆ. ಪ್ರತಿ ವರ್ಷದಂತೆ ಈ ವರ್ಷವೂ ಗಣೇಶ ಹಬ್ಬವನ್ನು ಪರಿಸರ ಸ್ನೇಹಿಯಾಗಿ ಆಚರಿಸೋಣ ಎಂದು ಜಿಲ್ಲಾ ಪರಿಸರ ಅಧಿಕಾರಿಗಳು ಸಾರ್ವಜನಿಕರಲ್ಲಿ ವಿನಂತಿಸಿಕೊಂಡಿದ್ದಾರೆ.

# ಸಂಜೀವಿನಿ ಸೂಪರ್ ಮಾರ್ಕೆಟ್‌ಗೆ ಚಾಲನೆ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.16-ಬಾಗಲಕೋಟೆ ನವನಗರದ ತಾಲೂಕಾ ಪಂಚಾಯತ ಆವರಣದಲ್ಲಿ ಪ್ರಾರಂಭಿಸಲಾದ ಸಹೋದರಿ ಸಂಜೀವಿನಿ ಸೂಪರ್ ಮಾರ್ಕೆಟ್‌ನ್ನು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಶುಕ್ರವಾರ ಉದ್ಘಾಟಿಸಿದರು.

ಜಿಲ್ಲಾ ಪಂಚಾಯತ ಎನ್.ಆರ್.ಎಲ್.ಎಂ ಯೋಜನೆಯಡಿ ಸ್ವ-ಸಹಾಯ ಸಂಘಗಳು ಪ್ರಾರಂಭಿಸಿರುವ ಈ ಸುಪರ್ ಮಾರ್ಕೆಟ್‌ಗೆ ಚಾಲನೆ ನೀಡಿ ಮಾಡನಾಡಿದ ಅವರು, ಸಮುದಾಯ ಆಧಾರಿತ ಸಂಸ್ಥೆಗಳ ಮೂಲಕ ಲಾಭದಾಯಕ ವೇತನ ಮತ್ತು ಸ್ವ-ಉದ್ಯೋಗ ಅವಕಾಶಗಳನ್ನು ಒದಗಿಸುವ ಹಾಗೂ ಜೀವನೋಪಾಯಗಳನ್ನು ಉತ್ತೇಜಿಸುವ ಮೂಲಕ ಗ್ರಾಮೀಣ ಬಡತನವನ್ನು ಹೋಗಲಾಡಿಸಲು ಎನ್.ಆರ್.ಎಲ್.ಎಂ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಈ ಯೋಜನೆಯ ಸದುಪಯೋಗವನ್ನು ಪಡೆದುಕೊಳ್ಳಲು ಸ್ವ-ಸಹಾಯ ಸಂಘಗಳು ಮುಂದೆ ಬರಬೇಕು ಎಂದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ, ಎನ್.ಆರ್.ಎಲ್.ಎಂ ಯೋಜನೆಯಡಿ ಸ್ವ-ಸಹಾಯ ಸಂಘಗಳ ಸದಸ್ಯರು ಸಮುದಾಯ ಬಂಡವಾಳ ನಿಧಿ ಹಾಗೂ ಬ್ಯಾಂಕ ಲಿಂಕೇಜ್ ಮೂಲಕ ಸಾಲ ಸೌಲಭ್ಯ ಹಾಗೂ ಸ್ವ-ಉದ್ಯೋಗ ಕೌಶಲ್ಯ ತರಬೇತಿ ಪಡೆದುಕೊಂಡು ವಿವಿಧ ಉತ್ಪನ್ನಗಳನ್ನು ತಯಾರಿಸುತ್ತಿದ್ದಾರೆ. ಸದಸ್ಯರು ತಯಾರಿಸುತ್ತಿರುವ ಉತ್ಪನ್ನಗಳಿಗೆ ಅಕ್ಕ, ಅಸ್ಮಿತೆ ಹೆಸರಿನ ಬ್ರ್ಯಾಂಡ್ ಮೂಲಕ ಉತ್ಪನ್ನಗಳನ್ನು ಮಾರಾಟ ಮಾಡಲು ಒಂದು ವೇದಿಕೆ ಕಲ್ಪಿಸಿ ಕೊಡುವ ಉದ್ದೇಶದಿಂದ ಮತ್ತು ಸೂಕ್ತವಾದ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸಲು ಸಹೋದರಿ ಸಂಜೀವಿನಿ ಸೂಪರ್ ಮಾರ್ಕೆಟ್ ಕಲ್ಪಿಸಲಾಗುತ್ತಿದೆ ಎಂದರು.

ಸೂಪರ್ ಮಾರ್ಕೆಟ್‌ನ್ನು ಗ್ರಾಮ ಪಂಚಾಯತ ಒಕ್ಕೂಟಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಎನ್.ಆರ್.ಎಲ್.ಎಂ ಸ್ವ-ಸಹಾಯ ಗುಂಪುಗಳ ಮೂಲಕ ನಿರ್ವಹಣೆ ಮಾಡಲಾಗುತ್ತಿದೆ. ಇದೇ ರೀತಿ ಜಿಲ್ಲೆಯ ಜಮಖಂಡಿ ನಗರ, ಬಾದಾಮಿ ತಾಲೂಕಿನ ಕುಳಗೇರಿ ಕ್ರಾಸ್ ಮತ್ತು ಬೀಳಗಿ ತಾಲೂಕಿನ ಬಾಡಗಿ ಪಟ್ಟಣದಲ್ಲಿ ಸಂಜೀವಿನಿ ಮಾರ್ಟ, ಕಿಯೋಸ್ಕಗಳನ್ನು ತೆರೆಯಲಾಗಿದೆ ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಶಾಸಕ ಹಾಗೂ ಬಿಟಿಡಿಎ ಅಧ್ಯಕ್ಷ ಎಚ್.ವಾಯ್.ಮೇಟಿ, ವಿಧಾನ ಪರಿಷತ್ ಶಾಸಕ ಪಿ.ಎಚ್.ಪೂಜಾರ, ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ತಾಲೂಕಾ ಅಧ್ಯಕ್ಷ ಎಸ್.ಎನ್.ರಾಂಪೂರ, ಜಿಲ್ಲಾಧಿಕಾರಿ ಸಂಗಪ್ಪ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಜಿ.ಪಂ ಉಪಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ, ಸಹಾಯಕ ಯೋಜನಾಧಿಕಾರಿ ಭೀಮಪ್ಪ ತಳವಾರ, ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಸುಭಾಷ ಸಂಪಗಾವಿ ಉಪಸ್ಥಿತರಿದ್ದರು.

ಪ್ರಾರಂಭದಲ್ಲಿ ಸ್ವ-ಸಹಾಯ ಸಂಘದ ಮಹಿಳೆಯರು ಸಚಿವರಿಗೆ, ಶಾಸಕರಿಗೆ ಆರತಿ ಬೆಳಗಿ ಸೂಪರ್ ಸ್ವಾಗತ ಕೋರಿದರು. ನಂತರ ಮಾರ್ಕೆಟ್‌ನಲ್ಲಿರುವ ವಿವಿಧ ಉತ್ಪನ್ನಗಳನ್ನು ವೀಕ್ಷಣೆ ಮಾಡಲಾಯಿತು.

# ರಾಜೀವಗಾಂಧಿ ವಿಶ್ವವಿದ್ಯಾಲಯದ ಕ್ರೀಡಾಕೂಟ ಮೆಡಿಕಲ್ ಕಾಲೇಜಿನ ವಿದ್ಯಾರ್ಥಿಗಳ ಸಾಧನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.16-ನಗರದ ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘದ ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದ ವಿದ್ಯಾರ್ಥಿಗಳು ರಾಜೀವಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕಲಬುರ್ಗಿ ವಲಯಮಟ್ಟದ ಶೆಟಲ್ ಬ್ಯಾಡ್ಮಿಂಟನ್, ಚೆಸ್ ಮತ್ತು ಟೇಬಲ್ ಟೆನ್ನಿಸ್ ಕ್ರೀಡೆಗಳಲ್ಲಿ ಸಾಧನೆ ತೋರಿ ಪ್ರಶಸ್ತಿ ಪಡೆದಿದ್ದಾರೆ. ರಾಯಚೂರಿನ ನವೋದಯ ಡೆಂಟಲ್ ಕಾಲೇಜಿನಲ್ಲಿ ಆಯೋಜಿಸಿದ್ದ ಚೆಸ್ ಕ್ರೀಡೆಯಲ್ಲಿ ಕಾಲೇಜಿನ ವಿದ್ಯಾರ್ಥಿಗಳ ತಂಡ ಪುರುಷರ ವಿಭಾಗದಲ್ಲಿ ಪ್ರಥಮ ಸ್ಥಾನ, ಕೊಪ್ಪಳದ ಗವಿಸಿದ್ದೇಶ್ವರ ಆಯುರ್ವೇದ ಮೆಡಿಕಲ್ ಕಾಲೇಜಿನಲ್ಲಿ ಆಯೋಜಿಸಿದ್ದ ಶೆಟಲ್ ಬ್ಯಾಡ್ಮಿಂಟನ್ ಕ್ರೀಡಾಕೂಟದಲ್ಲಿ ವಿದ್ಯಾರ್ಥಿನಿಯರ ತಂಡ ದ್ವಿತೀಯ ಸ್ಥಾನ ಮತ್ತು ವಿಜಯಪುರದ ಡಾ.ಬಿ.ಎನ್.ಎಮ್ ರೂರಲ್ ಆಯುರ್ವೇದಿಕ್ ಮೆಡಿಕಲ್ ಕಾಲೇಜಿನಲ್ಲಿ ನಡೆದ ಟೇಬಲ್ ಟೆನ್ನಿಸ್ ಪಂದ್ಯಾವಳಿಯಲ್ಲಿ ಪುರುಷರ ವಿಭಾಗದಲ್ಲಿ ದ್ವಿತೀಯ ಹಾಗೂ ಮಹಿಳಾ ವಿಭಾಗದಲ್ಲಿ ತೃತೀಯ ಸ್ಥಾನ ಲಭಿಸಿವೆ.

ಈ ಕ್ರೀಡಾಕೂಟಗಳಲ್ಲಿ ಎಸ್.ನಿಜಲಿಂಗಪ್ಪ ಮೆಡಿಕಲ್ ಕಾಲೇಜಿನ ತಂಡದ ನೇತೃತ್ವವನ್ನು ದೈಹಿಕ ನಿರ್ದೇಶಕ ಡಾ.ವಿಜಯಕುಮಾರ ಹಿರೇಮಠ ವಹಿಸಿದ್ದರು. ಅತ್ಯುತ್ತಮ ಸಾಧನೆ ಮಾಡಿ ಮಹಾವಿದ್ಯಾಲಯಕ್ಕೆ ಕೀರ್ತಿ ತಂದ ವಿದ್ಯಾರ್ಥಿಗಳನ್ನು ಬಿ.ವಿ.ವಿ ಸಂಘದ ಕಾರ್ಯಾಧ್ಯಕ್ಷ ವೀರಣ್ಣ ಚರಂತಿಮಠ, ಗೌರವ ಕಾರ್ಯದರ್ಶಿ ಮಹೇಶ ಅಥಣಿ, ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಸಜ್ಜನ, ಮೆಡಿಕಲ್ ಕಾಲೇಜ್ ಪ್ರಾಚಾರ್ಯೆ ಡಾ.ಭುವನೇಶ್ವರಿ ಯಳಮಲಿ, ವೈದ್ಯಕೀಯ ಅಧೀಕ್ಷಕರಾದ ಡಾ.ಶ್ರೀರಾಮ ಕೋರಾ ಮತ್ತು ಡಾ.ಸಂತೋಷ ಶೀಲವಂತ ಅಭಿನಂದಿಸಿದ್ದಾರೆ.

# ಸ್ವಾತಂತ್ರ್ಯ ತ್ಯಾಗ, ಬಲಿದಾನದ ಪ್ರತಿಫಲ-ಸೋರಗಾವಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.16-ದೇಶಕ್ಕೆ ಸ್ವಾತಂತ್ರ್ಯ ಸರಳವಾಗಿ ಸಿಕ್ಕಿದ್ದಲ್ಲ. ಅದು ಹಲವರ ತ್ಯಾಗ-ಬಲಿದಾನದ ಪ್ರತಿಫಲ. ಹೀಗಾಗಿ ಆ ಹೋರಾಟಗಾರರ ಸೇವೆಯನ್ನು ಧನ್ಯತಾ ಭಾವದಿಂದ ಸ್ಮರಿಸುವುದು ಎಲ್ಲರ ಕರ್ತವ್ಯವಾಗಿದೆ ಎಂದು ಸಕ್ರಿ ಪ್ರೌಢ ಶಾಲೆಯ ಹಳೆಯ ವಿದ್ಯಾರ್ಥಿ, ವಿಧಾನ ಪರಿಷತ್ ಮಾಜಿ ಸದಸ್ಯ ಸಿ.ಆರ್.ಸೋರಗಾವಿ ಹೇಳಿದರು.

79ನೇ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ವಿದ್ಯಾ ಪ್ರಸಾರಕ ಮಂಡಳದಲ್ಲಿ ಶುಕ್ರವಾರ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿ, ನಮ್ಮದು ಸಂಪದ್ಭರಿತ ರಾಷ್ಟ್ರ, ವಿದ್ಯಾರ್ಥಿಗಳು ದೇಶಪ್ರೇಮ ಬೆಳೆಸಿಕೊಂಡಲ್ಲಿ ಸಾಕಷ್ಟು ಪ್ರಗತಿಯನ್ನು ಸಾಧಿಸಬಹುದಾಗಿದೆ. ಇದಕ್ಕೆ ಇಸ್ರೇಲ್ ಮಾದರಿಯಾಗಬಲ್ಲದು ಎಂದರು.

ಇನ್ನೋರ್ವ ಹಳೆಯ ವಿದ್ಯಾರ್ಥಿ ಹಾಗೂ ವಿಧಾನ ಪರಿಷತ್ತ ಮಾಜಿ ಸದಸ್ಯ ಡಾ.ಎಂ.ಪಿ.ನಾಡಗೌಡ ಮಾತನಾಡಿ, ವಿವಿಧತೆಯಲ್ಲಿ ಏಕತೆ ಈ ದೇಶದ ಹಿರಿಮೆ-ಗರಿಮೆಯಾಗಿದೆ. ಸತ್ಯ-ಅಹಿಂಸೆಯ ಮೂಲಕವೇ ಸ್ವಾತಂತ್ರ್ಯವನ್ನು ಹಲವರ ಸಹಕಾರದಲ್ಲಿ ತಂದುಕೊಟ್ಟ ಮಹಾತ್ಮಾಗಾಂಧಿ ಮಾನವೀಯತೆ ಪ್ರತೀಕ ಎಂದರು. ಈ ದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರವನ್ನು ರಕ್ಷಿಸಿ, ಅದರ ಮತ್ತಷ್ಟು ಪ್ರಗತಿಗೆ ವಿದ್ಯಾರ್ಥಿಗಳು ಶ್ರಮಿಸಬೇಕು ಎಂದು ಹೇಳಿದರು.

ವಿದ್ಯಾ ಪ್ರಸಾರಕ ಮಂಡಳದ ಅಧ್ಯಕ್ಷ ವಿ.ವಾಯ್.ಕವತೇಕರ ಅಧ್ಯಕ್ಷತೆ ವಹಿಸಿದ್ದರು. ಎನ್‌ಸಿಸಿ, ಎನ್.ಎಸ್.ಎಸ್, ಸ್ಕೌಟ ಮತ್ತು ಗೈಡ ವಿದ್ಯಾರ್ಥಿಗಳಿಂದ ಪಥ ಸಂಚಲನ, ಮಕ್ಕಳ ಭಾಷಣ, ನೃತ್ಯ ಕಾರ್ಯಕ್ರಮಗಳು ಗಮನ ಸೆಳೆದವು.

ಎಸ್.ಬಿ.ಪರ್ವತೀಕರ ದೇಶ ಭಕ್ತಿಗೀತೆ ಹಾಡಿದರು. ಕಾರ್ಯಾಧ್ಯಕ್ಷೆ ಶ್ರೀಲತಾ ಹೆರಂಜಲ ಸ್ವಾಗತಿಸಿದರು. ಪ್ರಾಚಾರ್ಯ ಶ್ರೀನಿವಾಸ ನರಗುಂದ ಪರಿಚಯಿಸಿದರು. ಉಪನ್ಯಾಸಕಿ ಎಸ್.ಎಂ.ಜೇವೂರ ನಿರೂಪಿಸಿದರು. ಮುಖ್ಯ ಶಿಕ್ಷಕಿ ಶ್ರೀವೀಣಾ ನಾಯಕ ವಂದಿಸಿದರು. ಗೌರವ ಕಾರ್ಯದರ್ಶಿ ಡಾ.ಗಿರೀಶ ಮಸೂರಕರ, ಪ್ರಾಚಾರ್ಯ ಅಶೋಕ ಕಂದಗಲ್, ಬಿ.ಎಚ್.ಲಮಾಣಿ, ಸದಸ್ಯರಾದ ಎಸ್.ಕೆ.ಕುಲಕಣಿ, ಆರ್.ಎಸ್.ಕಂದಕೂರ, ಡಾ.ಜೆ.ಎಸ್.ದೇಶಪಾಂಡೆ, ಡಾ.ಪಿ.ಆರ್.ಜೋಶಿ, ಡಾ.ಎಂ.ಜಿ.ದೀಕ್ಷಿತ, ಎಸ್.ಕೆ.ದೇಶಪಾಂಡೆ ಪಾಲ್ಗೊಂಡಿದ್ದರು.

# ಗ್ರಾಮಗಳ ಅಭಿವೃದ್ಧಿಯೇ ದೇಶದ ಅಭಿವೃದ್ಧಿ-ಪಾಟೀಲ




ಮಲ್ಲಮ್ಮ ನುಡಿ ವಾರ್ತೆ


ಬಾಗಲಕೋಟೆ,ಆ.16-ಗ್ರಾಮಗಳ ಉದ್ಧಾರವೇ ದೇಶದ ಅಭಿವೃದ್ಧಿ ಎನ್ನುವ ಮಹಾತ್ಮಾಗಾಂಧೀಜಿಯವರ ಪರಿಕಲ್ಪನೆಯನ್ನು ಎಲ್ಲರೂ ಹೊಂದಬೇಕು ಎಂದು ಮಾಜಿ ಸಚಿವ ಎಸ್.ಆರ್.ಪಾಟೀಲ ಹೇಳಿದರು.

79ನೇ ಸ್ವಾತಂತ್ರ್ಯ ದಿನದಂದು ಜಿಲ್ಲೆಯ ಬೀಳಗಿ ತಾಲೂಕಿನ ಬಾಡಗಂಡಿಯ ಎಸ್.ಆರ್.ಪಾಟೀಲ ಸಮೂಹ ಶಿಕ್ಷಣ ಸಂಸ್ಥೆಯಲ್ಲಿ ಅವರು ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಮಹಾತ್ಮಜೀಯವರ ಪರಿಕಲ್ಪನೆಯನ್ನು ಇಟ್ಟುಕೊಂಡು ತಾವು ಪುಟ್ಟ ಹಳ್ಳಿ ಬಾಡಗಂಡಿಯಲ್ಲಿ ಶಿಕ್ಷಣ ಸಂಸ್ಥೆ ಹುಟ್ಟುಹಾಕಿ ಶಿಶುವಿಹಾರದಿಂದ ವೈದ್ಯಕೀಯ ಉನ್ನತ ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸಿರುವುದಾಗಿ ಹೇಳಿದರು.

ಕಾರ್ಯಕ್ರಮದಲ್ಲಿ ಶ್ರೀಮತಿ ಅನುಷಾ ನಾಡಗೌಡ, ಹೆಚ್.ಬಿ.ಧರ್ಮಣ್ಣವರ, ಧರ್ಮರಾಯ ಇಂಗಳೆ, ವಿಜಯಾನಂದ ಹಳ್ಳಿ, ಸಿ.ಆರ್.ಪೂಜಾರಿ, ಪ್ರಸಾದ ಪಾಟೀಲ, ಎ.ಎ.ಬಾಳಿಕಾಯಿ, ಅಶೋಕ ದಾದಮಿ ಹಾಗೂ ಬಾಪೂಜಿ ಅಂತರಾಷ್ಟ್ರೀಯ ಶಾಲೆ ಮತ್ತು ಬಾಪೂಜಿ ಸ್ವತಂತ್ರ ಪದವಿ ಪೂರ್ವ ಕಾಲೇಜು ಪ್ರಾಚಾರ್ಯರಾದ ಶಿವಭೋದ ಶೆಟ್ಟಿ, ಶಿಕ್ಷಕ ವೃಂದ, ಸಿಬ್ಬಂದಿ ವರ್ಗ ಮತ್ತು ವಿಧ್ಯಾರ್ಥಿಗಳು ಪಾಲ್ಗೊಂಡಿದ್ದರು.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:9449732000





ಕೃಷ್ಣ ಜನ್ಮಾಷ್ಟಮಿ ನಿಮಿತ್ತ ಪಟ್ಟಣದ ಶಿವಪೂರ ಬಡಾವಣೆಯ ಸತೀಷರೆಡ್ಡಿ ಕೇಶುಲ್‌ರವರ ಸುಪುತ್ರ ವಿಜ್ಞೇಶರೆಡ್ಡಿ ಹಾಗೂ ನಾಗೇಶರೆಡ್ಡಿ ಸುಪುತ್ರ ದರ್ಶನ ಇವರು ಶ್ರೀ ಕೃಷ್ಣನ ವೇಷಧರಿಸಿ ಜನರ ಕಣ್ಮನ ಸೆಳೆದರು. (ಮಲ್ಲಮ್ಮ ನುಡಿ ಚಿತ್ರ).

# ರಾಯಚೂರು ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ವರ್ಷದಲ್ಲಿ 1203 ಹೆರಿಗೆ ನಿರ್ವಹಿಸಿದ ಸಾಧನೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆ 16 : ನಗರದ ತಾಯಿ ಮಕ್ಕಳ ಆಸ್ಪತ್ರೆಯು ಒಂದು ವರ್ಷದಲ್ಲಿ 1203 ಹೆರಿಗೆಯನ್ನು ನಿರ್ವಹಿಸಿದ ಕೀರ್ತಿಗೆ ಪಾತ್ರವಾಗಿದೆ.

2024ರ ಆಗಸ್ಟ್ 15 ರಂದು ರಾಯಚೂರನಗರದಲ್ಲಿ ಆರಂಭವಾದ ಈ ತಾಯಿ ಮಕ್ಕಳ ಆಸ್ಪತ್ರೆಯು ಸುಸಜ್ಜಿತ ಹೆರಿಗೆ ಕೊಠಡಿ, ಅತ್ಯಾಧುನಿಕ ಉಪಕರಣಗಳು, ನುರಿತ ವೈದ್ಯರನ್ನು ಹೊಂದುವ ಮೂಲಕ ಕರ್ನಾಟಕ ಸರಕಾರದ ಆಶಯದಂತೆ ಕಡು ಬಡವರಿಗೆ ಗುಣಮಟ್ಟದ ಆರೋಗ್ಯ ಸೇವೆ ನೀಡುತ್ತಿದ್ದು ಇಲ್ಲಿ 681 ಸಹಜ ಹೆರಿಗೆಗಳು ಮತ್ತು ಶಸ್ತ್ರಚಿಕಿತ್ಸೆ ಮೂಲಕ 522 ಹೆರಿಗೆಗಳು ಸೇರಿ ಒಟ್ಟು 1203 ಹೆರಿಗೆಗಳನ್ನು ನಿರ್ವಹಿಸಲಾಗಿದೆ.

225 ಗಂಡಾಂತರ ಗರ್ಭಿಣಿಯರ ಹೆರಿಗೆ: ಹೆರಿಗೆ ಸಮಯದಲ್ಲಿ ತಾಯಿಯ ಜೀವಕ್ಕೆ ಅಪಾಯಕಾರಿಯಾಗುವ ಗಂಡಾಂತರ ಗರ್ಭಿಣಿ ಎಂದು ಹೇಳಲಾಗುವ ಚೊಚ್ಚಲು ಗರ್ಭಿಣಿ, 145 ಸೇಂಟಿ ಮೀಟರ್‌ಗಿಂತ ಕಡಿಮೆ ಎತ್ತರ, ಅಧಿಕ ರಕ್ತದೊತ್ತಡ, ಅವಳಿ ಜವಳಿ ಗರ್ಭಿಣಿ, ವಿವಾಹವಾಗಿ ಐದಕ್ಕಿಂತ ಹೆಚ್ಚು ವರ್ಷಗಳ ನಂತರ ಗರ್ಭಿಣಿಯಾಗಿರುವ, ಮೊದಲ ಹೆರಿಗೆ ಸಿಸೇರಿಯನ್ ಆಗಿರುವ ಮುಂತಾದ ಕಾರಣಗಳ ಹೆರಿಗೆ ಅಪಾಯಕಾರಿಯಾಗಿರುವ 225 ಗರ್ಭಿಣಿಯರ ಹೆರಿಗೆ ಮಾಡಲಾಗಿದೆ.

ಈ ಆಸ್ಪತ್ರೆಯು ಆರಂಭವಾಗಿ ವರ್ಷದಲ್ಲಿ ದೋಅಬ್ ನಾಡು ರಾಯಚೂರು ಜಿಲ್ಲೆಯ ಜನತೆಗೆ ಗುಣಮಟ್ಟದ ಆರೋಗ್ಯ ಸೇವೆ ನೀಡುವ ಜೊತೆಗೆ ತಾಯಿ ಮರಣ, ಶಿಶು ಮರಣ ತಡೆಗೆ ತನ್ನದೆ ಕೊಡುಗೆ ನೀಡುತ್ತಿರುವ ತಾಯಿ ಮಕ್ಕಳ ಆಸ್ಪತ್ರೆಯ ಸೇವೆಯನ್ನು ಸಾರ್ವಜನಿಕರು ಪಡೆಯಬೇಕು. ನಮಗೆ ಪ್ರತಿ ಹಂತದಲ್ಲೂ ಬೆಂಬಲ ನೀಡಿರುವ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರು, ಜಿಲ್ಲೆಯ ಸಚಿವರು, ಸಂಸದರು, ಶಾಸಕರು, ಜನಪ್ರತಿನಿಧಿಗಳು ಹಾಗೂ ಜಿಲ್ಲಾಡಳಿತವನ್ನು ಸದಾ ಸ್ಮರಿಸುತ್ತೇವೆ. ಮಕ್ಕಳ ಬೆಳವಣಿಗೆಯ ನ್ಯೂನ್ಯತೆಗಳನ್ನು ಗುರುತಿಸಿ ಚಿಕಿತ್ಸೆ ನೀಡುವ ಜಿಲ್ಲಾ ಆರಂಭಿಕ ಮಧ್ಯಸ್ಥಿಕೆ ಕೇಂದ್ರವನ್ನು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರ ಮಾರ್ಗದರ್ಶನದಲ್ಲಿ ಶೀಘ್ರದಲ್ಲಿಯೇ ಆರಂಭಿಸಲಾಗುತ್ತಿದೆ ಎಂದು ಇದೆ ವೇಳೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ ಸುರೇಂದ್ರಬಾಬು ಅವರು ತಿಳಿಸಿದ್ದಾರೆ.

ನಗರದ ನವೋದಯ ವೈದ್ಯಕೀಯ ಮಹಾವಿದ್ಯಾಲಯದ ಸಹಯೋಗದಲ್ಲಿ ತಜ್ಞ ವೈದ್ಯರು, ಸ್ನಾತ್ತಕೋತ್ತರ ವೈದ್ಯ ವಿದ್ಯಾರ್ಥಿಗಳು ಆಸ್ಪತ್ರೆಯಲ್ಲಿ ಹೆರಿಗೆ ನಿರ್ವಹಣೆ, ಮಕ್ಕಳ ಆರೈಕೆ ಚಿಕಿತ್ಸೆಗೆ ನಿರಂತರವಾಗಿ ಸಹಕರಿಸುತ್ತಿರುವುದರಿಂದ ಈ ಸಾಧನೆ ಮಾಡಲು ಸಹಕಾರಿಯಾಗಿದೆ. ಪ್ರಸ್ತುತ 4 ಪ್ರಸೂತಿ ತಜ್ಞರು, 3 ಮಕ್ಕಳ ತಜ್ಞರು, ಸೇರಿದಂತೆ ರೆಡಿಯಾಲಜಿಸ್ಟ್ ಡಾ ಪ್ರಜ್ವಲ್‌ಕುಮಾರ ಆಡಳಿತ ವೈದ್ಯಾಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ಡಿಎಚ್‌ಓ ಅವರು ತಿಳಿಸಿದ್ದಾರೆ.

ಈಗಾಗಲೆ ಪ್ರತಿ ತಿಂಗಳು 09 ಹಾಗೂ 24 ತಾರೀಖುಗಳಂದು ಪ್ರಧಾನಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನದಡಿ ಗಂಡಾಂತರ ಗರ್ಭಿಣಿಯರು

ಸೇರಿದಂತೆ ಎಲ್ಲ ಗರ್ಭಿಣಿಯರ ಆರೋಗ್ಯ ತಪಾಸಣೆಯನ್ನು ಪ್ರಸೂತಿ ತಜ್ಞರ ನೇತೃತ್ವದಲ್ಲಿ

ಮಾಡುವ ಮೂಲಕ ಹೆರಿಗೆ ದಿನಾಂಕ, ಮಗುವಿನ ಬೆಳವಣಿಗೆ, ಕಬ್ಬಿಣಾಂಶ ಮಾತ್ರೆಗಳ ಸೇವನೆ, ಪೌಷ್ಟಿಕಾಹಾರ ಮಹತ್ವ ಕುರಿತು ಜಾಗೃತಿ ನೀಡಲಾಗುತ್ತದೆ.

3 ನುರಿತ ಮಕ್ಕಳ ತಜ್ಞರ ಮೂಲಕ ಹೆರಿಗೆ ನಂತರ ಮಕ್ಕಳಿಗೆ ಕಂಡು ಬರಬಹುದಾದ ಯಾವುದೇ ಆರೋಗ್ಯ ಸಮಸ್ಯೆಗಳಿಗೆ, ಮಕ್ಕಳ ಇತರ ಆರೋಗ್ಯದ ಸಮಸ್ಯೆಗಳನ್ನು ಗುರುತಿಸಿ ಚಿಕಿತ್ಸೆಯನ್ನು ನೀಡಲಾಗುತ್ತಿದ್ದು, ಇಲ್ಲಿಯವರೆಗೆ 465 ಮಕ್ಕಳಿಗೆ ಒಳರೋಗಿಗಳಾಗಿ ಚಿಕಿತ್ಸೆ ನೀಡಲಾಗಿದೆ ಎಂದು ಇದೆ ವೇಳೆ ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ ನಂದಿತಾ ಎಮ್ ಎನ್ ಅವರು ಪ್ರತಿಕ್ರಿಯಿಸಿದ್ದಾರೆ.

# ಜಿಲೇಬಿ ತಳ್ಳುಗಾಡಿಗೆ ಬಂತು ಗಾಜಿನ ಪರದೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಆ. 16 : ನಗರದ ಮಹಾವೀರ ವೃತ್ತದ ರಸ್ತೆಯುದ್ದಕ್ಕೂ ಇರುವ ಜಿಲೇಬಿ ಮಾರಾಟ ಮಾಡುವ ತಳ್ಳುಗಾಡಿಗಳಿಗೆ ಗಾಜಿನ ಪರದೆ ಹಾಕಲಾಗಿದೆ. ಆಹಾರ ಸುರಕ್ಷತಾ ಇಲಾಖೆಯ ಅಧಿಕಾರಿಗಳು ಸ್ಥಳಕ್ಕೆ ಭೇಟಿ ಕೊಟ್ಟು, ಸ್ವಚ್ಛತೆಗೆ ಒತ್ತು ಕೊಡಬೇಕು. ತಳ್ಳುಗಾಡಿಗಳಿಗೆ ಗಾಜಿನ ಪರದೆ ಹಾಕಬೇಕೆಂದು ಸೂಚನೆ ಕೊಟ್ಟ ಹಿನ್ನೆಲೆಯಲ್ಲಿ ಹೀಗೆ ಮಾಡಿದ್ದಾರೆ.

'ರಸ್ತೆ ಬದಿ ಆಹಾರ ಮಾರಾಟ; ಶುಚಿತ್ವಕ್ಕಿಲ್ಲ ಒತ್ತು ಆಗಸ್ಟ್ 4ರಂದು ವಿಶೇಷ ವರದಿ ಪ್ರಕಟಿಸಿತ್ತು. ವರದಿ ಬೆನ್ನಲ್ಲೇ ಅಧಿಕಾರಿಗಳು ಸ್ಥಳಕ್ಕೆ ದೌಡಾಯಿಸಿ, ಗಾಜಿನ

ಪರದೆ ಇರದ ತಳ್ಳುಗಾಡಿಗಳನ್ನು ಅಲ್ಲಿಂದ ತೆರವುಗೊಳಿಸಿದರು. ಬಳಿಕ ಸಭೆ ನಡೆಸಿ, ಗಾಜಿನ ಪರದೆ ಹಾಕಿದವರಿಗೆ ಜಿಲೇಬಿ ಮಾರಾಟಕ್ಕೆ ಅವಕಾಶ ಕಲ್ಪಿಸಲಾಗುವುದು ಎಂದು ಷರತ್ತು ಹಾಕಿದ್ದರು.



ಬೀದರ: ಶ್ರೀ ಕೃಷ್ಣ ಜನ್ಮಾಷ್ಟಮಿಯ ಅಂಗವಾಗಿ ಶನಿವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶ್ರೀಕೃಷ್ಣನ ಭಾವಚಿತ್ರಕ್ಕೆ ಜ್ಯೋತಿ ಬೆಳಗಿಸಿ, ಪುಷ್ಪ ನಮನ ಸಲ್ಲಿಸಿ ಪೂಜೆ ಮಾಡಲಾಯಿತು. ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಶಿವಾನಂದ ಕರಾಳೆ, ಸಹಾಯಕ ಆಯುಕ್ತ ಮೊಹಮದ್ ಶಕೀಲ್, ವಕೀಲರಾದ ಕೆ. ಜಗನ್ನಾಥ, ಮುಖಂಡರಾದ ಈಶ್ವರಸಿಂಗ್ ಠಾಕೂರ್, ರಾಮಕೃಷ್ಣ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಭಗವಾನ ಶ್ರೀಕೃಷ್ಣ ತಮ್ಮ ಸಂದೇಶದ ಮೂಲಕ ಸಮಾಜಕ್ಕೆ ಉತ್ತಮ ಕೊಡುಗೆ ನೀಡಿದ್ದಾರೆ:ಶಾಸಕ ಅಲ್ಲಮ್ ಪ್ರಭು ಪಾಟೀಲ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:ಆ 16: ದ್ವಾಪರ ಯುಗದಲಿ ಶ್ರೀ ಕೃಷ್ಣ ಪರಮಾತ್ಮ ಅನೇಕ ಅವತಾರ ಧರಿಸಿ ಭೂಮಿಗೆ ಬಂದು ಸಮಾಜಕ್ಕೆ ತನ್ನದೆ ಆದಂತಹ ಕೊಡುಗೆಗಳನ್ನು ಕೊಟ್ಟಿದ್ದಾರೆಂದು ದಕ್ಷಿಣ ಮತಕ್ಷೇತ್ರದ ಶಾಸಕರಾದ ಅಲ್ಲಮ್ ಪ್ರಭು ಪಾಟೀಲ ಅ ವ'ರು ಹ'ೇ ಳಿ ದ'ರು. ಶನಿವಾರದಂದು ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ಪಂಚಾಯತ್ ಕಲಬುರಗಿ ಇವರುಗಳ ಸಂಯುಕ್ತಾಶ್ರಯದಲ್ಲಿ ಶ್ರೀ ಕೃಷ್ಣ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೇರವೇರಿಸಿ ಮಾತನಾಡಿದರು.

ವಸುದೇವ-ದೇವಕಿಯ ಪುತ್ರನಾಗಿ ಜನಿಸಿದ ಶ್ರೀ ಕೃಷ್ಣ ಮುಂದೆ ನಂದಗೋಕುಲದಲ್ಲಿ ಬೆಳೆದು ಯಶೋದೆಯ ಮಗನಾಗಿಯೂ ಗಮನ ಸೆಳೆಯುತ್ತಾನೆ ಶ್ರೀ ಕೃಷ್ಣ ಬಾಲ್ಯದಲ್ಲಿ ತುಂಟತನದ ಮೂಲಕ ವಿಶೇಷವಾಗಿ ಗೋಚರಿಸುತ್ತಾನೆ ಎಂದರು. ಆ ತ' ನ' ಬದುಕಿನ ಹಲವಾರು ಮಹತ್ವದ ಘಟ್ಟಗಳನ್ನು ನಾವು ಅರಿತುಕೊಳ್ಳವುದು ಅಗತ್ಯ ನಮ್ಮೆಲ್ಲರ ಜೀವನೋತ್ಸವದ ಸಂಕೇತವಾಗಿರುವ ಶ್ರೀ ಕೃಷ್ಣನ್ ಪ್ರಬುದ್ಧತೆ ಇಂದಿನ ಕಾಲಘಟಕ್ಕೂ ಮಾದರಿಯಾಗಿ ನಿಲ್ಲುತ್ತದೆ ಎಂದು ಹೇಳಿದರು. ನಾವೆಲ್ಲರೂ ಕೂಡ ಶಿಕ್ಷಣವನ್ನು ಪಡೆದು ಮುಂದೆ ಬಂದು ನಾವು ಇನ್ನೊಬ್ಬರಿಗೆ ಮಾದರಿಯಾಗಬೇಕು ಮತ್ತು ಸರ್ಕಾರದಿಂದ ಸಿಗುವ ಸೌಲಭ್ಯಗಳನ್ನು ಪಡೆದುಕೊಳ್ಳಬೇಕೆಂದರು

ಜಿಲ್ಲಾಧಿಕಾರಿಗಳ ಕಚೇರಿಯ ಸಹಾಯಕ ನಿರ್ದೇಶಕ ಶಿವಶರಣಪ್ಪ ಧನ್ನಿ ಅವರು ಮಾತನಾಡಿ, ನಾವು ಕೇವಲ ಜಯಂತಿಗೆ ಅಷ್ಟೆ ಸೀಮಿತವಾಗಬಾರದು ಅವರು ತೋರಿದ ಮಾರ್ಗದರ್ಶನದಲ್ಲಿ ನಡಿಯಬೇಕು ಎಂದು ಹೇಳಿದರು.

ಸಾಹಿತಿಗಳಾದ ಡಾ. ಅಂಬುಜಾ ಮಳಖೇಡಕರ್ ವಿಶೇಷ ಉಪನ್ಯಾಸಕರಾಗಿ ಮಾತನಾಡಿ, ನಮ್ಮ ಈ ಸಂಸಾರದ ಭೋಗಸಾರದಲ್ಲಿ ಮುಳಗಿ ಕಾಮ, ಕ್ರೋದ, ಮದ, ಲೋಭ ಇವೆಲ್ಲಾ ಗುಣಗಳನ್ನು ಅಳವಡಿಸಿಕೊಂಡು ಪಾಪ ಕರ್ಮಗಳನ್ನು ಮಾಡಿಕೊಂಡು ಹೇಗೊ ನಮ್ಮ ಜೀವನ ಸಾಗಿಸುತ್ತಾ ಬಂದೆವು ಎಂದು ಹೇಳಿದರು. ಕೃಷ್ಣ ಎಂದರೆ ನಮ್ಮ ಮನಸ್ಸಿಗೆ ಎನೋ ಆನಂದ ಸಿಗುತ್ತದೆ, ಹಾಗೆ ಮಹಾಭಾರತದ ಕುರಿತು ಕೃಷ್ಣನ ಕಥೆಗಳ ಕುರಿತು ನಾವೆಲ್ಲರೂ ಓದಿದ್ದೇವೆ ನಮ್ಮ ಕನಕದಾಸರು ತಮ್ಮ ದಾಸ ಸಾಹಿತ್ಯದಲ್ಲಿ ಶ್ರೀ ಕೃಷ್ಣನ ಗುಣ ಮತ್ತು

ಲೀಲೆಗಳನ್ನು 24 ಹೆಸರುಗಳಿಂದ ಸಂಭೋದಿಸಿದ್ದಾರೆ, ಅವರ ಭಕ್ತಿ ಮತ್ತು ಪ್ರೀತಿಯಿಂದ ಕೃಷ್ಣನಿಗೆ ಹೇಗೆ ಅವರು ತಮ್ಮ ಭಕ್ತಿಯಿಂದ ಹೊಗಳಿದ್ದಾರೆ ಎಂದರು.

ಮಹಾನಗರ ಪಾಲಿಕೆಯ ನೌಕರರ ಸಂಘದ ಅಧ್ಯಕ್ಷ ರಾಜಕುಮಾರ ಕಟ್ಟಿಮನಿ ಅವರು ಮಾತನಾಡಿದರು.

ಶ್ರೀ ಕೃಷ್ಣನ ಜಯಂತಿ ಮೆರವಣಿಗೆಯು ಜಗತ್ತಿನಿಂದ ಹೊರಟು ಕನ್ನಡ ಸಾಹಿತ್ಯ ಪರಿಷತ್ತಿನವರೆಗೆ ಬಂದು ಮುಕ್ತಾಯವಾಯಿತು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪನಿರ್ದೇಶಕ ಜಗದಿಶ್ವರಿ ಎ. ನಾಸಿ ಅವರು ಸ್ವಾಗತಿಸಿದರು. ಯಾದವ ಸಂಘದ ಅಧ್ಯಕ್ಷರಾದ ರವಿ ಉದನೂರು, ಸಂಘದ ಮುಖಂಡರು ಉಪಸ್ಥಿತರಿದ್ದರು ಶಿವರಾಜ ಅಣಜಿಗಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ಶ್ರೀ ಕೃಷ್ಣನ ಆದರ್ಶಗಳನ್ನು ಪಾಲನೆ ಮಾಡೋಣ: ಸಂಸದ ಜಿ.ಕುಮಾರ ನಾಯಕ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆ 16 : ಶ್ರೀಕೃಷ್ಣನ ಪ್ರಬುದ್ಧತೆ, ಮುತ್ಸದ್ಧಿತನವು ಇಂದಿನ ಕಾಲಘಟ್ಟಕ್ಕೂ ಮಾದರಿಯಾಗಿದ್ದು, ನಮ್ಮೆಲ್ಲರನ್ನು ರಕ್ಷಿಸುವ ಶ್ರೀ ಕೃಷ್ಣನು ತಿಳಿಸಿದ ಆದರ್ಶ ಜೀವನ ಮೌಲ್ಯಗಳನ್ನು ನಾವೆಲ್ಲರು ಪಾಲನೆ ಮಾಡೋಣ ಎಂದು ಸಂಸದರಾದ ಜಿ.ಕುಮಾರ ನಾಯಕ ಅವರು ಸಲಹೆ ನೀಡಿದರು.

ಆಗಸ್ಟ್ 16ರ ಶನಿವಾರ ದಂದು ನಗರದ ಯಾದವ್ ಕಲ್ಯಾಣ ಮಂಟಪದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ನಡೆದ ಶ್ರೀಕೃಷ್ಣ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಶ್ರೀ ಕೃಷ್ಣನು ಪುರತಾನ ಕಾಲದ ಸುಪ್ರಸಿದ್ಧ ಸಂಧಾನಕಾರರಾಗಿದ್ದಾರೆ. ಶ್ರೀ ಕೃಷ್ಣನ ಹೇಳಿದ ತತ್ವಗಳು ಪ್ರತಿ ಮನೆಮನೆಯಲ್ಲೂ ಸ್ಮರಣೆಯಾಗಬೇಕು ಎಂದು ಸಲಹೆ ಮಾಡಿದರು.

ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಶಿವರಾಜ ಎಸ್.ಪಾಟೀಲ್ ಅವರು ಮಾತನಾಡಿ, ಮಹಾಭಾರತದಲ್ಲಿ ಪಾಂಡವರು ಜಯಿಸಲು ಶ್ರೀ ಕೃಷ್ಣನೇ ಕಾರಣ-ಕರ್ತರು, ಶ್ರೀಕೃಷ್ಣನ ತತ್ವಗಳು, ಉಪನಿಷತ್ತುಗಳನ್ನು ನಮ್ಮ ಜೀವನದ ಮೌಲ್ಯಕ್ಕೆ ಅಳವಡಿಸಿಕೊಂಡರೆ ಸಮಾಜದ ಅಭಿವೃದ್ಧಿ ಸಾಧ್ಯ, ಸೌಮ್ಯತೆಯ ಒಡನಾಟದಿಂದ ಬಾಳುವ ಸಮಾಜವೆಂದರೆ ಯಾದವ ಸಮಾಜವಾಗಿದೆ ಎಂದು ತಿಳಿಸಿದರು.

ಈ ವೇಳೆ ವಿಧಾನ ಪರಿಷತ್ ಸದಸ್ಯರಾದ ಎ.ವಸಂತಕುಮಾರ ಅವರು ಮಾತನಾಡಿ, ಯಾವುದೇ ಸಮಾಜವು ಪರಿಪೂರ್ಣವಾಗಿ ಅಭಿವೃದ್ಧಿ ಹೊಂದಲು ಶಿಕ್ಷಣ ಅತ್ಯಂತ ಮುಖ್ಯವಾಗಿದ್ದು, ಪ್ರತಿಯೊಬ್ಬರು ತಮ್ಮ ಮಕ್ಕಳನ್ನು ಶಿಕ್ಷಣವಂತರನ್ನಾಗಿ ಮಾಡುವ ಮೂಲಕ ಸಮಾಜ ಹಾಗೂ ದೇಶಕ್ಕೆ ಕೊಡುಗೆ ನೀಡಬೇಕು ಎಂದರು.

ಇದೆ ವೇಳೆ ಕೆ.ಶಾಂತಪ್ಪ ಅವರು ಮಾತನಾಡಿ, ಸಂಘಟನೆಯಿದ್ದರೆ ಒಗ್ಗಟ್ಟು, ಒಗ್ಗಟ್ಟಾಗಿ ಇದ್ದರೆ ಸಮಾಜವು ಸಾಮಾಜಿಕವಾಗಿ, ಆರ್ಥಿಕವಾಗಿ, ಶೈಕ್ಷಣಿಕವಾಗಿ ಮತ್ತು ರಾಜಕೀಯವಾಗಿ ಮುಂದೆ ಬರಲು ಸಾಧ್ಯ. ಪ್ರತಿಯೊಬ್ಬರು ಒಗ್ಗಟ್ಟಿನಿಂದ, ಸೌಹಾರ್ದತೆಯ ಬದುಕನ್ನು ಕಟ್ಟಿಕೊಳ್ಳಲು ಮುಂದಾಗಬೇಕೆಂದರು.

ಈ ವೇಳೆ ಶ್ರೀಕೃಷ್ಣನ ಕುರಿತು ಪ್ರದೀಪ್ ಕುಮಾರ್ ದೀಕ್ಷಿತ್ ಅವರು ವಿಶೇಷ ಉಪನ್ಯಾಸ ನೀಡಿದರು.

ಶ್ರೀಕೃಷ್ಣ ಭಾವಚಿತ್ರ ಮೆರವಣಿಗೆ: ಶ್ರೀಕೃಷ್ಣ ಜಯಂತಿಯ ಅಂಗವಾಗಿ ಬೆಳಗ್ಗೆ 9 ಗಂಟೆಗೆ ರಾಯಚೂರಿನ ನಗರೇಶ್ವರ ದೇವಾಸ್ಥಾನದಿಂದ ಶ್ರೀ ಕೃಷ್ಣದೇವಸ್ಥಾನದ ಆವರಣದವರೆಗೆ ಶ್ರೀ ಕೃಷ್ಣ ಭಾವಚಿತ್ರವನ್ನು ಅದ್ದೂರಿ ಮೆರವಣಿಗೆ ಮಾಡಲಾಯಿತು. ಈ ವೇಳೆ ಸಂಸದರು, ಶಾಸಕರು, ವಿಧಾನ ಪರಿಷತ್ ಸದಸ್ಯರು ಹಾಗೂ ಸ್ಥಳೀಯ ಸಂಸ್ಥೆಯ ಜನಪ್ರತಿನಿಧಿಗಳು ಮೆರವಣಿಗೆಯಲ್ಲಿ ಭಾಗಿಯಾಗಿ ಮೆರುಗು ಹೆಚ್ಚಿಸಿದರು. ವಿವಿಧ ಗಣ್ಯರಿಗೆ ಸನ್ಮಾನ: ನಗರದ ಶ್ರೀ ಕೃಷ್ಣ ದೇವಸ್ಥಾನದ ಆವರಣದಲ್ಲಿರುವ ಯಾದವ್ ಕಲ್ಯಾಣ ಮಂಟಪದಲ್ಲಿ ಯಾದವ್ ಸಮಾಜದಿಂದ ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಶಿವರಾಜ ಎಸ್.ಪಾಟೀಲ್, ಸಂಸದರಾದ ಜಿ.ಕುಮಾರನಾಯಕ, ವಿಧಾನ ಪರಿಷತ್ ಸದಸ್ಯರಾದ ಎ.ವಸಂತಕುಮಾರ್ ಸೇರಿದಂತೆ ವಿವಿಧ ಗಣ್ಯರಿಗೆ ಸನ್ಮಾನ ಮಾಡಿ ಗೌರವಿಸಲಾಯಿತು. ಇದೇ ಸಂದರ್ಭದಲ್ಲಿ ಪಾಲಿಕೆಯ ಹಿರಿಯ ಸದಸ್ಯರಾದ ಜಯಣ್ಣ, ಪಾಲಿಕೆಯ ಸದಸ್ಯರಾದ ಬಿ.ರಮೇಶ,

ಶಶಿಧರ, ಆರ್.ಡಿ.ಎ.ಸದಸ್ಯರಾದ ನರಸಿಂಹಲು, ಮುಖಂಡರಾದ ತಿಮ್ಮಪ್ಪನಾಡಗೌಡರು, ಎ.ಮಾರೆಪ್ಪ ವಕೀಲರು, ರಾಜಶೇಖರ ನಾಯಕ, ಮೊಹಮದ್ ಶಾಲಂ, ಕೆ.ಶಾಂತಪ್ಪ, ಸಮಾಜದ ಮುಖಂಡರಾದ ಡಿ.ಕೆ. ಮುರುಳೀಧರ್ ಯಾದವ, ರಮೇಶ ಯಾದವ್, ದಾರಪ್ಪ ಯಾದವ್ ಸೇರಿದಂತೆ ಇತರರು ಇದ್ದರು.

# ಯಂಗ್ ಇಂಡಿಯಾ ಕಾಂಗ್ರೆಸ್ ಪಕ್ಷಕ್ಕೆ ಚುನಾವಣಾ ಆಯೋಗದಿಂದ ನೋಟಿಸ್

ಮಲ್ಲಮ್ಮ ನುಡಿ ವಾರ್ತೆ

ಬೀದರ, ಅ 16 : ಯಂಗ್ ಇಂಡಿಯಾ ಕಾಂಗ್ರೆಸ್ ಪಕ್ಷಕ್ಕೆ (ಯಲ್ಲಮ್ ಗಲ್ಲಿ, ತುಗಾಂವ (ಹೆಚ್), ತಾಲ್ಲೂಕಾ ಭಾಲ್ಕಿ ಜಿಲ್ಲೆ ಬೀದರ.) ಚುನಾವಣಾ ಆಯೋಗದಿಂದ ನೋಟಿಸ್ ಜಾರಿಗೊಳಿಸಲಾಗಿದೆ ಎಂದು ಬೀದರ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಚುನಾವಣಾ ಆಯೋಗದಲ್ಲಿ 1951ರ ಜನತಾ ಪ್ರಾತಿನಿಧ್ಯ ಕಾಯ್ದೆ ಸೆಕ್ಷನ್ 29ಎ ರನ್ವಯ ಸಂಘ, ಸಂಸ್ಥೆಯನ್ನು ರಾಜಕೀಯ ಪಕ್ಷವಾಗಿ ನೊಂದಾಯಿಸಲಾಗುತ್ತದೆ. ನೊಂದಾಯಿಸಿದ ಅಂತಹ ಪಕ್ಷಗಳು ಚುನಾವಣೆಯಲ್ಲಿ ಭಾಗವಹಿಸಬೇಕು. ಆದರೆ ಕಳೆದ 6 ವರ್ಷಗಳಿಂದ ಯಾವುದೇ ಜನಪ್ರತಿನಿಧಿಗಳ ಸದನಗಳಿಗೆ, ವಿಧಾನಸಭೆ, ಉಪಚುನಾವಣೆಯಲ್ಲಿ ಯಾವುದೇ ಅಭ್ಯರ್ಥಿಗಳನ್ನು "Young India Tangress Party" (ಯಲ್ಲಮ್ ಗಲ್ಲಿ, ತುಗಾಂವ (ಹೆಚ್), ತಾಲ್ಲೂಕಾ ಭಾಲ್ಕಿ ಜಿಲ್ಲೆ ಬೀದರ.) ಪಕ್ಷದಿಂದ ಅಭ್ಯರ್ಥಿಯನ್ನಾಗಿ ಮಾಡದಿರುವುದು ಕಂಡು ಬಂದಿದೆ.

ಸತತ ಆರು ವರ್ಷಗಳ ಕಾಲ ನೊಂದಾಯಿತ ಮಾನ್ಯತೆ ಪಡೆ-ಯದ ಪಕ್ಷದಿಂದ ಜನ ಪ್ರತಿನಿಧಿಗಳ ಸದನಗಳಿಗೆ ನಡೆಯುವ ಚುನಾವಣೆ, ವಿಧಾನಸಭಾ, ಉಪ ಚುನಾವಣೆಗಳಲ್ಲಿ, ಅಭ್ಯರ್ಥಿಗಳನ್ನು ನಿಲ್ಲಿಸದಿದ್ದಲ್ಲಿ ಅಂತಹ ಗುರುತಿಸಲಾದ ರಾಜಕೀಯ ಪಕ್ಷಗಳನ್ನು ನೋಂದಾಯಿತ ಪಕ್ಷಗಳ ಪಟ್ಟಿಯಿಂದ ಕೈಬಿಡಲು ಸಂವಿಧಾನದ 324ನೇ ವಿಧಿ ಮತ್ತು 1951ರ ಜನತಾ ಪ್ರಾತಿನಿಧ್ಯ ಕಾಯಿದೆ ಸೆಕ್ಷನ್ 29ಎ ರಡಿ ತೆಗೆದು ಹಾಕಲು ಅಧಿಕಾರ ನೀಡಲಾಗಿದೆ.

ನೋಂದಾಯಿತ ರಾಜಕೀಯ ಪಕ್ಷಗಳು ಮುಂದುವರೆಯಲು ಬಯಸಿದ್ದಲ್ಲಿ ಪಕ್ಷದ ಅಧ್ಯಕ್ಷರು ಅಥವಾ ಪ್ರಧಾನ ಕಾರ್ಯದರ್ಶಿಯಿಂದ ಮತ್ತು ಪಕ್ಷ ಅಸ್ತಿತ್ವದಲ್ಲಿ ಮುಂದುವರೆಯಲು ಎಲ್ಲಾ ದಾಖಲೆಗಳೊಂದಿಗೆ ಮಾನ್ಯ ಮುಖ್ಯ ಚುನಾವಣಾಧಿಕಾರಿಗಳು ಬೆಂಗಳೂರು ರವರ ಕಛೇರಿ ದಿನಾಂಕ: 01-09-2025 ರೊಳಗಾಗಿ ಸಲ್ಲಿಸಬೇಕು ಯಾವುದೇ ಉತ್ತರ ಬಾರದಿದ್ದಲ್ಲಿ ಆಯೋಗವು ಮುಂದಿನ ಕ್ರಮ ಕೈಗೊಳ್ಳಲಿದೆ ಎಂದು ಮುಖ್ಯ ಚುನಾವಣಾಧಿಕಾರಿಗಳು ಬೆಂಗಳೂರು ಅವರು ತಿಳಿಸಿದ್ದಾರೆಂದು ಬೀದರ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

# ಪ್ರತಿಯೊಬ್ಬರು ದೇಶದ ಅಭಿಮಾನ ಬೆಳಸಿಕೊಳ್ಳಬೇಕು: ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ



ಮಲ್ಲಮ್ಮ ನುಡಿ ವಾರ್ತೆ

ಬೀದರ, ಅ 16 : ಪ್ರತಿ ವರ್ಷ ಸ್ವಾತಂತ್ರೋತ್ಸವ ಆಚರಿಸುತ್ತ ಬರುತ್ತಿದ್ದೇವೆ. ರಾಷ್ಟಕ್ಕೆ ತಾನು ಆತ್ಮಸಾಕ್ಷಿಯಾಗಿ ಸಲ್ಲಿಸಬೇಕಾದ ಕಾಣಿಕೆಗಳೇನು ಎಂಬುದು ಪ್ರತಿಯೊಬ್ಬ ಪ್ರಜೆ ಯೋಚಿಸಿ ದೇಶಾಭಿಮಾನ ಬೆಳಸಿಕೊಳ್ಳಬೇಕೆಂದು ಬೀದರ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ತಿಳಿಸಿದರು.

ಅವರಿಂದು ಕರ್ನಾಟಕ ಸಾಹಿತ್ಯ ಸಂಘ ಹಾಗೂ ಜಿಲ್ಲಾಡಳಿತದ ಸಹಯೋಗದಲ್ಲಿ ಸ್ವಾತಂತ್ರ್ಯೋತ್ಸವ ಪ್ರಯುಕ್ತ ಆಯೋಜಿಸಿದ ಬಹುಭಾಷಾ ಕವಿಗೋಷ್ಠಿಯನ್ನು ಉದ್ಘಾಟಿಸಿ ಮಾತನಾಡಿದರು.

ರಾಷ್ಟದ ಸೇವೆಗಾಗಿ ತನ್ನ ಬಾಳನ್ನು ಮುಡುಪಾಗಿಡಬೇಕು. ಭಾವೈಕ್ಯತೆಗಾಗಿ ಶ್ರಮಿಸಬೇಕು, ದೇಶಭಕ್ತರು ಹಾಕಿಕೊಟ್ಟ ಪಥದಲ್ಲಿ ನಡೆಯಬೇಕು. ಆ ಕಾರ್ಯ ಕರ್ನಾಟಕ ಸಾಹಿತ್ಯ ಸಂಘದವರು ಸಾಹಿತ್ಯ ಚಟುವಟಿಕೆಗಳು ಆಯೋಜನೆ ಮೂಲಕ ಮಾಡುತ್ತಿದ್ದಾರೆ. ವಿದ್ಯಾರ್ಥಿಗಳು, ಕವಿಗಳು ಕೌಶಲ್ಯಗಳನ್ನು ಬೆಳಸಿಕೊಂಡು ಉತ್ತಮ ಸಾಹಿತ್ಯ ರಚಿಸುವ, ವಾಚಿಸುವ, ದೇಶಾಭಿಮಾನ ಮೂಡಿಸುವ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಬೇಕೆಂದು ತಿಳಿಸಿದರು.

ಸರಸ್ವತಿ ಶಿಕ್ಷಣ ಸಂಸ್ಥೆಯ ಉಪಾಧ್ಯಕ್ಷ ನಾಗೇಶ ರೆಡ್ಡಿ ಮಾತನಾಡಿ, ಸ್ವಾತಂತ್ರ್ಯೋತ್ಸವ ಆಚರಿಸುವ ದಿಶೆಯಲ್ಲಿ ಶ್ರದ್ಧಾ, ಭಕ್ತಿ, ಸ್ಮರಿಸುವ ಗುಣ ಬೆಳಸಿಕೊಳ್ಳಬೇಕು. ಎಲ್ಲರೂ ಸುಖವಾಗಿ ಬಾಳುವಂತೆ ಭಾವೈಕ್ಯತೆಯಿಂದ ಬದುಕಬೇಕೆಂದರು.

ಕಾರ್ಯಕ್ರಮದಲ್ಲಿ ಶಿವರಾಜ ಮಿತ್ರಾ, ಡಾ. ಸುನಿತಾ ಕೂಡ್ಲಿಕರ್, ಡಾ. ಕಿರಣ ವಲ್ಲೇಪೂರ, ಓಂಕಾರ ಉಪ್ಪೆ ಪಾಟೀಲ, ಹಮೀದ ಸಲೀಮ, ಮನ್ವರ ಅಲಿ, ಡಾ. ಸಾವಿತ್ರಿ ಹೆಬ್ಬಾಳೆ, ಅಮೀರೋದ್ದೀನ್ ಅಮಿರ, ಸಯಿದಾ ಅಸ್ರಾ ಎ. ಖಾದ್ರಿ, ಸಯಿದಾ ಕರಿಮ ಉನಿಸಾ ಖಾದ್ರಿ, ಮಸ್ತಾಫೀಮಾ ಬೇಗಂ, ಪವನ ಶಿವರಾಜ, ತನುಜಾ ಗೌತಮ್, ಭುಮವೇಶ್ವರಿ ಬಸವರಾಜ, ಸುಜಾತಾ ಡೊಂಬಾಳೆ, ಆಶಾಬಾಯಿ ರಾಠೋಡ, ರಾಜೇಶ್ವರಿ ಕರುಣಾಕರ್, ಪಿ. ಗುರುಮೂರ್ತಿ, ಕೃಷ್ಣಾವೇಣಿ ಬಿ., ಶ್ರೀಮತಿ ಇಂದಿರಾ ಮಜಗೆ ಮುಂತಾದ ಕವಿಗಳು ಕನ್ನಡ, ಹಿಂದಿ, ಉರ್ದು, ಆಂಗ್ಲ, ಮರಾಠಿ ಹಾಗೂ ಲಂಬಾಣಿ ಭಾಷೆಯಲ್ಲಿ ರಾಷ್ಟ್ರೀಯ ಭಾವೈಕ್ಯತೆ ವಿಷಯದ ಕುರಿತಾಗಿ ಕವನ ವಾಚನ ಮಾಡಿದರು.

ಕರ್ನಾಟಕ ಸಾಹಿತ್ಯ ಸಂಘ ಟ್ರಸ್ಟಿನ ಅಧ್ಯಕ್ಷ ಶಂಕರರಾವ ಹೊನ್ನಾ, ಕರ್ನಾಟಕ ಸಾಹಿತ್ಯ ಸಂಘದ ಅಧ್ಯಕ್ಷ ಪ್ರೊ. ಜಗನ್ನಾಥ ಹೆಬ್ಬಾಳೆ ಸೇರಿದಂತೆ ನೂರಾರು ಸಾಹಿತ್ಯಾಸಕ್ತರು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದರು.

ಕಾರ್ಯಕ್ರಮದ ಆರಂಭದಲ್ಲಿ ಕುಮಾರಿ ರೇಖಾಶಂಕರ ನೃತ್ಯರೂಪಕ ನಡೆಸಿಕೊಟ್ಟರು. ರಾಷ್ಟ್ರೀಯ ಜನಪದ ಬುಡಕಟ್ಟು ಕಲಾ ಪರಿಷತ್ತಿನ ಪ್ರಧಾನ ಕಾರ್ಯದರ್ಶಿ ಹಾಗೂ ಕರ್ನಾಟಕ ಸಾಹಿತ್ಯ ಸಂಘದ ಜಂಟಿ ಕಾರ್ಯದರ್ಶಿಗಳಾದ ಡಾ. ರಾಜಕುಮಾರ ಹೆಬ್ಬಾಳೆ ಸ್ವಾಗತಿಸಿ ಪ್ರಸ್ತಾವಿಕವಾಗಿ ಮಾತನಾಡಿದರು. ಕರ್ನಾಟಕ ಜಾನಪದ ಪರಿಷತ್ತಿನ ತಾಲೂಕಾಧ್ಯಕ್ಷರಾದ ಎಸ್.ಬಿ.ಕುಚಬಾಳ ಕಾರ್ಯಕ್ರಮ ನಿರೂಪಿಸಿದರು. ಕಜಾಪ ಜಿಲ್ಲಾ ಕಾರ್ಯದರ್ಶಿ ಡಾ. ಸುನಿತಾ ಕೂಡ್ಲಿಕರ್ ವಂದಿಸಿದರು.

# ರಾಜ್ಯದಲ್ಲಿ ಹೃದಯಾಘಾತದಿಂದ ಸಾವನ್ನಪ್ಪುವವರ ಸಂಖ್ಯೆ ಮೂರು ಪಟ್ಟು ಹೆಚ್ಚಳ

ಬೆಂಗಳೂರು:ಅ.16: ಕರ್ನಾಟಕದ ಡಾ. ಪುನೀತ್ ರಾಜ್‌ಕುಮಾರ್ ಹೃದಯಜ್ಯೋತಿಯೋಜನೆಯಡಿಯಲ್ಲಿ ದಾಖಲಾದ ಹೃದಯಾಘಾತಕ್ಕೆ ಸಂಬಂಧಿಸಿದ ಸಾವುಗಳು ಬಹುತೇಕ ಮೂರು ಪಟ್ಟು ಹೆಚ್ಚಾಗಿದ್ದು, 2023-24ರಲ್ಲಿ 229 ರಿಂದ 2024-25ರಲ್ಲಿ 608 ಕ್ಕೆ ಏರಿಕೆಯಾಗಿದೆ ಎಂದು ರಾಜ್ಯ ಆರೋಗ್ಯ ಇಲಾಖೆಯ ಅಂಕಿಅಂಶಗಳು ತಿಳಿಸಿವೆ.

ಕಳೆದ ಎರಡು ವರ್ಷಗಳಿಂದ ನಿರ್ಣಾಯಕ ಇಸಿಜಿ ಸ್ಕ್ರೀನಿಂಗ್‌ಗಳ ಸಂಖ್ಯೆಯೂ ಸುಮಾರು ಮೂರು ಪಟ್ಟು ಹೆಚ್ಚಾಗಿದೆ. 2,489 ರಿಂದ 6,767 ಕ್ಕೆ ಏರಿಕೆಯಾಗಿದೆ. ಪ್ರಸ್ತುತ ನಡೆಯುತ್ತಿರುವ

ಮುಂಗಾರು ಅಧಿವೇಶನದಲ್ಲಿ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಈ ಆಘಾತಕಾರಿ ಅಂಕಿಅಂಶಗಳನ್ನು ಪ್ರಶ್ನೆಯೊಂದಕ್ಕೆ ಉತ್ತರವಾಗಿ ನೀಡಿದ್ದಾರೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.